ಸಂಪುಟ: 05 ಸಂಚಿಕೆ: 98 ಪುಟಗಳು: 08 ಶನಿವಾರ 21 ಜೂನ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ನಿಸ್ವಾರ್ಥ ಮತ್ತು ಸಮರ್ಥ ಕೆಲಸವನ್ನು ಮಾಡುವವರೆಲ್ಲರೂ ನಿಜವಾದ ಅನ್ವೇಷಕರಾಗಿರುತ್ತಾರೆ. ನೀವು ಮಾಡುವ ಸೇವೆ ಯಾವಾಗಲೂ ನಿಸ್ವಾರ್ಥತೆಯನ್ನು ಹೊಂದಿರಲಿ.

## ಅನುಮತಿ ನಿರಾಕರಿಸಿದ್ದಕ್ಕೆ ವಿವರಣೆ ನೀಡಿ: ಪ್ರಿಯಾಂಕ್ ಪತ್ರ

• ಉದಯವಾಹಿನಿ, ಬೆಂಗಳೂರು

ಅಮೆರಿಕಕ್ಕೆ ಅಧಿಕೃತ ಭೇಟಿಗೆ ಅನುಮತಿಯನ್ನು ಏಕೆ ನಿರಾಕರಿಸಲಾಯಿತು ಎಂಬುದಕ್ಕೆ ವಿವರಣೆ ನೀಡಿ ಎಂದು ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಅವರು ವಿದೇಶಾಂಗ ವ್ಯವಹಾರಗಳ ಸಚಿವ ಎಸ್. ಜೈಶಂಕರ್ ಅವರಿಗೆ ಪತ್ರ ಬರೆದಿದ್ದಾರೆ. ಅಮೆರಿಕದ ಬಾಸ್ಟನ್ ಮತ್ತು ಸ್ಯಾನ್ ಫ್ರಾನ್ಸಿಸ್ಕೊದಲ್ಲಿ ನಡೆದ ಎರಡು ತಂತ್ರಜ್ಞಾನ ಶೃಂಗಸಭೆಯಲ್ಲಿ ನಾನು ಕರ್ನಾಟಕ ಸರ್ಕಾರ ಮತ್ತು ಸಂಬಂಧಿತ ಇಲಾಖೆಯ ಸಚಿವರ ಮಟ್ಟದ ಪ್ರತಿನಿಧಿಯಾಗಿ ಭಾಗಿಯಾಗಬೇಕಿತ್ತು. ಇಲ್ಲಿ ವಿದೇಶಾಂಗ ಸಚಿವಾಲಯವು ಯಾವುದೇ ಸ್ಪಷ್ಟ ಕಾರಣ ನೀಡದೆ ಅನುಮತಿ ನಿರಾಕರಿಸಿದ್ದರಿಂದ ಅಂತಹ ಅವಕಾಶ ತಪ್ಪಿದೆ ಎಂದು ಅವರು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ತಂತ್ರಜ್ಞಾನ ಕ್ಷೇತ್ರದಲ್ಲಿ ಕರ್ನಾಟಕವು ಭಾರತಕ್ಕೆ ಮಾತ್ರವಲ್ಲ, ಆಗ್ನೇಯ ಏಷ್ಯಾಕ್ಕೇ ಕೇಂದ್ರ ಸ್ಥಾನದಲ್ಲಿದೆ. ಅಮೆರಿಕದಲ್ಲಿ ನಡೆದ ಆ ಎರಡು ತಂತ್ರಜ್ಞಾನ ಶೃಂಗಸಭೆಗಳಲ್ಲಿ ಭಾಗಿಯಾಗಿ ರಾಜ್ಯಕ್ಕೆ ಬಂಡವಾಳ ಆಕರ್ಷಣೆ, ಸಹಯೋಗ ಕುರಿತ ಸಾಧ್ಯತೆಗಳ ಪರಿಶೀಲನೆ ನಡೆಸುವುದು ಈ ಪ್ರವಾಸದ ಗುರಿಯಾಗಿತ್ತು ಎಂದಿದ್ದಾರೆ.

## ಮತ್ತೆ ಭಿನ್ನಮತ: ಅತೃಪ್ತರ ಸಭೆಗೆ ಹೋಗಿ ಇಕ್ಕಟ್ಟಿಗೆ ಸಿಲುಕಿದ ಸೋಮಣ್ಣ

• ಉದಯವಾಹಿನಿ, ಬೆಂಗಳೂರು

ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ವಿರುದ್ಧ ಸಮರ ಸಾರಿರುವ ಅತೃಪ್ತರ ಬಣ ಕೇಂದ್ರ ಗೃಹ ಸಚಿವ ಅಮಿತ್ ಶಾ ನಗರಕ್ಕೆ ಭೇಟಿ ನೀಡಿದ ಸಂದರ್ಭದಲ್ಲೇ ನಡೆಸಿದ ಸಭೆಯಲ್ಲಿ ಕೇಂದ್ರ ಸಚಿವ ವಿ.ಸೋಮಣ್ಣ ಭಾಗಿಯಾಗುವ ಮೂಲಕ ಇಕ್ಕಟ್ಟಿಗೆ ಸಿಲುಕಿದ್ದಾರೆ. ಈ ಕುರಿತು ಸ್ಪಷ್ಟನೆ ನೀಡಿರುವ ಸೋಮಣ್ಣ ಅವರು ಸಿದ್ದೇಶ್ವರ ಅವರು ಪಕ್ಷದ ಹಿರಿಯ ನಾಯಕರು. ಅವರ ಮನೆಯಲ್ಲಿ ಜೂನ್ 5ರಂದು ಮದುವೆ ಇತ್ತು. ಆಗ ನಾನು ಜಮ್ಮುವಿನಲ್ಲಿದ್ದ ಕಾರಣ ಮದುವೆಗೆ ಬರಲಿಲ್ಲ. ನಿನ್ನೆ ರಾತ್ರಿ ಹೋಗಿದ್ದೆ. ನಾನು ಪಕ್ಷದ ಶಿಸ್ತಿನ ಸಿಪಾಯಿ. ಈ ಭೇಟಿಯ ಬಗ್ಗೆ ಅಪಾರ್ಥ ಕಲ್ಪಿಸಬೇಕಾಗಿಲ್ಲ ಎಂದು ಹೇಳಿದರು. ಮಾಜಿ ಕೇಂದ್ರ ಸಚಿವ ಜಿ.ಎಂ.ಸಿದ್ದೇಶ್ವರ ಅವರ ನಿವಾಸದಲ್ಲಿ ರಾತ್ರಿ ಶಾಸಕ ರಮೇಶ ಜಾರಕಿಹೊಳಿ ನೇತೃತ್ವದಲ್ಲಿ ಅತೃಪ್ತರ ಸಭೆ ನಡೆಯಿತು. ರಾಜ್ಯ ಘಟಕದ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಸಬೇಕು ಮತ್ತು ಯಡಿಯೂರಪ್ಪ ಕುಟುಂಬದವರನ್ನು ಬಿಟ್ಟು ಬೇರೊಬ್ಬರನ್ನು ಅಧ್ಯಕ್ಷರನ್ನಾಗಿ ಮಾಡಬೇಕು ಎಂಬ ಸಂದೇಶವನ್ನು ರವಾನಿಸುವ ಪ್ರಯತ್ನ ನಡೆಯಿತು ಎಂದು ಮೂಲಗಳು ತಿಳಿಸಿವೆ.

## ಛಲವಾದಿ, ಸಿ.ಟಿ.ರವಿ ವಿರುದ್ಧದ ತನಿಖೆಗೆ ಹೈಕೋರ್ಟ್ ತಡೆ

• ಉದಯವಾಹಿನಿ, ಬೆಂಗಳೂರು

ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆಗೆ ಆಗ್ರಹಿಸಿ ರಸ್ತೆಯಲ್ಲಿ ಪ್ರತಿಭಟನೆ ನಡೆಸಿ ಸಾರ್ವಜನಿಕರ ಸಂಚಾರಕ್ಕೆ ಅಡ್ಡಿಪಡಿಸಿದ ಮತ್ತು ನಗರದ ಸೌಂದರ್ಯಕ್ಕೆ ಧಕ್ಕೆ ತಂದ ಆರೋಪದಡಿ ವಿಧಾನ ಪರಿಷತ್‌ನಲ್ಲಿ ವಿರೋಧ ಪಕ್ಷದ ನಾಯಕರಾಗಿರುವ ಛಲವಾದಿ ನಾರಾಯಣ ಸ್ವಾಮಿ, ಮಾಜಿ ಸಚಿವ ಸಿ.ಟಿ.ರವಿ ಮತ್ತಿತರ ಬಿಜೆಪಿ ನಾಯಕರ ವಿರುದ್ಧದ ತನಿಖೆಗೆ ಹೈಕೋರ್ಟ್ ತಡೆ ನೀಡಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ನಮ್ಮ ವಿರುದ್ಧ ಹೈಗ್ರೌಂಡ್ಸ್ ಠಾಣೆ ಪೊಲೀಸರು ದಾಖಲಿಸಿರುವ ಎಫ್‌ಐಆರ್ ಮತ್ತು ನಗರದ ಜನಪ್ರತಿನಿಧಿಗಳ ಮ್ಯಾಜಿಸ್ಟ್ರೇಟ್ ನ್ಯಾಯಾಲಯದ ವಿಚಾರಣೆ ರದ್ದುಪಡಿಸಬೇಕು ಎಂದು ಕೋರಲಾದ ಅರ್ಜಿಯನ್ನು ನ್ಯಾಯಮೂರ್ತಿ ಎಸ್.ಆರ್.ಕೃಷ್ಣಕುಮಾರ್ ಅವರಿದ್ದ ಏಕಸದಸ್ಯ ನ್ಯಾಯಪೀಠ ಶುಕ್ರವಾರ ವಿಚಾರಣೆ ನಡೆಸಿತು. ಅರ್ಜಿದಾರರ ಪರ ಹೈಕೋರ್ಟ್ ವಕೀಲ ಎಂ.ವಿನೋದ್ ಕುಮಾರ್ ಮಂಡಿಸಿದ ವಾದ ಪುರಸ್ಕರಿಸಿದ ನ್ಯಾಯಪೀಠ ಛಲವಾದಿ ನಾರಾಯಣ ಸ್ವಾಮಿ, ಸಿ.ಟಿ.ರವಿ, ರವಿಕುಮಾರ್ ಮತ್ತು ಉಮೇಶ್ ಶೆಟ್ಟಿ ಸೇರಿದಂತೆ ಒಟ್ಟು 12 ಮಂದಿ ವಿರುದ್ಧದ ಕ್ರಿಮಿನಲ್ ಪ್ರಕರಣದ ವಿಚಾರಣೆಗೆ ಮಧ್ಯಂತರ ತಡೆ ನೀಡಿ ಆದೇಶಿಸಿತು. ಪ್ರತಿವಾದಿ ಹೈಗ್ರೌಂಡ್ಸ್ ಠಾಣಾ ಪೊಲೀಸರಿಗೆ ನೋಟಿಸ್ ಜಾರಿಗೊಳಿಸಲು ಆದೇಶಿಸಿ ವಿಚಾರಣೆ ಮುಂದೂಡಲಾಗಿದೆ.



# ಬಯಲಾಯ್ತು ಜಮೀರ್ ಆಟ

# ಪಾಟೀಲ್ ಆಡಿಯೋ ಸ್ಫೋಟ

**ಸರ್ಕಾರಕ್ಕೆ ತೀವ್ರ ಮುಜುಗರ**



• ಉದಯವಾಹಿನಿ, ಬೆಂಗಳೂರು

ರಾಜೀವ್ ಗಾಂಧಿ ಹೌಸಿಂಗ್ ಕಾರ್ಪೊರೇಷನ್ ನಲ್ಲಿ ಹಗರಣ ಆಗಿದೆ ಎಂಬ ವಿಚಾರವಾಗಿ ಕಾಂಗ್ರೆಸ್ ಶಾಸಕ ಬಿಆರ್ ಪಾಟೀಲ್ ಆಡಿಯೋ ಬಾಂಬ್ ರಾಜ್ಯ ರಾಜಕೀಯದಲ್ಲಿ ಅಲ್ಲೋಲ ಕಲ್ಲೋಲ ಸೃಷ್ಟಿಸಿದೆ. ಸಚಿವ ಜಮೀರ್ ಅಹ್ಮದ್ ಖಾನ್ ಅವರ ಆಪ್ತ ಕಾರ್ಯದರ್ಶಿ ಜೊತೆಗೆ ನಡೆಸಿದ ಫೋನ್ ಸಂಭಾಷಣೆಯ ಆಡಿಯೋ ಲೀಕ್ ಆಗಿದ್ದು, ರಾಜ್ಯ ಸರ್ಕಾರಕ್ಕೆ ತೀವ್ರ ಮುಜುಗರ ಉಂಟು ಮಾಡಿದೆ. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಹೈಕಮಾಂಡ್ ವರದಿ ಕೇಳಿದೆ ಎಂಬ ಮಾಹಿತಿ ಇದೆ.

**ರಾಜೀವ್ ಗಾಂಧಿ ಹೌಸಿಂಗ್ ಕಾರ್ಪೊರೇಷನ್‌ನಲ್ಲಿ ಹಗರಣ ಆರೋಪ**

ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರು ವಸತಿ ಇಲಾಖೆಯ ವಿರುದ್ಧದ ಆರೋಪದ ವಿಚಾರವಾಗಿ ಮಾಹಿತಿ ಕೋರಿದ್ದಾರೆ. ಅಷ್ಟೇ ಅಲ್ಲದೆ, ಶಾಸಕ ಬಿ.ಆರ್ ಪಾಟೀಲ್ ಬಗ್ಗೆಯೂ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಇಂತಹ ವಿಚಾರವನ್ನ ಪಕ್ಷದ ಗಮನಕ್ಕೆ ತರದೇ ಸಾರ್ವಜನಿಕ ವಲಯದಲ್ಲಿ ಹರಿಬಿಟ್ಟಿದ್ದಕ್ಕೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ ಎಂದು ತಿಳಿದುಬಂದಿದೆ. ಪ್ರಕರಣದ ಬಗ್ಗೆ ಸಂಪೂರ್ಣ ವಿವರವನ್ನು ಪಡೆದುಕೊಂಡಿದ್ದಾರೆ ಎನ್ನಲಾಗಿದೆ. 'ಲಂಚ ಕೊಟ್ಟವರಿಗೆ ಮಾತ್ರ ವಸತಿ ನಿಗಮದಲ್ಲಿ ಮನೆಗಳನ್ನ ಮಂಜೂರು ಮಾಡಲಾಗಿದೆ' ಎಂದು ಆಳಂದ ಶಾಸಕ ಬಿ.ಆರ್ ಪಾಟೀಲ್ ಮಾತನಾಡಿದ್ದಾರೆ ಎನ್ನಲಾಗಿರುವ ಆಡಿಯೋ ವೈರಲ್ ಆಗಿದೆ. ಇದರಿಂದ ಮತ್ತೊಮ್ಮೆ ಸರ್ಕಾರಕ್ಕೆ ಮುಜುಗರ ಆಗುವಂತಾಗಿದೆ. ತಮ್ಮದೇ ಸರ್ಕಾರ ಹಾಗೂ ಸಚಿವರ ಮೇಲೆ ಸಿಎಂ ಸಿದ್ದರಾಮಯ್ಯ ಅವರ ಆಪ್ತರೇ ಆಗಿರುವ ಶಾಸಕ ಬಿಆರ್ ಪಾಟೀಲ್ ಆರೋಪ ಮಾಡಿದ್ದು, ಭಾರೀ ಸುದ್ದಿ ಆಗಿದೆ.

**ಶಾಲಿನಿ ರಜನೀಶ್ ಗರಂ:** ಮನೆ ಹಂಚಿಕೆಯಲ್ಲಿ ಭ್ರಷ್ಟಚಾರ ಆರೋಪ ಹಿನ್ನೆಲೆ ಸಚಿವ ಜಮೀರ್ ಅಹಮದ್ ಆಪ್ತ ಕಾರ್ಯದರ್ಶಿ ಮೇಲೆ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಗರಂ ಆಗಿದ್ದು, ಆರೋಪದ ಬಗ್ಗೆ ಲಿಖಿತ ರೂಪದಲ್ಲಿ ವರದಿ ನೀಡಲು ತಿಳಿಸಿದ್ದಾರೆ ಎನ್ನಲಾಗ್ತಿದೆ.

**ಬಿಆರ್ ಪಾಟೀಲ್‌ಗೆ ಬುಲಾವ್:** ಆಡಿಯೋ ವೈರಲ್ ಆಗ್ತಿದ್ದಂತೆ ಗರಂ ಆಗಿರುವ ಸಿಎಂ ಸಿದ್ದರಾಮಯ್ಯ, ಶಾಸಕ ಬಿಆರ್ ಪಾಟೀಲ್‌ಗೆ ಬುಲಾವ್ ನೀಡಲಾಗಿದೆ ಎನ್ನಲಾಗ್ತಿದೆ. ಮುಖ್ಯಮಂತ್ರಿ ಭೇಟಿಯಾಗಿ ಬಿಆರ್ ಪಾಟೀಲ್ ವಿವರಣೆ ನೀಡಲಿದ್ದಾರೆ. ಇತ್ತ ಸಚಿವ ಜಮೀರ್ ಇಲಾಖೆ ಮೇಲೆ ಆರೋಪ ಕೇಳಿಬಂದಿದ್ದು, ಸಚಿವರು ಕೂಡ ಈ ಬಗ್ಗೆ ಪ್ರತಿಕ್ರಿಯಿಸಿದ್ದಾರೆ.

**ಕಾಂಗ್ರೆಸ್ ಹೈಕಮಾಂಡ್ ಅಲರ್ಟ್:** ವಸತಿ ಸಚಿವ ಜಮೀರ್ ಅಹಮದ್, ಇಲಾಖೆ ಅಧಿಕಾರಿಗಳು, ಆಪ್ತ ಕಾರ್ಯದರ್ಶಿ ಸರ್ಫರಾಜ್ ಖಾನ್ ಬಗ್ಗೆ ರಹಸ್ಯವಾಗಿ ಮಾಹಿತಿ ಪಡೆಯುತ್ತಿರುವ ಉಸ್ತುವಾರಿ ಸುರ್ಜೇವಾಲ ಅವರು ಆಡಿಯೋ ವಿವರಣೆ ಪಡೆದಿದ್ದಾರೆ ಎನ್ನಲಾಗ್ತಿದೆ. ಅಲ್ಪಸಂಖ್ಯಾತ ಇಲಾಖೆಯ ಯೋಜನೆಗಳಲ್ಲೂ ಕಮಿಷನ್ ಆರೋಪದ ಬಗ್ಗೆಯೂ ಸುರ್ಜೇವಾಲ ಮಾಹಿತಿ ಕಲೆ ಹಾಕುತ್ತಿದ್ದಾರೆ ಎನ್ನಲಾಗ್ತಿದೆ.

**ವಿಪಕ್ಷಗಳಿಗೆ ಹೊಸ ಅಸ್ತ್ರ**

ಇತ್ತ ಬಿ.ಆರ್.ಪಾಟೀಲ್ ಆಡಿಯೋ ವಿಪಕ್ಷಗಳಿಗೆ ಹೊಸ ಅಸ್ತ್ರವಾಗಿದ್ದು, ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಈ ಬಗ್ಗೆ ಮಾತಾಡಿದ ಕುಮಾರಸ್ವಾಮಿ ಆಡಿಯೋ ಲೀಕ್ ಆಗಿರೋದು ಆಶ್ಚರ್ಯನಾ ನಿರಂತರವಾಗಿ ನಡೀತಿದೆ. ಎಲ್ಲಾ ಇಲಾಖೆಯಲ್ಲೂ ನಡೀತಿದೆ ಎಂದಿದ್ದಾರೆ. ಬಿ.ಆರ್ ಪಾಟೀಲ್ ಅವರಂತಹ ಹಿರಿಯರೇ ಇದರ ಬಗ್ಗೆ ಮಾತಾಡಿದ್ದಾರೆ. ಈ ಸರ್ಕಾರದ ಭ್ರಷ್ಟಾಚಾರದ ವಿಚಾರ ಎಲ್ಲಾರಿಗೂ ಗೊತ್ತೇ ಇದೆ ಎಂದು ಕುಮಾರಸ್ವಾಮಿ ಕಿಡಿಕಾರಿದ್ದಾರೆ.

**ಆಡಿಯೋ ನಿಜ, ಲೀಕ್ ಮಾಡಿದ್ದು ಅನೈತಿಕ**

ದೂರವಾಣಿಯಲ್ಲಿ ಮಾತನಾಡಿದ್ದನ್ನು ಸೋರಿಕೆ ಮಾಡಿದ್ದು ಅನೈತಿಕವಾದದ್ದು. ಜನಪ್ರತಿನಿಧಿ ಎಂಬ ಕಾರಣಕ್ಕೆ ಮಾತನಾಡಿದ್ದೇನೆ. ಅವರೇ ಕರೆ ಮಾಡಿ ಆಡಿಯೋ ರೆಕಾರ್ಡ್ ಮಾಡಿ ಲೀಕ್ ಮಾಡಿದ್ದಾರೆ ಎಂದು ಸಚಿವ ಜಮೀರ್ ಅಹ್ಮದ್ ಖಾನ್ ಅವರ ಆಪ್ತ ಕಾರ್ಯದರ್ಶಿ ಸರ್ಫರಾಜ್ ಖಾನ್ ಹೇಳಿದ್ದಾರೆ. ಆ ಮೂಲಕ, ವೈರಲ್ ಆಗಿರುವ ಆಡಿಯೋ ಅಸಲಿ ಎಂದು ಅವರು ಒಪ್ಪಿಕೊಂಡಂತಾಗಿದೆ. ಹಣ ತೆಗೆದುಕೊಂಡು ಮನೆ ಹಂಚಿಕೆ ಮಾಡಿದ್ದರೆ ತಿಳಿಸಿ, ಅಂಥವರನ್ನು ಜೈಲಿಗೆ ಕಳುಹಿಸುತ್ತೇವೆ ಎಂದು ನಾನು ಸ್ಪಷ್ಟವಾಗಿ ಹೇಳಿದ್ದೇನೆ. ನನ್ನದು ಐಫೋನ್, ಇದರಲ್ಲಿ ರೆಕಾರ್ಡಿಂಗ್ ಮಾಡಿಕೊಳ್ಳಲು ಆಗುವುದಿಲ್ಲ. ಅವರೇ ರೆಕಾರ್ಡ್ ಮಾಡಿ ಲೀಕ್ ಮಾಡಿರುವುದು ಸಂಪೂರ್ಣ ಅನೈತಿಕ. ಸಚಿವ ಜಮೀರ್ ಸಲಹೆ ಪಡೆದು ಮುಂದಿನ ತೀರ್ಮಾನ ತೆಗೆದುಕೊಳ್ಳುತ್ತೇನೆ ಎಂದು ಸರ್ಫರಾಜ್ ಖಾನ್ ತಿಳಿಸಿದ್ದಾರೆ.

**ಸರ್ಕಾರದ ಬಳಿ ಮಾಹಿತಿ ಕೇಳಿದ ಹೈಕಮಾಂಡ್**



**ವಸತಿ ಇಲಾಖೆಯಲ್ಲಿ ಯಾರು ಲಂಚ ಕೇಳುತ್ತಿದ್ದಾರೆ ಎಂಬುದರ ಬಗ್ಗೆ ಬಿ.ಆರ್. ಪಾಟೀಲ್ ದೂರು ನೀಡಿದರೆ ಕ್ರಮ**

**ಬಿಆರ್ ಪಾಟೀಲ್ ದೂರು ನೀಡಿದ್ರೆ ಕ್ರಮ**

**ತೆಗೆದುಕೊಳ್ಳಲಾಗುವುದು ಎಂದು ಗೃಹ ಸಚಿವ ಪರಮೇಶ್ವರ್ ಪ್ರತಿಕ್ರಿಯಿಸಿದ್ದಾರೆ. ವಸತಿ ಇಲಾಖೆಯಿಂದ ಸರ್ಕಾರಿ ಮನೆಗಳನ್ನು ಪಡೆಯಲು ಲಂಚ ನೀಡಬೇಕು ಎಂಬ ಕಾಂಗ್ರೆಸ್ ಶಾಸಕ ಬಿ.ಆರ್. ಪಾಟೀಲ್ ಅವರದ್ದು ಎನ್ನಲಾದ ಆಡಿಯೋ ವೈರಲ್ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು ಬಿಆರ್ ಪಾಟೀಲರು ಯಾವ ಅರ್ಥದಲ್ಲಿ ಹೇಳಿದ್ದಾರೆ ಮತ್ತು ಭ್ರಷ್ಟಚಾರ ಆರೋಪವನ್ನ ನೇರವಾಗಿ ಹೇಳಿಲ್ಲ. ಯಾರು ಲಂಚ ಕೇಳ್ತಿದಾರೆ ಅಂತಾ ದೂರು ಕೊಟ್ಟರೆ ಕ್ರಮ ತೆಗೆದುಕೊಳ್ಳುತ್ತಾರೆ ಎಂದು ಹೇಳಿದರು.**

**ಆಡಿಯೋ ಸಂಭಾಷಣೆಯಲ್ಲೇನಿದೆ**

- ಸಚಿವ ಜಮೀರ್ ಅವರ ಆಪ್ತ ಕಾರ್ಯದರ್ಶಿಗೆ ಕರೆ ಮಾಡುವ ಬಿ.ಆರ್ ಪಾಟೀಲ್, 'ಹಣ ನೀಡಿದವರಿಗಷ್ಟೇ ಮನೆಗಳನ್ನು ಹಂಚಿಕೆ ಮಾಡಲಾಗುತ್ತಿದೆ. ನಮ್ಮ ಸರ್ಕಾರವನ್ನೇ ದೂರಲು ಬೇಸರವಾಗುತ್ತಿದೆ' ಎಂದು ಆರಂಭದಲ್ಲೇ ಅಸಮಾಧಾನ ವ್ಯಕ್ತಪಡಿಸುತ್ತಾರೆ.
- ಅದಕ್ಕೆ ಸರ್ಫರಾಜ್ ಖಾನ್ ಅವರು, 'ಯಾವ ಕ್ಷೇತ್ರದಲ್ಲಿ ಹೀಗೆ ಆಗಿದೆ ಮಾಹಿತಿ ಕೊಡಿ. ಕೂಡಲೇ ಅವರನ್ನು ಜೈಲಿಗೆ ಕಳುಹಿಸುತ್ತೇವೆ' ಎನ್ನುತ್ತಾರೆ.
- ಇದಕ್ಕೆ ವ್ಯಂಗ್ಯವಾಗಿ ನಗುವ ಬಿ.ಆರ್ ಪಾಟೀಲ್, 'ಆಳಂದ ಮತಕ್ಷೇತ್ರದ ಮುನ್ನಳ್ಳಿಯಲ್ಲಿ 200 ಮನೆ, ದರ್ಗಾ ಶಿರೂರದಲ್ಲಿ 100, ಧಂಗಾಪುರದಲ್ಲಿ 200, ಕವಲಗಾದಲ್ಲಿ 200, ಮಾಡಿಯಾಳದಲ್ಲಿ 200 ಮನೆಗಳು ಸೇರಿದಂತೆ ಒಟ್ಟು 950 ಮನೆಗಳನ್ನು ಲಂಚ ಪಡೆದು ಹಂಚಿಕೆ ಮಾಡಲಾಗಿದೆ. ಪಕ್ಕದ ಅಫಜಲಪುರ ಕ್ಷೇತ್ರದಲ್ಲಿಯೂ ಹಣ ಪಡೆದೇ ಮನೆಗಳನ್ನು ಹಂಚಿಕೆ ಮಾಡಲಾಗಿದೆ' ಎಂದು ಗಂಭೀರ ಆರೋಪ ಮಾಡಿದ್ದಾರೆ.
- 'ನಾನು ಕೊಟ್ಟ ಶಿಫಾರಸು ಪತ್ರಗಳನ್ನು ಪರಿಗಣನೆಗೆ ತೆಗೆದುಕೊಂಡಿಲ್ಲ. ಬದಲಾಗಿ, ಗ್ರಾಮ ಪಂಚಾಯಿತಿ ಅಧ್ಯಕ್ಷರು ನೀಡಿದ ಪಟ್ಟಿಗೆ ಅನುಮೋದನೆ ನೀಡಿದ್ದೀರಿ. ಶಾಸಕ ನೀಡಿದ ಪತ್ರಕ್ಕೆ ಬೆಲೆಯೇ ಇಲ್ಲವೇ' ಎಂದೂ ಖಾರವಾಗಿ ಪ್ರಶ್ನಿಸಿದ್ದಾರೆ.
- ಶಾಸಕರನ್ನು ಸಮಾಧಾನ ಮಾಡಲು ಯತ್ನಿಸಿದ ಸರ್ಫರಾಜ್ ಅವರು, 'ನೀವು ಯಾರ ಹೆಸರುಗಳನ್ನು ಶಿಫಾರಸು ಮಾಡಿದ್ದೀರೋ ಅವರ ಪಟ್ಟಿ ಕೊಡಿ ಸರ್. ಅವರಿಗೆ ಮಂಜೂರು ಮಾಡುತ್ತೇವೆ. ಹಣ ಪಡೆದು ಹಂಚಿಕೆ ಮಾಡಿದ್ದರೆ ಕ್ರಮ ತೆಗೆದುಕೊಳ್ಳುತ್ತೇವೆ' ಎಂದು ಭರವಸೆ ನೀಡುತ್ತಾರೆ.

## ನನಗೆ ಯಾವ ಅಧಿಕಾರವೂ ಬೇಡ, ಐಶ್ವರ್ಯವೂ ಬೇಡ

• ಉದಯವಾಹಿನಿ, ತುಮಕೂರು



ಮುಂದಿನ ದಿನಗಳಲ್ಲಿ ನನಗೆ ಯಾವ ಅಧಿಕಾರವೂ ಬೇಡ, ಐಶ್ವರ್ಯವೂ ಬೇಡ. ಜನ ನನ್ನ ಮೇಲೆ ಇಟ್ಟಿರುವ ಪ್ರೀತಿ, ವಿಶ್ವಾಸ ಉಳಿಸಿಕೊಂಡು ಹೋದರೆ ಸಾಕು ಎಂದು ಸಹಕಾರ ಸಚಿವ ಕೆ.ಎನ್. ರಾಜಣ್ಣ ಹೇಳಿದರು.

ತುಮಕೂರು ಕ್ಯಾತ್ಸಂದ್ರದ ಚಂದ್ರಮೌಳೀಶ್ವರ ದೇವಾಲಯಕ್ಕೆ ಶುಕ್ರವಾರ ತೆರಳುವ ವೇಳೆ ಮಾತನಾಡಿದ ಅವರು, ಎಲ್ಲಾ ವರ್ಗದ ಜನರು, ಎಲ್ಲಾ ಪಕ್ಷದವರು ಸೇರಿ ಈ ಸಮಾರಂಭದ ಯಶಸ್ಸಿಗೆ ಕೆಲಸ ಮಾಡುತ್ತಿದ್ದಾರೆ ಎಂದು ಕೇಳಿದ್ದೇನೆ. ಇದರಿಂದ ನನಗೆ ತುಂಬಾ ಸಂತೋಷವಾಗುತ್ತಿದೆ. ಮುಂದಿನ ದಿನಗಳಲ್ಲಿ ನನಗೆ ಯಾವ ಅಧಿಕಾರ, ಐಶ್ವರ್ಯ ಬೇಡ. ಜನರು ನನ್ನ ಮೇಲೆ ಇಟ್ಟಿರುವ ಪ್ರೀತಿ, ವಿಶ್ವಾಸವನ್ನು ನಾನು ಸಾಯುವವರೆಗೂ ಉಳಿಸಿಕೊಂಡು ಹೋದರೆ ಸಾಕು. ಮುಂದಿನ ಆಶಯ ಏನೂ ಇಲ್ಲ ಎಂದು ತಿಳಿಸಿದರು.

ರಾಜ್ಯಮಟ್ಟದಲ್ಲಿ ಕ್ಯಾತ್ಸಂದ್ರ ರಾಜಣ್ಣ ಎಂದು ಗುರುತಿಸುವ ಅವಕಾಶ ಕ್ಯಾತ್ಸಂದ್ರದ ಜನರಿಂದ ನನಗೆ ದೊರೆತಿದೆ. ನನ್ನ ಬೆಳವಣಿಗೆಗೆ ಕ್ಯಾತ್ಸಂದ್ರದ ಹಿರಿಯ ನಾಗರಿಕರು ಹೆಚ್ಚು ಆಶೀರ್ವಾದ ಮಾಡಿದ್ದಾರೆ. ಹಾಗಾಗಿ ನಾನು ಇಂದು ರಾಜಕೀಯ ರಂಗ, ಸಹಕಾರಿ ಕ್ಷೇತ್ರದಲ್ಲಿ ಹೆಚ್ಚು ಶ್ರಮ ವಹಿಸಿ ಕೆಲಸ ಮಾಡಲು ಸಾಧ್ಯವಾಗಿದೆ ಎಂದು ಹೇಳಿದ ಸಚಿವ ರಾಜಣ್ಣ, ನನಗೆ ಕೆ.ಎನ್. ನರಸಿಂಹಯ್ಯನವರು ಸೇರಿದಂತೆ ಬಹಳಷ್ಟು ಮಂದಿ ಹಿರಿಯರು ಮಾರ್ಗದರ್ಶನ ಮಾಡಿದ್ದಾರೆ. ಅವರೆಲ್ಲರ ಹಾದಿಯಲ್ಲಿ ನಾನು ಸಹ ನಡೆದು ಬಂದಿದ್ದೇನೆ ಎಂದರು.

**ವಿಶೇಷ ಪೂಜೆ ಸಲ್ಲಿಸಿದ ರಾಜಣ್ಣ ಕುಟುಂಬ** ಈ ಸಂದರ್ಭದಲ್ಲಿ ಚಂದ್ರಮೌಳೀಶ್ವರ ದೇವಾಲಯಕ್ಕೆ ಪತ್ನಿ ಶಾಂತಲಾ ರಾಜಣ್ಣ ಸೇರಿದಂತೆ ಕುಟುಂಬ ಸಮೇತರಾಗಿ ತೆರಳಿದ ಸಚಿವ ಕೆ.ಎನ್. ರಾಜಣ್ಣನವರು ವಿಶೇಷ ಪೂಜೆ ಸಲ್ಲಿಸಿ ಆಶೀರ್ವಾದ ಪಡೆದರು. ಇದೇ ವೇಳೆ ಸಹಕಾರ ಸಚಿವ ಕೆ.ಎನ್. ರಾಜಣ್ಣ ಅವರ 75ನೇ ಅಮೃತ ಮಹೋತ್ಸವದ ಅಂಗವಾಗಿ ಅಭಿಮಾನಿಗಳು ಕ್ಯಾತ್ಸಂದ್ರದ ಚಂದ್ರಮೌಳೀಶ್ವರ ಸ್ವಾಮಿ ದೇವಾಲಯ ಸೇರಿದಂತೆ 21 ದೇವಾಲಯಗಳಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ಈ ವೇಳೆ ಕಲ್ಲಹಳ್ಳಿ ದೇವರಾಜು, ಪಿ. ಮೂರ್ತಿ, ಜಿ.ಆರ್. ರವಿ, ಕೆ.ಜಿ. ಆನಂದ್, ಜಯರಾಮ್, ಇನಾಯತ್ ಉಲ್ಲಾ ಸೇರಿದಂತೆ ಅಭಿಮಾನಿಗಳು ಹಾಜರಿದ್ದರು.

**ರಾಜಣ್ಣ ಅವರ ಮೇಲೆ ಹನಿಟ್ರ್ಯಾಪ್‌ಗೆ ಸಂಚು**

**ಕೆಎನ್ ರಾಜಣ್ಣ ಹೀಗೆ ಹೇಳಿದ್ದೇಕೆ:** ಕೆಎನ್ ರಾಜಣ್ಣ ಅವರು ಕೆಪಿಸಿಸಿ ಅಧ್ಯಕ್ಷ ಸ್ಥಾನದ ಆಕಾಂಕ್ಷಿಯಾಗಿದ್ದರು. ಮಾತ್ರವಲ್ಲದೇ ಸಿಎಂ ಸ್ಥಾನದ ಆಕಾಂಕ್ಷಿಯೂ ಆಗಿದ್ದರು ಎನ್ನಲಾಗಿದೆ. ಇನ್ನು ಇತ್ತೀಚೆಗೆ ರಾಜಣ್ಣ ಅವರ ಮೇಲೆ ಹನಿಟ್ರ್ಯಾಪ್‌ಗೆ ಸಂಚು ನಡೆದಿತ್ತು. ಈ ಹಿನ್ನೆಲೆ ರಾಜಣ್ಣ ಬೇಸತ್ತು ಈ ರೀತಿ ಹೇಳಿರಬಹುದು ಎನ್ನಲಾಗುತ್ತಿದೆ.

## ನರೇಗಾ ಕೂಲಿ ಹಣಕ್ಕಾಗಿ ಹೀಗೊಂದು ವಂಚನೆ ಸೀರೆಯುಟ್ಟ ಪುರುಷನಿಗಾಗಿ ಹುಡುಕಾಟ!

• ಉದಯವಾಹಿನಿ, ಬಾಗಲಕೋಟೆ

ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯ ಕೂಲಿ ಹಣಕ್ಕಾಗಿ ಪುರುಷನೊಬ್ಬ ಸೀರೆಯುಟ್ಟು ವೆಬ್‌ನಲ್ಲಿ ಫೋಟೋ ಅಪ್‌ಲೋಡ್ ಮಾಡಿದ ಘಟನೆ ಜಿಲ್ಲೆಯ ಇಳಕಲ್ ತಾಲ್ಲೂಕಿನ ಚಿಕನಾಳ ಗ್ರಾಪಂ ವ್ಯಾಪ್ತಿಯಲ್ಲಿ ನಡೆದಿದೆ.

ಸಿದ್ದನಕೊಳ್ಳ ಗ್ರಾಮದ ಬ್ಲಾಕ್ ಪ್ಲಾಂಟೇಶನ್ ಕಾಮಗಾರಿಗಾಗಿ ಮಂಗಳಮ್ಮ ಆರಿ ಹೆಸರಿನಲ್ಲಿ ಜಾಬ್ ಕಾರ್ಡ್ ಮಾಡಲಾಗಿದೆ. ಈ ಮಂಗಳಮ್ಮನಿಗೆ ಇದೊಂದೆ ಕಾಮಗಾರಿಗಲ್ಲದೆ ಹಲವು ಕಾಮಗಾರಿಗಳಲ್ಲಿ ಕೂಲಿ ಕಾರ್ಯ ನಿರ್ವಹಿಸಿದ್ದಾಗಿ ಮನರೇಗಾ ವೆಬ್‌ನಲ್ಲಿ ನಮೂದಿಸಲಾಗಿದೆ.

ಆದರೆ, ಈ ಮಂಗಳಮ್ಮ ಯಾರು ಎಂದು ಹುಡುಕಾಡಿದಾಗ ಅಲ್ಲಿ ಸೀರೆಯುಟ್ಟ ಪುರುಷನೊಬ್ಬನ ಫೋಟೊ ಕಂಡು ಬಂದಿದೆ.

ಫೆ.3 ರಂದು ಈ ಫೋಟೊ ವೆಬ್‌ನಲ್ಲಿ ಅಪ್‌ಲೋಡ್ ಆಗಿದ್ದು, ಇದೀಗ ಯಾರೀ ಮಂಗಳಮ್ಮ ಇವಳ ಹೆಸರಿನಲ್ಲಿ ಸೀರೆಯುಟ್ಟುಕೊಂಡು ನಿಂತವರು ಯಾರು ಫೋಟೋ ಅಪ್‌ಲೋಡ್ ಮಾಡಿದವರಾರು ಹೀಗೆ ಹಲವು ಅನುಮಾನಗಳು ಹುಟ್ಟಿಕೊಂಡಿವೆ.

ಇದನ್ನು ಗಮನಿಸಿದರೆ ಅಧಿಕಾರಿಗಳು ಮನರೇಗಾ ನಿಯಮಗಳನ್ನು ಗಾಳಿಗೆ ತೂರಿದ್ದಾರೆಯೇ ಅಥವಾ ಯಾರದ್ದೋ ಹೆಸರಿನಲ್ಲಿ ಮತ್ಯಾರೋ ಸರಕಾರಿ ಯೋಜನೆಯ ದುರುಪಯೋಗ ಪಡೆದುಕೊಳ್ಳುತ್ತಿದ್ದಾರೆಯೇ ಎಂಬ ಸಂಶಯ ಮೂಡಿದೆ. ಮಂಗಳಮ್ಮ ಹೆಸರಿನಲ್ಲಿ 2021ರಲ್ಲೇ ಜಾಬ್‌ಕಾರ್ಡ್ ಸೃಷ್ಟಿಯಾಗಿದ್ದು ಅಲ್ಲಿಂದ ಇಲ್ಲಿವರೆಗೆ ಹಲವು ಕಾಮಗಾರಿಗಳಲ್ಲಿ ಕೂಲಿ ಕೆಲಸ ನಿರ್ವಹಿಸಿದ್ದಾರೆ ಎಂಬ ಮಾತು ಕೇಳಿ ಬಂದಿದೆ.

## ಐಶ್ವರ್ಯಾ ಗೌಡ, ಶಾಸಕ ವಿನಯ್ ಕುಲಕರ್ಣಿಗೆ ಇಡಿ ಶಾಕ್!

**● ಕೋಟಿ ಕೋಟಿ ಚಿನ್ನ ವಂಚನೆ ಆರೋಪ ● ವಾರಾಹಿ ವರ್ಲ್ಡ್ ಆಫ್ ಗೋಲ್ಡ್ ಜುವೆಲ್ಲರಿಯ ಚಿನ್ನ ವಂಚನೆ ಕೇಸ್**

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ಹಾಗೂ ವಂಚನೆ ಪ್ರಕರಣದ ಆರೋಪಿ ಐಶ್ವರ್ಯಗೌಡ ಅವರಿಗೆ ಜಾರಿ ನಿರ್ದೇಶನಾಲಯದ (ಇ.ಡಿ) ಅಧಿಕಾರಿಗಳು ಶಾಕ್ ಕೊಟ್ಟಿದ್ದಾರೆ.

ಅಕ್ರಮ ಹಣಕಾಸು ವ್ಯವಹಾರದ ಸಂಬಂಧ ಈ ಇಬ್ಬರ ಮನೆಗಳ ಮೇಲೆ ದಾಳಿ ನಡೆಸಿದ ಇ.ಡಿ ಅಧಿಕಾರಿಗಳು, ಐಶ್ವರ್ಯಗೌಡ ಅವರನ್ನು ವಶಕ್ಕೆ ತೆಗೆದುಕೊಂಡಿದ್ದಾರೆ.

ಬೆಂಗಳೂರಿನ ಡಾಲರ್ಸ್ ಕಾಲೊನಿಯಲ್ಲಿರುವ ವಿನಯ್ ಕುಲಕರ್ಣಿ ಅವರ ನಿವಾಸ, ರಾಜರಾಜೇಶ್ವರಿ ನಗರ ಮತ್ತು ಮಂಡ್ಯ ಜಿಲ್ಲೆ ಮಳವಳ್ಳಿ ತಾಲ್ಲೂಕಿನ ಕಿರುಗಾವಲು ಗ್ರಾಮದಲ್ಲಿರುವ ಐಶ್ವರ್ಯಗೌಡರ ಮನೆಗಳ ಮೇಲೆ ಇ.ಡಿ ಅಧಿಕಾರಿಗಳು ದಾಳಿ ಮಾಡಿದರು. ಐಶ್ವರ್ಯಗೌಡ ಅವರು ಶಾಸಕ ವಿನಯ್ ಕುಲಕರ್ಣಿ ಜತೆಗೆ ಹಣಕಾಸು ವ್ಯವಹಾರದ ನಂಟು ಹೊಂದಿರುವ ಶಂಕೆಯಿದೆ.

**ಅಕ್ರಮ ಹಣಕಾಸು ವ್ಯವಹಾರ**

**ನಸುಕಿನಲ್ಲೇ ದಾಳಿ:** ಚಿನ್ನ ವಂಚನೆ ಪ್ರಕರಣದಲ್ಲಿ ಐಶ್ವರ್ಯಗೌಡ ಅವರು ಕೋಟ್ಯಂತರ ರೂಪಾಯಿ ಬೇನಾಮಿ ವ್ಯವಹಾರ ನಡೆಸಿದ್ದಾರೆ ಎಂದು ಪೊಲೀಸರು, ಇ.ಡಿ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದರು.





ಈ ಮಾಹಿತಿ ಆಧರಿಸಿ ಇಸಿಐಆರ್ ದಾಖಲಿಸಿಕೊಂಡಿದ್ದ ಇ.ಡಿ ಅಧಿಕಾರಿಗಳು, ದಾಳಿಯ ಸುಳಿವನ್ನೂ ನೀಡದೆ ನಸುಕಿನಲ್ಲೇ ವಿನಯ್ ಕುಲಕರ್ಣಿ ಮತ್ತು ಐಶ್ವರ್ಯಗೌಡರ ಮನೆ ರೇಡ್ ಮಾಡಿ ಇಡೀ ದಿನ ಪರಿಶೀಲನೆ ನಡೆಸಿದರು.

**ವಿಚಾರಣೆಗೆ ಸಹಕರಿಸದ ಕಾರಣ ವಶಕ್ಕೆ:** ಸಂಪೂರ್ಣ ಸಿದ್ಧತೆಯೊಂದಿಗೆ ಕಾರ್ಯಾಚರಣೆ ನಡೆಸಿದ ಅಧಿಕಾರಿಗಳು ಐಶ್ವರ್ಯಗೌಡರ ಮನೆಯಲ್ಲಿ ಇಂಚಿಂಚೂ ಶೋಧ ನಡೆಸಿ, ಹಣಕಾಸು ವ್ಯವಹಾರಕ್ಕೆ ಸಂಬಂಧಪಟ್ಟ ದಾಖಲೆ ಪರಿಶೀಲನೆ ನಡೆಸಿದರು. ಐಶ್ವರ್ಯಗೌಡ ಮತ್ತು ಕುಟುಂಬ ಸದಸ್ಯರ ಬ್ಯಾಂಕ್ ಖಾತೆಗಳಲ್ಲಿನ ಹಣಕಾಸು ವ್ಯವಹಾರ, ಚರಾಸ್ತಿ ಹಾಗೂ ಸ್ಥಿರಾಸ್ತಿಯ ಮಾಹಿತಿ, ಬೇನಾಮಿಯಾಗಿ ಸಂಬಂಧಿಕರ ಹೆಸರಿನಲ್ಲಿ ಸಂಪಾದಿಸಿರುವ ಆಸ್ತಿಯ ಎಲ್ಲಾ ದಾಖಲೆ ಪತ್ರಗಳನ್ನು ಅಧಿಕಾರಿಗಳು ಜಪ್ತಿ ಮಾಡಿದರು. ಐಶ್ವರ್ಯಗೌಡ, ವಿಚಾರಣೆಗೆ ಸಹಕರಿಸದ ಕಾರಣ ಅಧಿಕಾರಿಗಳು ಅವರನ್ನು ವಶಕ್ಕೆ ತೆಗೆದುಕೊಂಡರು ಎಂದು ಗೊತ್ತಾಗಿದೆ.

ಐಶ್ವರ್ಯಗೌಡ ದಂಪತಿ ರಿಯಲ್ ಎಸ್ಟೇಟ್ ವ್ಯವಹಾರ, ಸಿಮೆಂಟ್ ಕಾರ್ಖಾನೆ ಸಹ ನಡೆಸುತ್ತಿದ್ದಾರೆ. ದಂಪತಿಯ ಆದಾಯ ಮೂಲದ ಬಗ್ಗೆ ಸಾಕಷ್ಟು ಅನುಮಾನಗಳಿವೆ.

ಐಶ್ವರ್ಯಗೌಡರ ವ್ಯವಹಾರದಲ್ಲಿ ಹಣದ ಅಕ್ರಮ ವರ್ಗಾವಣೆ ಕಂಡು ಬಂದ ಹಿನ್ನೆಲೆಯಲ್ಲಿ ದಾಳಿ ನಡೆಸಲಾಗಿದೆ ಎಂದು ಮೂಲಗಳು ಹೇಳಿವೆ.

**9.82 ಕೋಟಿ ರೂ. ವಂಚನೆಯ ಆರೋಪ**

ಐಶ್ವರ್ಯಗೌಡ ವಿರುದ್ಧ 9.82 ಕೋಟಿ ರೂ. ಮೌಲ್ಯದ ಚಿನ್ನಾಭರಣ ವಂಚನೆಯ ಆರೋಪವಿದೆ. ಅವರು ಮಾಜಿ ಸಂಸದ ಡಿ.ಕೆ. ಸುರೇಶ್‌ರ ಸಹೋದರಿ ಎಂದು ಹೇಳಿಕೊಂಡು ವಾರಾಹಿ ವರ್ಲ್ಡ್ ಆಫ್ ಗೋಲ್ಡ್ ಜ್ಯೂವೆಲರಿ ಶಾಪ್‌ನಿಂದ 9.82 ಕೋಟಿ ರೂ. ಮೌಲ್ಯದ 14 ಕೆ.ಜಿ. 660 ಗ್ರಾಂ ಆಭರಣಗಳನ್ನು ಸಾಲವಾಗಿ ಖರೀದಿಸಿ, ಮೋಸ ಮಾಡಿದ ಆರೋಪವಿದೆ. ಈ ಸಂಬಂಧ ವಾರಾಹಿ ಜ್ಯೂವೆಲರಿ ಶಾಪ್‌ನ ಮಾಲೀಕರಾದ ವನಿತಾ ಎಸ್.ಐತಾಳ್ ಅವರು ಚಂದ್ರಾ ಲೇಔಟ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಜತೆಗೆ, ಡಿ.ಕೆ.ಸುರೇಶ್ ಅವರು ನಗರ ಪೊಲೀಸ್ ಆಯುಕ್ತರಿಗೆ ದೂರು ಕೊಟ್ಟಿದ್ದರು. ಪ್ರಕರಣ ಸಂಬಂಧ ಚಂದ್ರಾ ಲೇಔಟ್ ಪೊಲೀಸರು ಐಶ್ವರ್ಯಗೌಡ ಮತ್ತು ಅವರ ಪತಿ ಹರೀಶ್‌ರನ್ನು ಬಂಧಿಸಿದ್ದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹10,048/Gram24ct ₹9,210/Gram22ct ಬೆಳ್ಳಿ: ₹110.00/Gram

# ಬಿಜೆಪಿ ರೆಬೆಲ್ ಸಭೆಯಲ್ಲಿ ಕೇಂದ್ರ ಸಚಿವರು ಭಾಗಿ

## ಬಿಜೆಪಿಯ ಎಲ್ಲಾ 39 ಜಿಲ್ಲೆಗಳಿಗೆ ಜಿಲ್ಲಾಧ್ಯಕ್ಷರ ನೇಮಕ, ಸಭೆಯಲ್ಲಿ ಕೇಂದ್ರ ಸಚಿವ ಸೋಮಣ್ಣ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಬಿಜೆಪಿ ಘಟಕಕ್ಕೆ ಯಡಿಯೂರಪ್ಪನವರ ಪುತ್ರ ಬಿವೈ ವಿಜಯೇಂದ್ರ ಅವರ ಹೆಸರೇ ಅಂತಿಮ ಎಂದು ಹೇಳಲಾಗುತ್ತಿತ್ತು. ಆದರೆ (ಜೂ. 19) ಮತ್ತೆ ಭಿನ್ನಮತೀಯರ ಗುಂಪಿನಲ್ಲಿ ಕಾಣಿಸಿಕೊಂಡ ನಾಯಕರು ಒಂದು ಕಡೆ ಸಭೆ ಸೇರಿದ್ದಾರೆ.

ಆ ಮೂಲಕ, ವಿಜಯೇಂದ್ರ ಹೆಸರು ಇನ್ನೂ ಫೈನಲ್ ಆಗಿಲ್ಲವೇ ಎನ್ನುವ ಚರ್ಚೆ ಆರಂಭವಾಗಲು ಕಾರಣರಾಗಿದ್ದಾರೆ.

ದಾವಣಗೆರೆಯ ಮಾಜಿ ಸಂಸದ ಜಿಎಂ ಸಿದ್ದೇಶ್ವರ ಅವರ ನಗರದ ಯುಬಿ ಸಿಟಿಯಲ್ಲಿನ ನಿವಾಸದಲ್ಲಿ ಹಲವು ನಾಯಕರು ಸಭೆ ಸೇರಿದ್ದರು. ಅದರಲ್ಲಿ ಕೇಂದ್ರ ಸಚಿವ ವಿ.ಸೋಮಣ್ಣ ಕೂಡಾ ಭಾಗಿಯಾಗಿದ್ದರು. ಈ ವಿದ್ಯಮಾನ ತೀವ್ರ ಕುತೂಹಲಕ್ಕೆ ಕಾರಣವಾಗಿದೆ. ಯಾಕೆಂದರೆ, ಅವರ ಹೆಸರೂ ಅಧ್ಯಕ್ಷ ಸ್ಥಾನಕ್ಕೆ ಕೇಳಿ ಬರುತ್ತಿದೆ. ಕರ್ನಾಟಕ ಬಿಜೆಪಿಯು ಎಲ್ಲಾ 39 (ಬಿಜೆಪಿಯ ಸಂಘಟನಾತ್ಮಕ ಜಿಲ್ಲೆಗಳು) ಜಿಲ್ಲೆಗಳಿಗೆ ಅಧ್ಯಕ್ಷರ ಹೆಸರನ್ನು ಅಂತಿಮಗೊಳಿಸಿ, ಘೋಷಣೆಯನ್ನೂ ಮಾಡಿಯಾಗಿದೆ. ಈ ಪೈಕಿ 34 ಅಧ್ಯಕ್ಷರು ವಿಜಯೇಂದ್ರ ಅವರ ಪರವಾಗಿದ್ದಾರೆ. ಮಾಸಾಂತ್ಯಕ್ಕೆ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ಬೆಂಗಳೂರಿಗೆ ಅಧಿಕೃತವಾಗಿ, ವಿಜಯೇಂದ್ರ ಅವರ ಹೆಸರನ್ನು ಪ್ರಕಟಿಸುತ್ತಾರೆ ಎಂದೆಲ್ಲಾ ಸುದ್ದಿಯಾಗಿತ್ತು.


ಉದಯವಾಹಿನಿ ಚಿತ್ರ

ಇದಕ್ಕೆ ವ್ಯತಿರಿಕ್ತ ಎನ್ನುವಂತೆ, ಬಿಜೆಪಿಯ ರೆಬೆಲ್ ನಾಯಕರು ಒಂದು ಕಡೆ ಸಭೆ ಸೇರಿದ್ದಾರೆ. ಇನ್ನೊಂದು ಕಡೆ ಬಿಜೆಪಿ ನಾಯಕರು ಮಾತೃ ಸಂಘಟನೆ ರಾಷ್ಟ್ರೀಯ ಸ್ವಯಂಸೇವಕ ಸಂಘದ ಕಚೇರಿ ಕೇಶವಕೃಪಾದಲ್ಲಿ ಸಭೆ ಸೇರಿದ್ದಾರೆ.

ರಾಜ್ಯದ ಬಿಜೆಪಿಯ ವಿದ್ಯಮಾನವನ್ನು ಅವಲೋಕಿಸುತ್ತಾ, ಅವಶ್ಯಕತೆ ಬಂದಾಗ ಕರೆದು ಬುದ್ದಿ ಹೇಳುವ ಕೆಲಸವನ್ನು ಸಹ ಕಾರ್ಯನಿರ್ವಾಹಕ ಸಿಆರ್ ಮುಕುಂದ್ ಮಾಡುತ್ತಾರೆ. ರಾಜ್ಯಾಧ್ಯಕ್ಷರ ಬದಲಾವಣೆಯೇ ಒಂದಂಶದ ಕಾರ್ಯಸೂಚಿ ಭಿನ್ನ ಗುಂಪಿನವರದ್ದಾಗಿದೆ. ನಮ್ಮ ಬೇಡಿಕೆ ಈಡೇರುವವರೆಗೆ ಪ್ರಯತ್ನ ನಡೆಯುತ್ತಲೇ ಇರುತ್ತದೆ ಎಂದು ಬಿಪಿ ಹರೀಶ್ ಹೇಳಿದ್ದಾರೆ.

ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ಹರೀಶ್ ಅವರನ್ನು ಕರೆದು ಮಾತನಾಡಿಸಿದ್ದಾರೆ. ಸಿದ್ದೇಶ್ವರ ನಿವಾಸದಲ್ಲಿನ ಸಭೆಯಲ್ಲಿ ರಮೇಶ್ ಜಾರಕಿಹೊಳಿ ಮತ್ತು ಕುಮಾರ್ ಬಂಗಾರಪ್ಪ ಕೂಡಾ ಭಾಗಿಯಾಗಿದ್ದರು. ಬಿಜೆಪಿ ಉಸ್ತುವಾರಿ ರಾಧಾ ಮೋಹನದಾಸ್ ಅಗರ್ವಾಲ್ ನೀಡಿದ್ದ ರಿಪೋರ್ಟ್‌ನಲ್ಲೂ ವಿಜಯೇಂದ್ರ ಹೆಸರು ಮೊದಲ ಸ್ಥಾನದಲ್ಲಿತ್ತು. ಕೇಶವಕೃಪಾದಲ್ಲಿ ನಡೆದ ಸಭೆಯಲ್ಲಿ ವಿಜಯೇಂದ್ರ, ಆರ್.ಅಶೋಕ್, ರವಿಕುಮಾರ್, ಸುನೀಲ್ ಕುಮಾರ್, ಸಿಟಿ ರವಿ ಭಾಗವಹಿಸಿದ್ದರು. ಎಲ್ಲರೂ ಮುನಿಸು ಬಿಟ್ಟು ಒಗ್ಗಟ್ಟಿನಿಂದ ಸಾಗಿ ಎನ್ನುವ ಸೂಚನೆ ಮುಕುಂದ್ ಅವರ ಕಡೆಯಿಂದ ಬಂದಿದೆ ಎಂದು ಹೇಳಲಾಗುತ್ತಿದೆ. ಬಿಜೆಪಿ ನಡೆಸಿದ್ದ ಆಂತರಿಕ ಸಮೀಕ್ಷೆಯಲ್ಲೂ ವಿಜಯೇಂದ್ರ ಅವರ ಹೆಸರು ಮಂಚೂಣಿಯಲ್ಲಿತ್ತು. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಹಿರಿಯ ನಾಯಕ ಮುರುಗೇಶ್ ನಿರಾಣಿ ಅವರನ್ನು ರಾಜ್ಯಾಧ್ಯಕ್ಷರನ್ನಾಗಿ ಮಾಡಲು ಬಯಸಿದ್ದರು.


ಇನ್ನೊಂದು ಕಡೆ, ಕೇಂದ್ರ ಸಚಿವ ವಿ.ಸೋಮಣ್ಣಗೂ, ರಾಜ್ಯಾಧ್ಯಕ್ಷ ಹುದ್ದೆ ನೀಡಲಾಗುವುದು ಎನ್ನುವ ಕಮಿಟ್ಮೆಂಟ್ ನೀಡಲಾಗಿತ್ತು ಎಂದೆಲ್ಲಾ ವರದಿಯಾಗಿತ್ತು. ಹಾಗಾಗಿ, ಈಗ ನಡೆಯುತ್ತಿರುವ ಬೆಳವಣಿಗೆಗಳು ಕುತೂಹಲಕ್ಕೆ ಕಾರಣವಾಗಿದೆ.

**ಹಲವು ನಾಯಕರು ಸಭೆ**

**ಸಂಘದ ಪ್ರಮುಖರು, ರಾಜ್ಯ ಬಿಜೆಪಿ ನಾಯಕರು ಸಭೆಯನ್ನು ನಡೆಸಿ, ಹಲವು ವಿಷಯಗಳನ್ನು ಚರ್ಚಿಸಿದ್ದಾರೆ ಎಂದು ಹೇಳಲಾಗುತ್ತಿದೆ. ಇದರ ಬೆನ್ನಲ್ಲೇ, ರಾಜ್ಯಾಧ್ಯಕ್ಷರ ಆಯ್ಕೆಗೆ ತೆರೆಮರೆಯಲ್ಲಿ ಸಿದ್ಧತೆ ಚುರುಕುಗೊಂಡಿದೆ. ಹಾಗಾಗಿ, ಈ ಸಭೆ ಮಹತ್ವ ಪಡೆದುಕೊಂಡಿದೆ. ಇನ್ನೊಂದು ಕಡೆ, ಸಿದ್ದೇಶ್ವರ ಅವರ ನಿವಾಸದಲ್ಲಿಯೂ ಸಭೆ ನಡೆದಿದೆ. ಸಿದ್ದೇಶ್ವರ ನಿವಾಸದಲ್ಲಿನ ಸಭೆಗೆ ಭಿನ್ನ ಕ್ಯಾಂಪಿನಲ್ಲಿರುವ ಬಿಪಿ ಹರೀಶ್ ಕೂಡಾ ಭಾಗಿಯಾಗಿದ್ದಾರೆ. ಕೇಂದ್ರ ಸಚಿವ ವಿ.ಸೋಮಣ್ಣ ಅವರ ಹೆಸರನ್ನು ರಾಜ್ಯಾಧ್ಯಕ್ಷ ಹುದ್ದೆಗೆ ನೇಮಿಸುವಂತೆ ಒತ್ತಡ ತರುವುದು ಒಂದು ಕಡೆ. ಇನ್ನೊಂದು ಕಡೆ, ಜೂನ್ 23 ಅಥವಾ ಜೂನ್ 24ರಂದು ದೆಹಲಿಗೆ ತೆರಳಿ ಸಂಬಂಧಪಟ್ಟವರನ್ನು ಭೇಟಿಯಾಗಲು ನಿರ್ಧರಿಸಿದ್ದಾರೆ.**

# ಆನಂದ ರಾಮಾಯಣ

• ಉದಯವಾಹಿನಿ, ಬೆಂಗಳೂರು



ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ವತಿಯಿಂದ ಜೂನ್ 21 ರಿಂದ 30ರ ವರೆಗೆ ಪ್ರತಿದಿನ ಸಂಜೆ 7-00ಕ್ಕೆ ಶ್ರೀ ಚಂದ್ರಶೇಖರ ಆಚಾರ್ಯರಿಂದ ಆನಂದ ರಾಮಾಯಣ ವಿಷಯವಾಗಿ ಧಾರ್ಮಿಕ ಪ್ರವಚನ ಏರ್ಪಡಿಸಿದೆ. ಸ್ಥಳ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಮತ್ತಿಕೆರೆ, ಬೆಂಗಳೂರು-560054

# ಟ್ರ್ಯಾಕ್ಟರ್ ಕದ್ದು ಜೈಲು ಸೇರಿದ್ರು, ರಿಲೀಸ್ ಆಗಿ ಕಾರು ಕಳ್ಳತನಕ್ಕಿಳಿದ್ರು

• ಉದಯವಾಹಿನಿ, ಬೆಂಗಳೂರು

ಓಮ್ನಿ ಕಾರುಗಳನ್ನೇ ಟಾರ್ಗೆಟ್ ಮಾಡಿ ಕಳ್ಳತನ ಮಾಡುತ್ತಿದ್ದ ಮೂವರು ಕಳ್ಳರನ್ನು ವಿದ್ಯಾರಣ್ಯಪುರ ಪೊಲೀಸರು ಬಂಧಿಸಿದ್ದಾರೆ. ಬಂಧಿತ ಆರೋಪಿಗಳನ್ನು ಉಮೇಶ್, ತಬ್ರೇಜ್, ಜಬೀರ್ ಖಾನ್ ಎಂದು ಗುರುತಿಸಲಾಗಿದೆ. ಕಳೆದ ಮೇ ತಿಂಗಳಿನಲ್ಲಿ ಆರೋಪಿಗಳು ವಿದ್ಯಾರಣ್ಯಪುರ ಠಾಣಾ ವ್ಯಾಪ್ತಿಯಲ್ಲಿ ಓಮ್ನಿ ಕಾರನ್ನು ಕಳ್ಳತನ ಮಾಡಿದ್ದರು. ಕಳ್ಳತನದ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿತ್ತು. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದ ವಿದ್ಯಾರಣ್ಯಪುರ ಪೊಲೀಸರು ಆರೋಪಿಗಳನ್ನ ಬಂಧಿಸಿ ತನಿಖೆ ನಡೆಸುತ್ತಿದ್ದಾರೆ. ಬಂಧಿತರಿಂದ ಪೊಲೀಸರು 12 ಲಕ್ಷ ರೂ. ಮೌಲ್ಯದ 6 ಓಮ್ನಿ ಕಾರುಗಳನ್ನು ಜಪ್ತಿ ಮಾಡಿದ್ದಾರೆ. **ಟ್ರ್ಯಾಕ್ಟರ್ ಕದ್ದು ಜೈಲು ಸೇರಿದ್ದ ಗ್ಯಾಂಗ್:** ಈ ಮೂವರನ್ನು 2020ರಲ್ಲಿ ಕಾಮಾಕ್ಷಿಪಾಳ್ಯ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಟ್ರ್ಯಾಕ್ಟರ್ ಕಳ್ಳತನ ಕೇಸ್‌ನಲ್ಲಿ ಬಂಧಿಸಲಾಗಿತ್ತು. ಜೈಲಿಂದ ಹೊರಬಂದ ಮೇಲೆ ಟ್ರ್ಯಾಕ್ಟರ್ ಬಿಟ್ಟು ಕಾರು ಕಳ್ಳತನಕ್ಕಿಳಿದಿದ್ದರು.

# ಮಾವಿಗೆ ಬೆಂಬೆಲ ಬೆಲೆ ಘೋಷಿಸಲು ಸಚಿವ ಕೆ.ಹೆಚ್.ಮುನಿಯಪ್ಪ ಒತ್ತಾಯ

• ಉದಯವಾಹಿನಿ, ಬೆಂಗಳೂರು

ಸರ್ಕಾರ ಮಾವಿಗೆ ಬೆಂಬಲ ಬೆಲೆ ಘೋಷಣೆ ಮಾಡಬೇಕೆಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಹೆಚ್.ಮುನಿಯಪ್ಪ ಸಚಿವ ಸಂಪುಟದ ಸಭೆಯಲ್ಲಿ ಒತ್ತಾಯಿಸಿದರು. ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಮಾವಿನ ಹಣ್ಣಿಗೆ ಏಷ್ಯಾ ಖಂಡದಲ್ಲೇ ಅತಿ ಹೆಚ್ಚು ಪ್ರಸಿದ್ದಿಯಾಗಿದ್ದು ರೈತರು ನಿರ್ದಿಷ್ಟ ಬೆಲೆ ಇಲ್ಲದೆ ಸಂಕಷ್ಟದಲ್ಲಿದ್ದಾರೆ. ಈಗಾಗಲೇ ನೆರೆಯ ಆಂಧ್ರಪ್ರದೇಶ ಸರ್ಕಾರವು ನಮ್ಮ ತೋತಾಪುರಿ ಮಾವಿನ ಹಣ್ಣಿನ ಮಾರಾಟಕ್ಕೆ ನಿರ್ಬಂಧ ವಿಧಿಸಿದ್ದು ಮಾವಿಗೆ ಬೆಲೆ ಇಲ್ಲದೆ ರೈತರು ಕಂಗಾಲಾಗಿದ್ದಾರೆ. ಈಗಾಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆಂಧ್ರಪ್ರದೇಶದ ಮುಖ್ಯ ಮಂತ್ರಿ ಚಂದ್ರಬಾಬು ನಾಯ್ಡು ಅವರಿಗೆ ಪತ್ರ ಬರೆದಿದ್ದಾರೆ. ನಮ್ಮ ಸರ್ಕಾರವು ರೈತರ ಪರವಾಗಿದ್ದು ರೈತರಿಗೆ ಸಹಕಾರಿಯಾಗಲು ಬೆಂಬೆಲ ಬೆಲೆಯನ್ನು ನಿಗದಿಪಡಿಸಲು ಮುಖ್ಯಮಂತ್ರಿಗಳಿಗೆ ಒತ್ತಡ ಹೇರಿದರು. ಈ ಸಂದರ್ಭದಲ್ಲಿ ಕೋಲಾರ ಜಿಲ್ಲಾ ಉಸ್ತುವಾರಿ ಸಚಿವ ಬೈರತಿ ಸುರೇಶ್, ಚಿಕ್ಕಬಳ್ಳಾಪುರ ಉಸ್ತುವಾರಿ ಸಚಿವ ಎಂ.ಸಿ ಸುಧಾಕರ್ ಹಾಗೂ ಕಂದಾಯ ಸಚಿವ ಕೃಷ್ಣ ಬೈರೇಗೌಡ ದನಿಗೂಡಿಸಿದರು.



# ಸಹೋದ್ಯೋಗಿ ಗುದದ್ವಾರಕ್ಕೆ ಕಂಪ್ರೆಸ್ಸರ್ ಗಾಳಿ ಬಿಟ್ಟ ಭೂಪ; ಸ್ಥಿತಿ ಗಂಭೀರ..!

• ಉದಯವಾಹಿನಿ, ಬೆಂಗಳೂರು

ನಿನಗೇಕೆ ಇಷ್ಟೊಂದು ವೇತನ ಎಂದು ಸಹೋದ್ಯೋಗಿಯೊಂದಿಗೆ ಜಗಳಕ್ಕಿಳಿದ ವ್ಯಕ್ತಿಯೊಬ್ಬ, ಆತನ ಒಳಹುಡುಪು ತೆಗೆದು ಏರ್‌ಗನ್‌ನಿಂದ ಗುದದ್ವಾರಕ್ಕೆ ಗಾಳಿ ಬಿಟ್ಟಿದ್ದು, ಪರಿಣಾಮ ವ್ಯಕ್ತಿ ಗಂಭೀರ ಸ್ಥಿತಿಗೆ ತಲುಪಿರುವ ಘಟನೆಯೊಂದು ಹಾರೋಹಳ್ಳಿ ಕೈಗಾರಿಕಾ ಪ್ರದೇಶದ ಸ್ಟವ್ ಕ್ರಾಫ್ಟ್ ಕಾರ್ಖಾನೆಯಲ್ಲಿ ನಡೆದಿದೆ. ಹಾಸನದ ಬೇಲೂರು ತಾಲ್ಲೂಕಿನ ಮೂಲದ ಹಾರೋಹಳ್ಳಿಯ ಎರೆಹಳ್ಳಿ ನಿವಾಸಿ ಎಂ.ಎಂ. ಪರಮೇಶ್ (35) ಸಂತ್ರಸ್ತ ವ್ಯಕ್ತಿಯಾಗಿದ್ದು, ಆರೋಪಿಯನ್ನು ರಾಮನಗರ ನಿವಾಸಿ ಗೋವಿಂದೇಗೌಡ (28)ಎಂದು ಗುರ್ತಿಸಲಾಗಿದೆ. ಘಟನೆಯು ಮೇ 23 ರಂದು ಸಂಜೆ 5 ಗಂಟೆ ಸುಮಾರಿಗೆ ನಡೆದಿದೆ. ತಡವಾಗಿ ಬೆಳಕಿಗೆ ಬಂದಿದೆ. ಘಟನೆ ನಡೆದ 25 ದಿನಗಳ ನಂತರ ಸೋಮವಾರ ದೂರು ದಾಖಲಾಗಿದೆ. ಪರಮೇಶ್, ಗೋವಿಂದೇ ಗೌಡ ಇಬ್ಬರು ಗುತ್ತಿಗೆ ಕಾರ್ಮಿಕರಾಗಿದ್ದು, ಪರಮೇಶ್ ಕಳೆದ 17 ವರ್ಷಗಳಿಂದ ಕಾರ್ಖಾನೆಯಲ್ಲಿ ಕೆಲಸ ಮಾಡುತ್ತಿದ್ದಾರೆ. ಕಾರ್ಖಾನೆ ಮಾಲೀಕರು ಇವರಿಗೆ 35,000 ರೂ. ವೇತನ ನೀಡುತ್ತಿದ್ದು, ಆರೋಪಿ 18,000 ರೂ. ಪಡೆಯುತ್ತಿದ್ದ. ಆರೋಪಿ ಪರಮೇಶ್ ಜೊತೆಗೆ ವೇತನ ತಾರತಮ್ಯ ವಿಚಾರವಾಗಿ ಆಗಾಗ್ಗೆ ಜಗಳಕ್ಕಿಳಿಯುತ್ತಿದ್ದ ಎನ್ನಲಾಗಿದೆ. ಮೇ.23 ರಂದು ಕೂಡ ಇದೇ ವಿಚಾರಕ್ಕೆ ಜಗಳ ಮಾಡಿದ್ದಾನೆ. ಈ ನಡುವೆ ಕೆಲಸ ನಂತರ ಪರಮೇಶ್ ಅವರು ಸ್ನಾನಕ್ಕೆ ತೆರಳಿದ್ದು, ಈ ವೇಳೆ ಒಳ ಉಡುಪು ತೆಗೆದು ಏರ್‌ಗನ್‌ನಿಂದ ಗುದದ್ವಾರಕ್ಕೆ ಗಾಳಿ ಬಿಟ್ಟಿದ್ದಾನೆ. ಇದರಿಂದ ಪರಮೇಶ್ ಅವರ ಹೊಟ್ಟೆ ಊದಿಕೊಂಡಿದ್ದು, ನೋವು ತಡೆಯಲು ಸಾಧ್ಯವಾಗದೆ ಕಿರುಚಿಕೊಂಡಿದ್ದಾರೆ. ಕೂಡಲೇ ಆರೋಪಿ ಗೋವಿಂದ ಸ್ಥಳದಿಂದ ಓಡಿ ಹೋಗಿದ್ದಾನೆ. ಬಳಿಕ ಕಾರ್ಖಾನೆಯ ಇತರೆ ಸಿಬ್ಬಂದಿಗಳು ಪರಮೇಶ್ ಅವರನ್ನು ಆಸ್ಪತ್ರೆಗೆ ದಾಖಲಿಸಿದ್ದಾರೆ. ಪರಮೇಶ್ ಅವರು 25 ದಿನಗಳ ಕಾಲ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದು, ಬಹು ಶಸ್ತ್ರಚಿಕಿತ್ಸೆಗಳಿಗೆ ಒಳಗಾಗಿದ್ದಾರೆ. ಎರಡು ತಿಂಗಳ ನಂತರ ಕರುಳಿಗೆ ಮತ್ತೊಂದು ಶಸ್ತ್ರಚಿಕಿತ್ಸೆ ಮಾಡಬೇಕಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ.

# ದುರ್ವರ್ತನೆ, ಪತನಗೊಳಿಸುವ ಬೆದರಿಕೆ

• ಉದಯವಾಹಿನಿ, ಬೆಂಗಳೂರು

ವಿಮಾನ ಸಿಬ್ಬಂದಿ ಜೊತೆಗೆ ಅನುಚಿತ ವರ್ತನೆ ತೋರಿದ, ವಿಮಾನ ಪತನಗೊಳಿಸುವ ಬೆದರಿಕೆ ಹಾಕಿದ ಹಿನ್ನೆಲೆಯಲ್ಲಿ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ (ಕೆಐಎ) ವೈದ್ಯೆಯೊಬ್ಬರನ್ನು ಏರ್ ಇಂಡಿಯಾ ವಿಮಾನದಿಂದ ಕೆಳಗಿಳಿಸಿದ ಘಟನೆ ನಡೆದಿದೆ.

ವೈದ್ಯೆ ಮೋಹನ್‌ಭಾಯಿ (36) ಎಂಬುವವರು ಬ್ಯಾಗ್ ಅನ್ನು ಸೀಟಿನ ಮೇಲಿನ ಕಂಪಾರ್ಟ್‌ಮೆಂಟ್‌ನಲ್ಲಿ ಇಡಲು ನಿರಾಕರಿಸಿದ್ದಲ್ಲದೆ, ವಿಮಾನದ ಸಿಬ್ಬಂದಿಯನ್ನು ನಿಂದಿಸಿ, ವಿಮಾನವನ್ನು ಪತನಗೊಳಿಸುವುದಾಗಿ ಬೆದರಿಕೆ ಹಾಕಿದ್ದಾರೆ. ಈ ಹಿನ್ನೆಲೆಯಲ್ಲಿ ಕೆಐಎಯ ಭದ್ರತಾ ವಿಭಾಗದ ಅಸೋಸಿಯೇಟ್ ಮ್ಯಾನೇಜರ್ ಅಗ್ನಿಮಿತ್ರ



ಉದಯವಾಹಿನಿ ಚಿತ್ರ

ಬಹಿನಿಪತಿ (39) ಸಂಜೆ 6.30 ರ ಸುಮಾರಿಗೆ ಬಿಐಎಎಲ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು, ಪೊಲೀಸರು ಮಹಿಳೆಯನ್ನು ಬಂಧಿಸಿ, ನ್ಯಾಯಾಲಯದ ಮುಂದೆ ಹಾಜರುಪಡಿಸಿದರು. ಬಳಿಕ ಮಹಿಳೆಗೆ ಜಾಮೀನು ನೀಡಲಾಯಿತು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಬೆಂಗಳೂರಿನಿಂದ ಸೂರತ್‌ಗೆ ತೆರಳುತ್ತಿದ್ದ ವಿಮಾನದಲ್ಲಿ ಈ ಘಟನೆ ನಡೆದಿದೆ.

**ಆಗಿದ್ದೇನು...?**

**ಏರ್ ಇಂಡಿಯಾದ IX2749 ವಿಮಾನದಲ್ಲಿ ಮೋಹನ್ ಭಾಯಿ ಪ್ರಯಾಣಿಸಲು ಸಿದ್ಧರಾಗಿದ್ದರು. ಆಯುರ್ವೇದ ವೈದ್ಯೆಯಾದ ಮೋಹನ್‌ಭಾಯಿ ಚೆಕ್-ಇನ್ ಕೌಂಟರ್ ಅನ್ನು ದಾಟಿದ್ದರು. ಎರಡು ಬ್ಯಾಗ್‌ಗಳನ್ನು ವಿಮಾನದಲ್ಲಿ ಕೊಂಡೊಯ್ಯಲು ಪಟ್ಟು ಹಿಡಿದಿದ್ದರು.**

ಮಹಿಳೆಯ ಅನುಚಿತ ವರ್ತನೆಯಿಂದಾಗಿ ಇತರೆ ಪ್ರಯಾಣಿಕರು 2 ಗಂಟೆಗಳ ವಿಳಂಬವನ್ನು ಎದುರಿಸಬೇಕಾಯಿತು.

# ಜಮೀರ್ ರಾಜೀನಾಮೆಗೆ ಶರವಣ ಆಗ್ರಹ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಕಾಂಗ್ರೆಸ್ ಸರ್ಕಾರದಲ್ಲಿ ಬ್ರಹ್ಮಾಂಡ ಭ್ರಷ್ಟಾಚಾರ ತಾಂಡವ ನೃತ್ಯ ಆಡುತ್ತಿದೆ ಎನ್ನುವುದಕ್ಕೆ ಹಿರಿಯ ಶಾಸಕ ಬಿ.ಆರ್.ಪಾಟೀಲ್ ತಮ್ಮದೇ ಸರ್ಕಾರದ ವಿರುದ್ಧ ಮಾಡಿರುವ ಸ್ಫೋಟಕ ಆರೋಪವೇ ಸಾಕ್ಷಿಯಾಗಿದೆ ಎಂದು ವಿಧಾನ ಪರಿಷತ್ ಹಿರಿಯ ಸದಸ್ಯ ಟಿ. ಎ.ಶರವಣ ಟೀಕಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ವಸತಿ ಇಲಾಖೆಯಲ್ಲಿ ಹೆಜ್ಜೆ ಹೆಜ್ಜೆಗೂ ಕಾಂಚಾಣವೇ ಮಾತಾಡಬೇಕು. ಹಣ ಇಲ್ಲದಿದ್ದರೆ ಅಲ್ಲಿ ಏನೇನೂ ಆಗುವುದಿಲ್ಲ ಎಂದು ಆಡಳಿತ ಪಕ್ಷದ ಶಾಸಕರೇ ಮಾಡಿರುವ ಆರೋಪದ ಹಿನ್ನೆಲೆಯಲ್ಲಿ ಜಮೀರ್ ಅಹಮದ್ ರಾಜೀನಾಮೆ ನೀಡಬೇಕು. ಇಲ್ಲದಿದ್ದರೆ ಸಿದ್ದರಾಮಯ್ಯರವರು ಅವರನ್ನು ಸಂಪುಟದಿಂದ ವಜಾ ಮಾಡಬೇಕು ಎಂದು ಒತ್ತಾಯಿಸಿದ್ದಾರೆ. ಸಚಿವ ಜಮೀರ್ ಅವರ ಆಪ್ತ ಕಾರ್ಯದರ್ಶಿ ಸರ್ಫರೋಜ್ ಖಾನ್ ಅವರೇ ಇಲಾಖೆಯಲ್ಲಿನ ಮನೆ ಹಂಚಿಕೆಗೆ ಲಂಚ ಕೊಡುವ ಪರಿಸ್ಥಿತಿ ಇದೆ ಎಂದು ಆಡಳಿತ ಪಕ್ಷದ ಶಾಸಕರಿಗೇ ಹೇಳಿರುವುದನ್ನು ನೋಡಿದರೆ ಆಡಳಿತ ವ್ಯವಸ್ಥೆ ಕುಲಗೆಟ್ಟು ಹೋಗಿರುವುದು ಅರ್ಥವಾಗುತ್ತದೆ. ಈ ಸರ್ಕಾರ ಅಧಿಕಾರದಲ್ಲಿ ಉಳಿಯುವ ನೈತಿಕತೆಯನ್ನು ಕಳೆದುಕೊಂಡಿದೆ ಎಂದು ಶರವಣ ಕಿಡಿಕಾರಿದ್ದಾರೆ.



ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತನಿಖೆಗೆ ಆದೇಶಿಸಬೇಕು. ತನಿಖೆಯ ಮೇಲೆ ಒತ್ತಡ ಹೇರಬಾರದು ಎನ್ನುವ ಕಾರಣಕ್ಕೆ ವಸತಿ ಮಂತ್ರಿ ಅಧಿಕಾರದಿಂದ ಕೆಳಗೆ ಇಳಿಯಬೇಕು ಎಂದು ಆಗ್ರಹಿಸಿದ್ದಾರೆ.

# ವಿಶೇಷ ಟೂರ್ ಜೊತೆಗೆ ಇದೀಗ ಪ್ರಯಾಣಿಕರ ಒತ್ತಾಯ

• ಉದಯವಾಹಿನಿ, ಬೆಂಗಳೂರು

ಈಗಾಗಲೇ ಅತ್ಯಂತ ಜನಪ್ರಿಯವಾಗಿರುವ ಬೆಂಗಳೂರು ಇಶಾ ಫೌಂಡೇಷನ್ ವಿಶೇಷ ಟೂರ್ ಜೊತೆಗೆ ಇದೀಗ ಪ್ರಯಾಣಿಕರ ಒತ್ತಾಯ ಮೇರೆಗೆ ಘಾಟಿ ಇಶಾ ಫೌಂಡೇಷನ್ ಹೆಸರಲ್ಲಿ ನೂತನ ಪ್ರವಾಸ ಮಾರ್ಗವನ್ನು ಪರಿಚಯಿಸಿದೆ.

ಹೌದು, ಪ್ರಯಾಣಿಕರ ಆದ್ಯತೆಯ ಮೇರೆಗೆ ಘಾಟಿ ಇಶಾ ಫೌಂಡೇಷನ್ ಪ್ರವಾಸದ ಹೊಸ ಪ್ಯಾಕೇಜ್‌ನ್ನು ಹೊರತಂದಿದೆ. ಈ ಪ್ಯಾಕೇಜ್ ಮೂಲಭೂತ ಸೌಲಭ್ಯ ಗಳೊಂದಿಗೆ ಪ್ರಮುಖ ದೇವಾಲಯಗಳ ದರ್ಶನ ಪಡೆಯುವ ಅವಕಾಶವನ್ನು ಒದಗಿಸುತ್ತದೆ. ನಗರವು ಐತಿಹಾಸಿಕ ಮಹತ್ವದ ಹಲವು ದೇವಾಲಯಗಳನ್ನು ಹೊಂದಿದ್ದು, ಭಕ್ತರ ಪ್ರವಾಸಿಗರ ಮಹತ್ವದ ಆರಾಧ್ಯ ಕೇಂದ್ರವಾಗಿದೆ. ದೇವಾಲಯಗಳು ಪ್ರಾಚೀನ ಶಿಲ್ಪಕಲೆಯ ಪ್ರತಿಬಿಂಬವಾಗಿದ್ದು, ಭಕ್ತಿ, ಶ್ರದ್ಧೆ, ಸಂಸ್ಕೃತಿಯ ಆಗರವಾಗಿದೆ. ಬೆಂಗಳೂರಿನ ಸುತ್ತಮುತ್ತಲಿನ ಪ್ರವಾಸಿ ಸ್ಥಳಗಳಿಗೆ ಭೇಟಿ ನೀಡುವ ಪ್ರವಾಸಿಗರ ಅನುಕೂಲಕ್ಕಾಗಿ ಬೆಂ.ಮ.ಸಾ.ಸಂಸ್ಥೆಯು ಹೆಚ್ಚುವರಿ ಸೇರ್ಪಡೆಯಾಗಿ ಘಾಟಿ ಇಶಾ ಫೌಂಡೇಷನ್ ಎಂಬ ಹೆಸರಿನಡಿಯಲ್ಲಿ ಜೂ.21ರಿಂದ ಜಾರಿಗೆ ಬರಲಿದೆ. ವಾರಾಂತ್ಯ ದಿನಗಳಾದ ಶನಿವಾರ, ಭಾನುವಾರ, ಸಾರ್ವತ್ರಿಕ ರಜೆ ದಿನಗಳಂದು ಹವಾನಿಯಂತ್ರಿತ ಬಸ್ಸಿನೊಂದಿಗೆ ಪ್ರವಾಸಿಗರಿಗೆ ಸಾರಿಗೆ ಸೌಲಭ್ಯವನ್ನು ಪ್ರಾರಂಭಿಸಲಾಗುತ್ತಿದೆ.

ಘಾಟಿ ಇಶಾ ಫೌಂಡೇಷನ್ ಪ್ಯಾಕೇಜ್‌ನ ವಾಹನವು ಕೆಂಪೇಗೌಡ ಬಸ್ ನಿಲ್ದಾಣದಿಂದ ಬೆಳಿಗ್ಗೆ 9 ಗಂಟೆಗೆ ಪ್ರಾರಂಭವಾಗುತ್ತದೆ. ಪ್ರವಾಸದ ಅವಧಿಯಲ್ಲಿ ನೆಲದಾಂಜನೇಯ ಸ್ವಾಮಿ ದೇವಸ್ಥಾನ, ಶ್ರೀ ಘಾಟಿ ಸುಬ್ರಹ್ಮಣ್ಯಸ್ವಾಮಿ ದೇವಸ್ಥಾನ, ಜ್ಞಾನತೀರ್ಥ ಲಿಂಗ ಮುದ್ದೇನಹಳ್ಳಿ, ಶ್ರೀ ದಕ್ಷಿಣ ಕಾಶಿ ಪಂಚನಂದಿ ಕ್ಷೇತ್ರ ಪಾಪಾಘ್ನಿ ಮಠ ಸ್ಕಂದಗಿರಿ, ಕಲ್ಯಾಣಿ ಕಾರಂಜಿ ಬಳಿಕ ಊಟ ವಿರಾಮ, ಇಶಾ ಫೌಂಡೇಷನ್. ಸದರಿ ವಾಹನವು ಕೆಂಪೇಗೌಡ ಬಸ್ ನಿಲ್ದಾಣಕ್ಕೆ ಸಂಜೆ 7ಗಂಟೆಗೆ ಹಿಂದಿರುಗುತ್ತದೆ. ಒಟ್ಟು ಪ್ರಯಾಣ ದರ ಟೋಲ್+ಜಿಎಸ್ಟಿ ಸೇರಿ ಪ್ರತಿ ಆಸನಕ್ಕೆ 600 ರೂ. ನಿಗದಿಪಡಿಸಲಾದೆ.


ಉದಯವಾಹಿನಿ ಚಿತ್ರ

**ಹೆಚ್ಚಿನ ಮಾಹಿತಿಗಾಗಿ www.mybmtc.com & www.ksrtc.in ಸಂಪರ್ಕಿಸುವುದು. ಬೆ.ಮ.ಸಾ.ಸಂಸ್ಥೆ ವತಿಯಿಂದ ಪರಿಚಯಿಸಿರುವ ಬೆಂಗಳೂರು ದರ್ಶಿನಿ ರೌಂಡ್ಸ್ ಇದು ಬೆಂಗಳೂರಿನ ಪ್ರಮುಖ ಪ್ರವಾಸಿ ಸ್ಥಳಗಳ ದರ್ಶಿನಿಯಾಗಿದ್ದು, ಬೆಂಗಳೂರು-ಇಶಾ ಫೌಂಡೇಶನ್ ವಿಶೇಷ ಪ್ಯಾಕೇಜ್ ಟೂರ್‌ನ್ನು ಯಶಸ್ವಿಯಾಗಿ ಒಂದು ವರ್ಷ ಪೂರ್ಣಗೊಳಿಸಿದೆ. ಈವರೆಗೆ 50,000ಕ್ಕೂ ಹೆಚ್ಚಿನ ಪ್ರಯಾಣಿಕರು ಪ್ರವಾಸಿ ಸ್ಥಳಗಳನ್ನು ವೀಕ್ಷಿಸಿದ್ದಾರೆ.**

ಜೂ.21ರಿಂದ ಬನಶಂಕರಿ ಟಿಟಿಎಂಸಿಯಿಂದ 1A ಸೆಂಟ್ರಲ್ ಸಿಲ್ಕ್ ಬೋರ್ಡ್‌ನಿಂದ 1ಬB ಬಸ್‌ಗಳು ಬೆಳಿಗ್ಗೆ 11 ಗಂಟೆಗೆ ಹೊರಟು ಭೋಗ ನಂದೀಶ್ವರ ದೇವಸ್ಥಾನ, ಕಣಿವೆ ಬಸವಣ್ಣ ದೇವಸ್ಥಾನ, ಸರ್.ಎಂ. ವಿಶ್ವೇಶ್ವರಯ್ಯ ಮ್ಯೂಸಿಯಂ, ಸಮಾಧಿ ಮುದ್ದೇನಹಳ್ಳಿ, ರಂಗಸ್ಥಳ ರಂಗನಾಥ ಸ್ವಾಮಿ ದೇವಸ್ಥಾನ ಮತ್ತು ಇಶಾ ಫೌಂಡೇಷನ್ ನೋಡಲು ಅವಕಾಶ ನೀಡಲಿವೆ. ಸದರಿ ಬಸ್‌ಗಳು ರಾತ್ರಿ 10 ಗಂಟೆಗೆ ನೀವು ಹತ್ತಿದ ಟಿಟಿಎಂಸಿಗೆ ಹಿಂದುರಗಲಿವೆ. ಬನಶಂಕರಿ ಟಿಟಿಎಂಸಿಯಿಂದ ಪ್ರಯಾಣಿಸುವವರಿಗೆ ಪ್ರತಿ ಆಸನಕ್ಕೆ 700 ರೂ, ಸೆಂಟ್ರಲ್ ಸಿಲ್ಕ್ ಬೋರ್ಡ್ ಪ್ರಯಾಣಿಸುವವರಿಗೆ ಪ್ರತಿ ಆಸನಕ್ಕೆ 700 ರೂ. ನಿಗದಿಪಡಿಸಲಾಗಿದೆ. ಮೇಲ್ಕಂಡ ಎಲ್ಲಾ ಸ್ಥಳಗಳನ್ನು ಒಂದೇ ದಿನದಲ್ಲಿ ಒಂದೇ ಬಸ್ಸಿನ ಮೂಲಕ ಸಂದರ್ಶಿಸಬಹುದಾಗಿರುತ್ತದೆ.

# ಜಮೀರ್ ರಾಜೀನಾಮೆಗೆ ಆರ್. ಆಶೋಕ್ ಆಗ್ರಹ

• ಉದಯವಾಹಿನಿ, ಬೆಂಗಳೂರು

ಸಿದ್ದರಾಮಯ್ಯ ಅವರು ಕೂಡಲೇ ಸಚಿವ ಜಮೀರ್ ಅಹದ್ ಖಾನ್ ಅವರ ರಾಜೀನಾಮೆ ಪಡೆದು, ಶಾಸಕ ಬಿ.ಆರ್.ಪಾಟೀಲ್ ರವರ ಮೊಬೈಲ್ ಕರೆ ಆಡಿಯೋ ಆಧಾರದ ಮೇಲೆ ಹೈಕೋರ್ಟ್ ನ್ಯಾಯಾಧೀಶರ ನೇತೃತ್ವದಲ್ಲಿ ನ್ಯಾಯಾಂಗ ತನಿಖೆಗೆ ಆದೇಶಿಸಿ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್. ಆಶೋಕ್ ಆಗ್ರಹಿಸಿದ್ದಾರೆ.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಸ್ವಪಕ್ಷದ ಶಾಸಕರೇ ಭ್ರಷ್ಟಾಚಾರದ ಆರೋಪ ಮಾಡುತ್ತಿರುವಾಗ ವಸತಿ ಸಚಿವ ಜಮೀರ್ ಅಹದ್ ಖಾನ್ ಅವರಿಗೆ ತಮ್ಮ ಸ್ಥಾನದಲ್ಲಿ ಮುಂದುವರೆಯುವ ಯಾವ ನೈತಿಕತೆ ಉಳಿದಿದೆ ಎಂದು ಪ್ರಶ್ನೆ ಮಾಡಿದ್ದಾರೆ. ಕಾಂಗ್ರೆಸ್ ಸರ್ಕಾರ ಭ್ರಷ್ಟ ಸರ್ಕಾರ. ಕಾಂಗ್ರೆಸ್ ಸರ್ಕಾರದಲ್ಲಿ ಕರ್ನಾಟಕ ಭ್ರಷ್ಟಾಚಾರದಲ್ಲಿ ನಂಬರ್ 1 ಆಗಿದೆ ಎಂದು ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಕಾಂಗ್ರೆಸ್ ಶಾಸಕ ಬಸವರಾಜ ರಾಯರೆಡ್ಡಿ ನೀಡಿದ್ದ ಹೇಳಿಕೆಗೆ ಪುಷ್ಟಿ ನೀಡುವಂತೆ ಕಾಂಗ್ರೆಸ್ ಬಿ.ಆರ್. ಪಾಟೀಲ್ ಅವರು ಜಮೀರ್ ಆಹಮದ್ ಅವರ ಮೇಲೆ ಗಂಭೀರ ಆರೋಪ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ. ಆಳಂದ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 950 ಮನೆಗಳನ್ನು ಲಂಚ ಪಡೆದು ಹಂಚಿಕೆ ಮಾಡಲಾಗಿದೆ ಎಂದು ಆರೋಪ ಮಾಡಿರುವ ಶಾಸಕ ಬಿ.ಆರ್.ಪಾಟೀಲ್ ಅವರು ತಮಲ್ಲಿರುವ ಭ್ರಷ್ಟಾಚಾರದ ಮಾಹಿತಿಯನ್ನು ಬಹಿರಂಗ ಪಡಿಸಿದರೆ ಸರ್ಕಾರವೇ ಅಲ್ಲಾಡುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ ಎಂಬುದನ್ನು ಉಲ್ಲೇಖಿಸಿದ್ದಾರೆ.



**ಶಾಸಕ ಬಿ.ಆರ್.ಪಾಟೀಲ್ ಅವರು ವಸತಿ ಇಲಾಖೆಯಲ್ಲಿ ನಡೆಯುತ್ತಿರುವ ಭ್ರಷ್ಟಾಚಾರ, ಲಂಚಗುಳಿತನದ ಬಗ್ಗೆ ತಮಗಿರುವ ಮಾಹಿತಿಯನ್ನು ಬಹಿರಂಗಪಡಿಸಬೇಕು ಮತ್ತು ಲೋಕಾಯುಕ್ತಕ್ಕೆ ದೂರು ಸಲ್ಲಿಸಬೇಕು. ಅವರಿಗೆ ಈ ವಿಷಯದಲ್ಲಿ ಬಿಜೆಪಿ ಸಂಪೂರ್ಣ ಬೆಂಬಲ ನೀಡಲಿದೆ ಎಂದು ಅಶೋಕ್ ಹೇಳಿದ್ದಾರೆ.**

# ಕೆಲಸದ ಅವಧಿ ದಿನಕ್ಕೆ 8 ಗಂಟೆ ಬದಲು 10 ಗಂಟೆಗೆ ವಿಸ್ತರಣೆ: ಲಾಡ್ ಸ್ಪಷ್ಟನೆ

• ಉದಯವಾಹಿನಿ, ಬೆಂಗಳೂರು

ಕೆಲಸದ ಅವಧಿಯನ್ನು ದಿನಕ್ಕೆ 8 ಗಂಟೆ ಬದಲು 10 ಗಂಟೆಗೆ ವಿಸ್ತರಿಸುವ ಸಂಬಂಧ ಸಾಕಷ್ಟು ವಿರೋಧ ವ್ಯಕ್ತವಾಗುತ್ತಿದ್ದು ಈ ಹಿನ್ನೆಲೆಯಲ್ಲಿ ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರು ಸ್ಪಷ್ಟನೆ ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ತಿದ್ದುಪಡಿ ಕಾನೂನು ಬಗ್ಗೆ ನೋಂದಾಯಿತ ಕಾರ್ಮಿಕ ಸಂಘಟನೆಗಳು ಮತ್ತು ಉದ್ದಿಮೆದಾರರ ಜೊತೆ ಬುಧವಾರ ಸಭೆ ನಡೆಸಲಾಗಿದೆ. ಈ ಪ್ರಸ್ತಾವನೆ ಸಾರ್ವಜನಿಕರು ಹಾಗೂ ಉದ್ಯೋಗಿಗಳಲ್ಲಿ ತಪ್ಪು ತಿಳುವಳಿಕೆ, ಭೀತಿಗೆ ಕಾರಣವಾಗಿದೆ. ಹೀಗಾಗಿ ಸ್ಪಷ್ಟೀಕರಣ ನೀಡಬೇಕಾಗಿದೆ ಎಂದು ಹೇಳಿದರು. ಕೆಲಸದ ಸಮಯವನ್ನು ಹೆಚ್ಚಿಸುವ ಪ್ರಸ್ತಾವಿತ ತಿದ್ದುಪಡಿಯು ಗರಿಷ್ಠ ವಾರದ ಕೆಲಸದ ಸಮಯವನ್ನು ಬದಲಾಯಿಸುವುದಿಲ್ಲ, ಅದು 48 ಗಂಟೆಗಳ ಮಿತಿಯಲ್ಲಿಯೇ ಉಳಿಯುತ್ತದೆ.

ನಿರ್ಧಾರವು ಅಂತರರಾಷ್ಟ್ರೀಯ ಕಾರ್ಮಿಕ ಸಂಸ್ಥೆ ಮೂಲಭೂತ ದೇಶೀಯ ಕಾನೂನುಗಳು ನಿಗದಿಪಡಿಸಿದ ಮಾನದಂಡಗಳಿಗೆ ಸಂಪೂರ್ಣವಾಗಿ ಅನುಗುಣವಾಗಿದೆ. ಯಾವುದೇ ಅಂತರರಾಷ್ಟ್ರೀಯ ಸಮಾವೇಶ ಅಥವಾ ಮಾನದಂಡದ ಉಲ್ಲಂಘನೆಯಾಗಿಲ್ಲ ಎಂದು ತಿಳಿಸಿದರು, ಪ್ರಸಕ್ತ ಕಾನೂನಿನಡಿ ಕೆಲಸದ ಅವಧಿ 9 ತಾಸು ಇದೆ.


ಉದಯವಾಹಿನಿ ಚಿತ್ರ

ಹೊಸ ಪ್ರಸ್ತಾವನೆಯಂತೆ ದಿನದ ಕೆಲಸದ ಅವಧಿಯನ್ನು 10 ತಾಸಿಗೆ ವಿಸ್ತರಿಸಲು ಉದ್ದೇಶಿಸಲಾಗಿದೆ. ಈ 10 ತಾಸುಗಳ ಕೆಲಸದ ಅವಧಿಯಲ್ಲಿ ಒಂದು ತಾಸಿನ ಭೋಜನ ವಿರಾಮವೂ ಸೇರಿದೆ. ಆ ಮೂಲಕ ಕೆಲಸ ಮಾಡುವ ಅವಧಿ 9 ತಾಸು ಮಾತ್ರ ಉಳಿಯಲಿದೆ. ಪ್ರಸ್ತಾವನೆಯ ಮೂಲ ಉದ್ದೇಶ ಉದ್ಯೋಗಿಗಳು, ಉದ್ಯೋಗದಾತ ಇಬ್ಬರಿಗೂ ಆಯ್ಕೆಗಳನ್ನು ನೀಡುವುದಾಗಿದೆ. ಈ ಬದಲಾವಣೆ ಮೂಲಕ ಕಾನೂನು ಪ್ರಕಾರ ಕೆಲ ದಿನಗಳಲ್ಲಿ ಉದ್ಯೋಗಿ ವಾರದಲ್ಲಿ 48 ತಾಸು ಕೆಲಸ ಮಾಡುವ ಅಗತ್ಯತೆಯನ್ನೂ ಪೂರೈಸುವ ವ್ಯವಸ್ಥೆ ಕಲ್ಪಿಸಲಿದೆ. ರಾಜ್ಯ ಸರ್ಕಾರ ಎಲ್ಲಾ ಸಿಬ್ಬಂದಿ ವರ್ಗದ ಹಿತರಕ್ಷಣೆಗೆ ಬದ್ಧವಾಗಿದೆ ಎಂದಿದ್ದಾರೆ. ಸದ್ಯ ಪ್ರಸ್ತಾವನೆ ಸಮಾಲೋಚನೆ ಹಂತದಲ್ಲಿದೆ. ಎಲ್ಲಾ ಪಾಲುದಾರರ ಜೊತೆ ಸಮಗ್ರ ಚರ್ಚೆ ನಡೆಸಲಾಗುತ್ತಿದೆ. ಯಾವುದೇ ಅಂತಿಮ ತೀರ್ಮಾನಕ್ಕೆ ಬರುವ ಮೊದಲು ಸಂಪುಟ ಸಭೆಯಲ್ಲಿ ಈ ಬಗ್ಗೆ ಚರ್ಚೆ ಮಾಡಲಾಗುವುದು ಎಂದು ತಿಳಿಸಿದರು.

# ಬಿಜಿಎಸ್ ಮೆಡಿಕಲ್ ಕಾಲೇಜು ಆಸ್ಪತ್ರೆ ಉದ್ಘಾಟಿಸಿದ ಅಮಿತ್ ಶಾ

## ದಕ್ಷಿಣದ ರಾಜ್ಯಗಳ ಕಾರ್ಯಕ್ರಮಗಳಲ್ಲಿ ಅಮಿತ್ ಶಾ ಹೊಸ ಸಂಪ್ರದಾಯ : ಅಂದು ಮಧುರೈ, ಇಂದು ಬೆಂಗಳೂರು

• ಉದಯವಾಹಿನಿ, ಬೆಂಗಳೂರು

ಕೇಂದ್ರ ಗೃಹ ಸಚಿವ ಅಮಿತ್ ಶಾ ಆದಿಚುಂಚನಗಿರಿ ಮಹಾಸಂಸ್ಥಾನದ ಕಾರ್ಯಕ್ರಮವೊಂದರಲ್ಲಿ ಪಾಲ್ಗೊಂಡಿದ್ದರು. ಈ ಕಾರ್ಯಕ್ರಮದಲ್ಲಿ ಭಾಗವಹಿಸಲೆಂದು ನಿನ್ನೆ ರಾತ್ರಿಯೇ ಅಮಿತ್ ಶಾ ಬೆಂಗಳೂರಿಗೆ ಆಗಮಿಸಿದ್ದರು. ಅವರನ್ನು, ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಹೂಗುಚ್ಛ ನೀಡಿ ಸ್ವಾಗತಿಸಿದ್ದರು.

ಇತ್ತೀಚಿನ ದಿನಗಳಲ್ಲಿ ಅಮಿತ್ ಶಾ ಹೊಸ ಸಂಪ್ರದಾಯಕ್ಕೆ ನಾಂದಿ ಹಾಡುತ್ತಿದ್ದಾರೆ. ಅದರಲ್ಲೂ ಪ್ರಮುಖವಾಗಿ ದಕ್ಷಿಣದ ರಾಜ್ಯಗಳಲ್ಲಿ ಭಾಗವಹಿಸುವ ಕಾರ್ಯಕ್ರಮದಲ್ಲಿ ಈ ಬದಲಾವಣೆಯನ್ನು ಕಾಣಬಹುದಾಗಿದೆ.

ಅದು, ಆಯಾಯ ಪ್ರಾದೇಶಿಕ ಭಾಷೆಗಳ ಮೇಲೆ ನಮ್ಮ ನಾಯಕರಿಗೆ ಇರುವ ಗೌರವ ಎಂದು ಬಿಜೆಪಿ ಹೇಳಿಕೊಂಡಿದೆ. ಆದಿಚುಂಚನಗಿರಿ ಮಠದ ಬಿಜಿಎಸ್ ಆಸ್ಪತ್ರೆಯ ಕಾರ್ಯಕ್ರಮದಲ್ಲಿ ಅಮಿತ್ ಶಾ ಭಾಷಣ ಮಾಡಲು ಆಗಮಿಸುತ್ತಿದ್ದಂತೆಯೇ, ಸಭೆಯಲ್ಲಿ ಭಾರೀ ಕರತಾಡನ ವ್ಯಕ್ತವಾಯಿತು. ಎಲ್ಲಕ್ಕಿಂತ ಮೊದಲು, ಮಹಾನ್ ಕನ್ನಡ ಭಾಷೆಯಲ್ಲಿ ಮಾತನಾಡಲು ಸಾಧ್ಯವಾಗುತ್ತಿಲ್ಲ, ಅದಕ್ಕಾಗಿ ನಿಮ್ಮೆಲ್ಲರ ಕ್ಷಮೆಯಾಚಿಸುತ್ತಿದ್ದೇನೆ ಎಂದು ಹೇಳಿದರು. ನಂತರ, ಸಭೆಗೆ ಎರಡೂ ಕೈಮುಗಿದು ಅಮಿತ್ ಶಾ ತಮ್ಮ ಭಾಷಣವನ್ನು ಹಿಂದಿಯಲ್ಲಿ ಮುಂದುವರಿಸಿದರು.


ಉದಯವಾಹಿನಿ ಚಿತ್ರ

ಒಂದು ದಿನದ ಹಿಂದೆ ದೇಶದಲ್ಲಿ ಇಂಗ್ಲಿಷ್ ಮಾತನಾಡುವವರು ನಾಚಿಕೆ ಪಡುವ ದಿನ ಬರುತ್ತೆ ಎಂದು ಅಮಿತ್ ಶಾ ಹೇಳಿದ್ದರು. ಕನ್ನಡ ಎನ್ನುವ ಬದಲು ಕನ್ನಡ್ ಎಂದ ಅಮಿತ್ ಶಾ ಅವರ ಕ್ಷಮೆಗೆ ಎಲ್ಲರಿಂದ ಮೆಚ್ಚುಗೆ ವ್ಯಕ್ತವಾಯಿತು. ನಂತರ, ತರ್ಜುಮೆ ಮಾಡಲು ನಿಂತಿರುವವರ ಮುಖವನ್ನು ನೋಡಿ, ಕನ್ನಡದಲ್ಲಿ ಹೇಳಿ ಎಂದು ಸೂಚಿಸಿದರು. ಈ ಕಾರ್ಯಕ್ರಮದಲ್ಲಿ ಸರ್ಕಾರದ ಪರವಾಗಿ ಸಚಿವ ಶರಣ್ ಪ್ರಕಾಶ್ ಪಾಟೀಲ್ ಹಾಜರಿದ್ದರು. ಡಿಸಿಎಂ ಡಿಕೆ ಶಿವಕುಮಾರ್ ಈ ಕಾರ್ಯಕ್ರಮದಲ್ಲಿ ಹಾಜರಿರಲಿಲ್ಲ. ಇದು, ಆಯಾಯ ರಾಜ್ಯಗಳ ಜನರನ್ನು ಸೆಳೆಯುವ ಕಾರ್ಯ ತಂತ್ರದ ಭಾಗವಾಗಿದೆ ಎಂದು ವಿಶ್ಲೇಷಿಸಲಾಗುತ್ತಿದೆ. ಪ್ರಧಾನಿ ಮೋದಿ ಕೂಡಾ ಆಯಾಯ ರಾಜ್ಯಗಳ ಭಾಷೆಯ ಒಂದು ಲೈನ್ ಅನ್ನು ತಮ್ಮದೇ ಧಾಟಿಯಲ್ಲಿ ಹೇಳುವ ಪರಿಪಾಠವನ್ನು ಇಟ್ಟುಕೊಂಡಿದ್ದಾರೆ.

ಮೊದಮೊದಲು ಒಂದು ಲೈನ್ ಇದ್ದದ್ದು, ನಂತರ ಪ್ಯಾರಾ ತನಕ ಸ್ಥಳೀಯ ಭಾಷೆಯಲ್ಲಿ ಮಾತನಾಡುವುದುಂಟು. ಆದರೆ, ಅಮಿತ್ ಶಾ ಅವರ ಕ್ಷಮೆಯಾಚಿಸುವುದನ್ನು ಇತ್ತೀಚೆಗೆ ಶುರು ಮಾಡಿದಂತಿದೆ. ತಮಿಳುನಾಡಿನಲ್ಲಿ ಮುಂದಿನ ವರ್ಷ ಅಸೆಂಬ್ಲಿ ಚುನಾವಣೆ ನಡೆಯಲಿದೆ. ಬಿಜೆಪಿ ಈಗಾಗಲೇ, ಎಐಎಡಿಎಂಕೆ ಜೊತೆ ಮೈತ್ರಿಯನ್ನು ಮಾಡಿಕೊಂಡಿದೆ. ದ್ರಾವಿಡ ನಾಡಿನಲ್ಲಿ ಹೇಗಾದರೂ ಅಕೌಂಟ್ ಓಪನ್ ಮಾಡಬೇಕು ಎನ್ನುವ ಬಿಜೆಪಿಯ ಪ್ರಯತ್ನ ಕಳೆದ ಲೋಕಸಭಾ ಚುನಾವಣೆಯಲ್ಲೂ ನಡೆದಿರಲಿಲ್ಲ. ಆದರೆ, ಗಣನೀಯವಾಗಿ ಬಿಜೆಪಿ ತನ್ನ ವೋಟ್ ಶೇರ್ ಅನ್ನು ಜಾಸ್ತಿ ಮಾಡಿಕೊಂಡಿತ್ತು. ಹಿಂದಿ ನಿಲುವು ದಕ್ಷಿಣದ ರಾಜ್ಯಗಳಲ್ಲಿ ರಿವರ್ಸ್ ಹೊಡೆಯುವ ಸಾಧ್ಯತೆ ಮತ್ತು ವಿಪಕ್ಷಗಳು ಅದನ್ನೇ ಅಸ್ತ್ರವನ್ನಾಗಿಸುವ ಸಾಧ್ಯತೆಯನ್ನು ಅರಿತಿರುವ ಬಿಜೆಪಿಯ ದೆಹಲಿ ನಾಯಕರು ಎಚ್ಚರಿಕೆಯ ನಡೆಯನ್ನು ಇಡುತ್ತಿದ್ದಾರೆ. ಅದರಲ್ಲೂ, ಸ್ಥಳೀಯ ಭಾಷೆಯಲ್ಲಿ ಮಾತನಾಡಲು ಸಾಧ್ಯವಾಗುತ್ತಿಲ್ಲ ಎಂದು ಕ್ಷಮೆಯಾಚಿಸುವುದೂ ಇದರ ಭಾಗವಾಗಿರಬಹುದು.

**ತ್ರಿಭಾಷಾ ಸೂತ್ರ ಮತ್ತು ಹಿಂದಿ ಹೇರಿಕೆಯ ವಿಚಾರ, ಪ್ರಮುಖವಾಗಿ ದಕ್ಷಿಣದ ರಾಜ್ಯಗಳಲ್ಲಿ ದೊಡ್ಡ ಮಟ್ಟನಲ್ಲಿ ಸದ್ದನ್ನು ಮಾಡುತ್ತಿದೆ. ತಮ್ಮದೇ ಸರ್ಕಾರವಿರುವ ಮಹಾರಾಷ್ಟ್ರದಲ್ಲೂ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್, ಮೂರನೇ ಭಾಷೆಯಾಗಿ ಹಿಂದಿಯನ್ನು ಆಯ್ಕೆ ಮಾಡಿಕೊಳ್ಳುವ ವಿಚಾರದಲ್ಲಿ ಯಾವುದೇ ಬಲವಂತವಿಲ್ಲ ಎಂದು ಹೇಳಿದ್ದಾರೆ.**

**ಸ್ಥಳೀಯ ಭಾಷೆಗೆ ಗೌರವ ಸೂಚಿಸುತ್ತಾ ನಾನು ಭಾಷೆಯನ್ನು ಮಾತನಾಡಲು ಆಗುತ್ತಿಲ್ಲ ಎಂದು ಅಮಿತ್ ಶಾ ಹೇಳುತ್ತಿರುವುದು ಇದೇನು ಮೊದಲಲ್ಲ. ತಮಿಳುನಾಡಿನ ಮಧುರೈನಲ್ಲಿ ಕಾರ್ಯಕರ್ತರ ಸಭೆಯಲ್ಲೂ ಅಮಿತ್ ಶಾ, ನನಗೆ ತಮಿಳು ಮಾತನಾಡಲು ಸಾಧ್ಯವಾಗುತ್ತಿಲ್ಲ ಕ್ಷಮೆಯಿರಲಿ ಎಂದು ಹೇಳಿದ್ದರು.**

# ಪಡಿತರ ಹಂಚಲು ಎಲೆಕ್ಟ್ರಿಕಲ್ ತೂಕದ ಯಂತ್ರ ಬಳಕೆಗೆ ಹೆಚ್ಚಿದ ಒತ್ತಡ

**ಕೊಡಗಿನಲ್ಲಿ ಅನ್ನಭಾಗ್ಯಕ್ಕೆ ಕನ್ನ**

• ಉದಯವಾಹಿನಿ, ಗೋಣಿಕೊಪ್ಪ

ಕೊಡಗಿನ ನ್ಯಾಯಬೆಲೆ ಅಂಗಡಿಗಳಲ್ಲಿ ನಿರಂತರವಾಗಿ ಪಡಿತರ ಫಲಾನುಭವಿಗಳಿಗೆ ವಂಚನೆಯಾಗುತ್ತಿದೆ ಎಂಬ ಆರೋಪ ಕೇಳಿಬಂದಿದೆ. ಪ್ರತಿ ಬಾರಿ ಅಕ್ಕಿ ತೆಗೆದುಕೊಳ್ಳುವಾಗ ತೂಕದಲ್ಲಿ ವ್ಯತ್ಯಾಸಗಳಾಗುತ್ತಿದ್ದು, ಫಲಾನುಭವಿಗಳು ಬಹುದೊಡ್ಡ ವಂಚನೆಗೆ ಒಳಗಾಗುತ್ತಿದ್ದಾರೆ ಎಂದು ಫಲಾನುಭವಿಗಳು ಆರೋಪಿಸುತ್ತಿದ್ದಾರೆ. ನ್ಯಾಯಬೆಲೆ ಅಂಗಡಿಗಳಲ್ಲಿ ಎಲೆಕ್ಟ್ರಿಕಲ್ ತೂಕದ ಯಂತ್ರಗಳನ್ನು ಅಳವಡಿಸಬೇಕು ಎಂದು ಸರ್ಕಾರ ಆದೇಶಿಸಿ ವರ್ಷಗಳೇ ಕಳೆದು ಹೋಗಿದೆ. ಆದರೆ ಕೊಡಗಿನ ಬಹುತೇಕ ನ್ಯಾಯಬೆಲೆ ಅಂಗಡಿಗಳಲ್ಲಿ ಇಂದಿಗೂ ಹಳೆಯ ತಕ್ಕಡಿಯನ್ನು ಬಳಸಲಾಗುತ್ತಿದೆ. ಇದರ ಉದ್ದೇಶ ಫಲಾನುಭವಿಗಳಿಗೆ ತೂಕದಲ್ಲಿ ವ್ಯತ್ಯಾಸ ಮಾಡಿ ಅಕ್ಕಿಯನ್ನು ವಂಚಿಸುವುದೇ ಆಗಿದೆ ಎನ್ನುವುದು ಆರೋಪ. ನ್ಯಾಯಬೆಲೆ ಅಂಗಡಿಯಲ್ಲಿ ತುಂಬಿದ ಹತ್ತು ಕೆಜಿ ಅಕ್ಕಿಯನ್ನು ಬೇರೆ ಕಡೆ ತೂಕಕ್ಕೆ ಒಳಪಡಿಸಿದಾಗ ಸುಮಾರು ಒಂದೂವರೆಯಿಂದ ಎರಡು ಕೆಜಿ ಯಷ್ಟು ವ್ಯತ್ಯಾಸ ಕಾಣಿಸುತ್ತದೆ ಎಂಬುದು ಫಲಾನುಭವಿಗಳ ದೂರು. ಜಿಲ್ಲೆಯಲ್ಲಿ ಸುಮಾರು 274 ನ್ಯಾಯಬೆಲೆ ಅಂಗಡಿಗಳಿವೆ. ಪ್ರತಿ ಅಂಗಡಿಗಳಲ್ಲಿಯೂ ಎಲೆಕ್ಟ್ರಿಕಲ್ ತೂಕದ ಯಂತ್ರಗಳ ನಿಯಮ ಕಡ್ಡಾಯವಾಗಿದೆ. ಆದರೆ ಇಲ್ಲಿ ಈ ಬಗ್ಗೆ ವಿಚಾರಿಸುವವರು ಮೌನವಾಗಿರುವುದರಿಂದ ಪಡಿತರ ವಂಚನೆ ನಡೆಯುತ್ತಿದೆ. ಅಕ್ಕಿ ವಿತರಣೆಯಲ್ಲಿಯೂ ವಂಚನೆ ಆಗುತ್ತಿದೆ ಎಂಬ ದೂರುಗಳು ಸಹ ಇವೆ. ನ್ಯಾಯಬೆಲೆ ಅಂಗಡಿಗಳಿಗೆ ವಿತರಣೆಯಾಗುವ ಅಕ್ಕಿಯಲ್ಲಿ, ತೂಕ ವ್ಯತ್ಯಾಸವಲ್ಲದೆ ಬಹುತೇಕ ಪಾಲು ಕೇರಳಕ್ಕೆ ಮಾರಾಟವಾಗುತ್ತಿದೆ ಎಂಬ ಗಂಭೀರ ಆರೋಪವೂ ಇದೆ.


ಉದಯವಾಹಿನಿ ಚಿತ್ರ

> ನಮಗೆ ಕಲ್ಲುಬಿಟ್ಟು ತಕ್ಕಡಿಯಲ್ಲಿ ತೂಗುವ ಬಗ್ಗೆ ಗೊತ್ತಿಲ್ಲ, ಎಲೆಕ್ಟ್ರಿಕಲ್ ಯಂತ್ರದಲ್ಲಿ ತೂಗಿದರೆ ನಂಬರ್ ಗಳನ್ನು ನೋಡಿ ನಮಗೆ ಸೇರಬೇಕಾದ ಕೆಜಿ ಅಕ್ಕಿ ಇದೆ ಎಂದು ಕಂಡುಹಿಡಿಯಬಹುದು
> -ಮಾರ, ಪಡಿತರ ಚೀಟಿ ಫಲಾನುಭವಿ

> ಕಳೆದ ಬಾರಿ ವಿತರಿಸಿದ ಅಕ್ಕಿಯಲ್ಲಿ ತೂಕದ ವ್ಯತ್ಯಾಸ ಕಂಡುಬಂದಿದೆ. 20 ಕೆಜಿ ಅಕ್ಕಿಯಲ್ಲಿ ಕೇವಲ ಹದಿನೆಂಟೂವರೆ ಕೆಜಿ ಅಕ್ಕಿ ಅಷ್ಟೇ ಲಭ್ಯವಾಗಿದೆ. ನ್ಯಾಯಬೆಲೆ ಅಂಗಡಿಯಲ್ಲಿ ತೂಗಿದ ಅಕ್ಕಿ ತೆಗೆದುಕೊಂಡು ಹೋಗುತ್ತಿದ್ದಾಗ ಮಳೆ ಬಂತು ಎಂದು ಸ್ನೇಹಿತರ ಅಂಗಡಿಯಲ್ಲಿ ನಿಂತಾಗ ಸುಮ್ಮನೆ ಅಕ್ಕಿ ತೂಗಿದಾಗ ವ್ಯತ್ಯಾಸ ಕಂಡು ಬಂದಿದೆ
> - ಲಕ್ಷ್ಮಿ, ಬಾಳೆಲೆ.

**11,10,496 ಫಲಾನುಭವಿಗಳು:** ಕೊಡಗಿನಲ್ಲಿ ಬಿಪಿಎಲ್, ಅಂತ್ಯೋದಯ ಚೀಟಿ ಹೊಂದಿರುವ 11,10,496 ಫಲಾನುಭವಿಗಳಿದ್ದಾರೆ. ಪ್ರತಿ ತಿಂಗಳು 15,860 ಟನ್ ಬಿಪಿಎಲ್ ಪಡಿತರರಿಗೆ ಮತ್ತು 3200 ಟನ್ ಅಂತ್ಯೋದಯ ಚೀಟಿ ಹೊಂದಿದವರಿಗೆ ವಿತರಣೆಯಾಗುತ್ತಿದೆ.

**ದೂರು ನೀಡಲು ಹಿಂದೇಟು:** ನ್ಯಾಯಬೆಲೆ ಅಂಗಡಿಗಳೊಂದಿಗೆ ಉತ್ತಮ ಸ್ನೇಹದ ಬಾಂಧವ್ಯವನ್ನು ಆಹಾರ ಇಲಾಖೆ ಅಧಿಕಾರಿಗಳು ಹೊಂದಿರುವುದರಿಂದ, ನ್ಯಾಯಬೆಲೆ ಅಂಗಡಿ ನಿರ್ವಹಿಸುವವರಿಗೆ ಫಲಾನುಭವಿಗಳನ್ನು ಅಂಗಡಿಗಳಲ್ಲಿ ವಂಚಿಸಲು ಸಾಧ್ಯವಾಗುತ್ತಿದೆ. ಆಕಸ್ಮಾತಾಗಿ ತೂಕದಲ್ಲಿ ವ್ಯತ್ಯಾಸ ಕಂಡು ಪ್ರಶ್ನಿಸಿದರೆ ಅವರ ಪಡಿತರ ಚೀಟಿಯಲ್ಲಿ ಲೋಪವಿದೆ ಮತ್ತು ಇನ್ನಿತರ ತಾಂತ್ರಿಕ ಕಾರಣಗಳನ್ನು ಹೇಳಿ ಅವರನ್ನು ಮಾನಸಿಕವಾಗಿ ಹತ್ತಿಕ್ಕುವ ಪ್ರಯತ್ನ ಬಹುತೇಕ ನ್ಯಾಯಬೆಲೆ ಅಂಗಡಿಗಳಲ್ಲಿ ನಡೆಯುತ್ತದೆ. ಹೀಗಾಗಿ ಪಡಿತರ ಫಲಾನುಭವಿಗಳು ಮುಂದಿನ ತಿಂಗಳು ನಮಗೆ ಅಕ್ಕಿ ಸಿಗದೇ ಇರಬಹುದು ಎಂಬ ಭಯದಲ್ಲಿ ನ್ಯಾಯಬೆಲೆ ಅಂಗಡಿಗಳ ವಿರುದ್ಧ ದೂರು ನೀಡಲು ಹಿಂದೇಟು ಹಾಕುತ್ತಾರೆ.

> ಆಹಾರ ಧಾನ್ಯಗಳ ಪ್ರಮಾಣವನ್ನು ನಿಖರವಾಗಿ ದಾಖಲಿಸಲು ಎಲೆಕ್ಟ್ರಿಕಲ್ ತೂಕದ ಯಂತ್ರಗಳ ಬಳಕೆಗೆ ಸರಕಾರ ಆದೇಶ ನೀಡಿದೆ. ಈ ಬಗ್ಗೆ ಆಹಾರ ಇಲಾಖೆಯ ಅಧಿಕಾರಿಗಳನ್ನು ಸಂಪರ್ಕಿಸಿ ಪ್ರತಿಯೊಂದು ನ್ಯಾಯಬೆಲೆ ಅಂಗಡಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗುವುದು. ಎಲೆಕ್ಟ್ರಿಕಲ್ ಬಳಸದೇ ಇರುವ ನ್ಯಾಯಬೆಲೆ ಅಂಗಡಿ ಮೇಲೆ ದಂಡ ವಿಧಿಸಿ ಕ್ರಮ ಕೈಗೊಳ್ಳಲಾಗುವುದು
> -ಮೋಹನ್‌ಕುಮಾರ್, ತಾಲ್ಲೂಕು ದಂಡಾಧಿಕಾರಿ.

# ಮಿನಿ ನ್ಯೂಸ್

## ಅಕ್ರಮವಾಗಿ ಒಣಗಾಂಜಾ ಸಾಗಿಸುತ್ತಿದ್ದ ಇಬ್ಬರ ಬಂಧನ

• ಉದಯವಾಹಿನಿ, ಹನೂರು

ಅಕ್ರಮವಾಗಿ ಮಾರಾಟ ಮಾಡಲು ಒಣಗಾಂಜ ಸಾಗಿಸುತ್ತಿದ್ದ ಇಬ್ಬರೂ ವ್ಯಕ್ತಿಗಳನ್ನು ಹನೂರು ತಾಲ್ಲೂಕಿನ ವಡಕೆಹಳ್ಳ ಗ್ರಾಮದ ಹತ್ತಿರ ಬಂಧಿಸುವಲ್ಲಿ ರಾಮಾಪುರ ಪೊಲೀಸ್ ಠಾಣೆ ಸಬ್ ಇನ್ಸ್ಪೆಕ್ಟರ್ ಲೋಕೇಶ್ ನೇತೃತ್ವದ ತಂಡ ಯಶಸ್ವಿಯಾಗಿದ್ದಾರೆ. ಬೆಂಗಳೂರು ಜೆ.ಪಿ ನಗರದ ಮಹೇಶ್ ಮತ್ತು ಕಾರ್ತಿಕ್ ಎಂಬ ಇಬ್ಬರು ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಬೆಂಗಳೂರು ಮೂಲದ ಮಹೇಶ್ ಮತ್ತು ಕಾರ್ತಿಕ್ ಇಬ್ಬರು ವ್ಯಕ್ತಿಗಳು ಬಸ್ಸಿನಲ್ಲಿ ಬಂದಿಳಿದು ಅಕ್ರಮವಾಗಿ 297 ಗ್ರಾಂ. ಒಣಗಾಂಜಾ ತಂದು ಮಾರಾಟ ಮಾಡಲು ಸಾಗಿಸುತ್ತಿದ್ದರು. ಈ ಬಗ್ಗೆ ದೊರೆತ ಖಚಿತ ಮಾಹಿತಿ ಮೇರೆಗೆ ವಡಕೆಹಳ್ಳ ಗ್ರಾಮದ ಹತ್ತಿರ ಸಬ್ ಇನ್ಸ್‌ಪೇಕ್ಟರ್ ಲೋಕೇಶ್ ಅವರ ನೇತೃತ್ವದಲ್ಲಿ ಕಾರ್ಯಾಚರಣೆಯಲ್ಲಿ ದಾಳಿ ಮಾಡಿ ಇಬ್ಬರನ್ನೂ ಬಂಧಿಸಿದ್ದಾರೆ.

## ಮೈತುಂಬಿ ಹರಿಯುತ್ತಿದೆ ಕಪಿಲಾ ನದಿ

• ಉದಯವಾಹಿನಿ, ನಂಜನಗೂಡು

ಕಳೆದ ವಾರದಿಂದ ಕೇರಳ ವೈ ನಾಡಿನಲ್ಲಿ, ಧಾರಾಕಾರವಾಗಿ ಸುರಿಯುತ್ತಿರುವ ಮಳೆ. ಕಪಿಲಾ ನದಿಗೆ ಹೆಚ್ಚುವರಿ ನೀರನ್ನು ಬಿಟ್ಟಿರುವ ಹಿನ್ನೆಲೆಯಲ್ಲಿ, ಕಪಿಲ ನದಿ ಮೈತುಂಬಿ ಹರಿಯುತ್ತಿದೆ ತುಂಬಿ ಹರಿಯುತ್ತಿರುವ ಕಪಿಲಾ ನದಿಯನ್ನು ನೋಡಲು ಭಕ್ತಾದಿಗಳು ಮತ್ತು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಬರುತ್ತಿರುವ ಹಿನ್ನೆಲೆಯಲ್ಲಿ ಕಪಿಲಾ ನದಿ ಹತ್ತಿರ ಯಾರು ಹೋಗದಂತೆ ಕಟ್ಟೆಚರ ವಹಿಸಲಾಗಿದೆ. ದೇವಸ್ಥಾನದ ವತಿಯಿಂದ ಕಪಿಲಾ ನದಿಯ ಹತ್ತಿರ ಪೊಲೀಸ್ ಸೆಕ್ಯೂರಿಟಿ ಗಾರ್ಡ್ ನಿರ್ಮಿಸಲಾಗಿದೆ ಮತ್ತು ಧ್ವನಿವರ್ಧಕದಿಂದ ಯಾರು ಕಪಿಲ ನದಿ ಹತ್ತಿರ ಭಕ್ತಾದಿಗಳು ಹೋಗದಂತೆ ಮಾಹಿತಿ ನೀಡುತ್ತಿದ್ದಾರೆ ಇದರ ಜೊತೆಗೆ ಕಪಿಲಾ ನದಿ ಹತ್ತಿರ ಇರುವ ಗದ್ದೆಗಳಿಗೆ ನೀರು ನುಗ್ಗಿ ರೈತರು ಬೆಳೆದ ಪಸಲು ನಾಶವಾಗಿದೆ ಕಪಿಲಾ ನದಿಯ ಮಧ್ಯದಲ್ಲಿರುವ 16 ಕಾಲು ಮಂಟಪ ಮುಳುಗುವ ಹಂತದಲ್ಲಿದ್ದೆ ಇನ್ನು ಹೆಚ್ಚಿನ ನೀರು ಬರುವ ನಿರೀಕ್ಷೆಯಲ್ಲಿ ಕಪಿಲಾ ನದಿಯ ಹತ್ತಿರ ಬ್ಯಾರಿಕೆಡ್ ನಿರ್ಮಿಸಿ ಯಾವುದೇ ಅನಾಹುತ ಉಂಟಾಗದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಂಡಿದ್ದಾರೆ. ಶ್ರೀಕಂಠೇಶ್ವರ ದೇವಾಲಯದ ಕಾರ್ಯನಿರ್ವಾಧಿಕಾರಿ ಜಗದೀಶ್ ಮಾತನಾಡಿ ಕಪಿಲಾ ನದಿಗೆ ಹೆಚ್ಚುವರಿ ನೀರು ಹರಿಯುತ್ತಿರುವುದರಿಂದ ಕಪಿಲಾ ನದಿ ತುಂಬಿ ಹರಿಯುತ್ತದೆ ಭಕ್ತಾದಿಗಳು ಕಪಿಲಾ ನದಿ ಹತ್ತಿರ ಬರುವುದರಿಂದ ಮುನ್ನೆಚ್ಚರಿಕೆ ಕ್ರಮ ತೆಗೆದುಕೊಂಡು ಕಪಿಲಾ ನದಿಯ ಹತ್ತಿರ ಯಾರು ಹೋಗದಂತೆ ಕ್ರಮ ಕೈಗೊಂಡಿದ್ದೇವೆ.

## ಮಾರಗೌಡನಹಳ್ಳಿ: ಕಬ್ಬಿನ ಗದ್ದೆಗೆ ಬೆಂಕಿ

• ಉದಯವಾಹಿನಿ, ಹಲಗೂರು

ಸಮೀಪದ ಮಾರಗೌಡನಹಳ್ಳಿ ಗ್ರಾಮದಲ್ಲಿ ಸುಮಾರು 1.5 ಎಕರೆ ಭೂ ಪ್ರದೇಶದಲ್ಲಿ ಬೆಳೆದಿದ್ದ ಕಬ್ಬಿಗೆ ಶುಕ್ರವಾರ ಮಧ್ಯಾಹ್ನ ಬೆಂಕಿ ಬಿದ್ದಿದೆ. ಗ್ರಾಮದ ರೈತ ಎಂ.ಎಲ್.ಸತೀಶ್ ಕುಮಾರ್ ಅವರು ದೇವರಾಜಯ್ಯ ಅವರ ಜಮೀನನ್ನು ಗುತ್ತಿಗೆಗೆ ಪಡೆದು ಕಬ್ಬು ಬೆಳೆದಿದ್ದರು. ಸಮೃದ್ಧ ಫಸಲು ಬಂದಿದ್ದು, ಇನ್ನೂ ಕೆಲವೇ ದಿನಗಳಲ್ಲಿ ಕಬ್ಬು ಕಟಾವು ಮಾಡಬೇಕಿತ್ತು. ಆದರೆ ಶುಕ್ರವಾರ ಮಧ್ಯಾಹ್ನ ಜಮೀನಿನಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಬೆಂಕಿಯ ಕೆನ್ನಾಲಿಗೆ ಇಡೀ ಜಮೀನಿಗೆ ಆವರಿಸಿಕೊಂಡಿದೆ. ಜಮೀನಿನಲ್ಲಿ ಬೆಳೆಸಿದ್ದ ಸುಮಾರು 50ಕ್ಕೂ ಹೆಚ್ಚು ತೆಂಗಿನ ಸಸಿಗಳು ಬೆಂಕಿಗೆ ಸಿಲುಕಿ ಸುಟ್ಟು ಹೋಗಿವೆ. ಅಗ್ನಿಶಾಮಕ ದಳ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿದರೂ, ಜಮೀನಿಗೆ ದಾರಿ ಇಲ್ಲದ ಪರಿಣಾಮ ಯಾವುದೇ ಪ್ರಯೋಜನ ಆಗಿಲ್ಲ.

ಸ್ವಾವಲಂಬಿ ಜೀವನ ನಿರ್ವಹಣೆಗಾಗಿ, ಕಷ್ಟಪಟ್ಟು ಸಾಲ ಮಾಡಿ ಕಬ್ಬು ಬೆಳೆದಿದ್ದು, ಕಟಾವಿಗೆ ಬಂದಿತ್ತು. ಯಾರೋ ಕಿಡಿಗೇಡಿಗಳು ಕಬ್ಬಿಗೆ ಬೆಂಕಿ ಹಚ್ಚಿದ್ದು, ಕಂಗಾಲಾಗಿದ್ದೆ. ಬೆಂಕಿ ಅವಘಡದಿಂದಾಗಿ ಸುಮಾರು 3 ಲಕ್ಷಕ್ಕೂ ಹೆಚ್ಚು ನಷ್ಟ ಉಂಟಾಗಿದ್ದು ಸಂಬಂಧಿಸಿದ ಇಲಾಖೆಯವರು ಪರಿಹಾರ ನೀಡಬೇಕು ಎಂದು ರೈತರ ಎಂ.ಎಲ್. ಸತೀಶ್ ಕುಮಾರ್ ಮನವಿ ಮಾಡಿದರು. ಹಲಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಬಸ್ ಕೊರತೆ: ವಿದ್ಯಾರ್ಥಿಗಳ ಪ್ರತಿಭಟನೆ

• ಉದಯವಾಹಿನಿ, ಮಂಡ್ಯ

ಬಸ್‌ಗಳು ಸರಿಯಾದ ಸಮಯಕ್ಕೆ ಬರೆದೇ ಇರುವುದರಿಂದ ಗ್ರಾಮೀಣ ವಿದ್ಯಾರ್ಥಿಗಳು ಶಾಲಾ, ಕಾಲೇಜಿಗೆ ನಿಗದಿತ ಸಮಯಕ್ಕೆ ಹಾಜರಾಗಲು ಸಾಧ್ಯವಾಗುತ್ತಿಲ್ಲ ಎಂದು ಆರೋಪಿಸಿ ನಗರದ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದ ಎದುರು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಕಾರ್ಯಕರ್ತರು ಹಾಗೂ ವಿದ್ಯಾರ್ಥಿಗಳು ಶುಕ್ರವಾರ ಪ್ರತಿಭಟನೆ ನಡೆಸಿದರು. ಸ್ಥಳೀಯ ಬಸ್‌ಗಳ ತೀವ್ರ ಕೊರತೆಯಿದೆ. ಹಲವು ಪ್ರಮುಖ ಮಾರ್ಗಗಳಲ್ಲಿ ನಿರಂತರ ಬಸ್ ಸೇವೆಯಿಲ್ಲದೇ ಪ್ರಯಾಣಿಸಲು ಅನಾನುಕೂಲವಾಗಿದೆ. ಬಹುತೇಕ ಬಸ್ ಚಾಲಕರು ಸಮಯ ಪಾಲನೆ ಮಾಡುತ್ತಿಲ್ಲ. ಇದರಿಂದ ಸಾರ್ವಜನಿಕರು ತಮ್ಮ ದಿನನಿತ್ಯ ಕೆಲಸಗಳಿಗೆ ಪರದಾಡುವಂತಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಹೊಸ ಬಸ್‌ಗಳನ್ನು ಓಡಿಸಬೇಕು. ಬಸ್‌ಗಳ ನಿರ್ವಹಣೆಗೆ ಹೆಚ್ಚು ಒತ್ತು ನೀಡಬೇಕು, ಇಲ್ಲವಾದರೆ ಪ್ರತಿಭಟನೆ ತೀವಗೊಳಿಸಲಾಗುವುದು ಎಂದು ಎಚರಿಕೆ ನೀಡಿದರು.

## ಡಿಂಬಾಸನ ಯೋಗದ ವಿಶ್ವದಾಖಲೆ ಇಂದು


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಡಿಕೇರಿ

ಇಲ್ಲಿಗೆ ಸಮೀಪದ ಮದೆನಾಡಿನ ಬಿಜಿಎಸ್ ಪಬ್ಲಿಕ್ ಶಾಲೆಯ 6ನೇ ತರಗತಿ ವಿದ್ಯಾರ್ಥಿನಿ ಸಿಂಚನಾ ಜೂನ್ 21ರಂದು ಸಂಜೆ 6 ಗಂಟೆಗೆ ಇಲ್ಲಿನ ಪತ್ರಿಕಾಭವನ ಸಭಾಂಗಣದಲ್ಲಿ ಗಿನ್ನಿಸ್ ವಿಶ್ವದಾಖಲೆಗೆ ಸೇರ್ಪಡೆ ಮಾಡುವುದಕ್ಕಾಗಿ ಯೋಗ ಪ್ರದರ್ಶನ ನೀಡಲಿದ್ದಾಳೆ.

ರೋಟರಿ ಮಿಸ್ಟಿ ಹಿಲ್ಸ್ ಮತ್ತು ಕೊಡಗು ಪತ್ರಕರ್ತರ ಸಂಘದ ವತಿಯಿಂದ ನಡೆಯುವ ಈ ಕಾರ್ಯಕ್ರಮದಲ್ಲಿ ಸಿಂಚನಾ 30 ನಿಮಿಷ 5 ಸೆಕೆಂಡ್‌ಗಳ ಕಾಲ ಡಿಂಬಾಸನ ಯೋಗ ಭಂಗಿಯಲ್ಲಿರುವ ಮೂಲಕ ವಿಶ್ವದಾಖಲೆ ಮಾಡಲಿದ್ದಾಳೆ. ಪರಿಣಿತರು ಈ ಸಂಬಂಧಿತ ದಾಖಲೆ ಮಾಡಿಕೊಳ್ಳಲಿದ್ದಾರೆ ಎಂದು ರೋಟರಿ ಮಿಸ್ಟಿ ಹಿಲ್ಸ್ ಅಧ್ಯಕ್ಷ ಪೊನ್ನಚ್ಚನ ಮಧುಸೂದನ್ ಹಾಗೂ ಕೊಡಗು ಪತ್ರಕರ್ತರ ಸಂಘದ ಅಧ್ಯಕ್ಷ ಎಚ್.ಟಿ.ಅನಿಲ್ ಜಂಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಂಬಲ ಬೆಲೆ, ಕನಿಷ್ಠ ಕೂಲಿ ನೀಡಿ ಪುಟ್ಟಮಾದು ಒತ್ತಾಯ

• ಉದಯವಾಹಿನಿ, ಮಂಡ್ಯ

ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಕೃಷಿ ಕ್ಷೇತ್ರವನ್ನೇ ನಿರ್ಲಕ್ಷ್ಯ ಮಾಡಿವೆ. ಕನಿಷ್ಠ ಬೆಂಬಲ ಬೆಲೆ, ಕನಿಷ್ಠ ಕೂಲಿಯನ್ನು ನೀಡದಿದ್ದರೆ ಈ ವ್ಯವಸ್ಥೆಯನ್ನು ಬದಲಿಸಲು ಸಾಧ್ಯವಾಗುವುದಿಲ್ಲ ಎಂದು ಕೃಷಿ ಕೂಲಿಕಾರರ ಸಂಘದ ರಾಜ್ಯ ಘಟಕದ ಅಧ್ಯಕ್ಷ ಎಂ. ಪುಟ್ಟಮಾದು ಅಭಿಪ್ರಾಯಪಟ್ಟರು. ನಗರದ ಕರ್ನಾಟಕ ಸಂಘದ ಕೆ.ವಿ.ಎಸ್ ಭವನದಲ್ಲಿ ಕರ್ನಾಟಕ ಪ್ರಾಂತ ಕೃಷಿ ಕೂಲಿಕಾರರ ಸಂಘದ ವತಿಯಿಂದ ಕೃಷಿ ಕೂಲಿಕಾರರು ಮತ್ತು ಗ್ರಾಮೀಣ ಕಾರ್ಮಿಕರಿಗೆ ಎರಡು ದಿನ ಏರ್ಪಡಿಸಿರುವ ಜಿಲ್ಲಾ ಮಟ್ಟದ ಸಂಘಟನಾ ಕಾರ್ಯಾಗಾರವನ್ನು ಶುಕ್ರವಾರ ಉದ್ಘಾಟಿಸಿ ಅವರು ಮಾತನಾಡಿದರು.

ಯಂತ್ರಗಳು ಬಂದ ಕಾರಣ ಕೂಲಿಕಾರರಿಗೆ ವಾರ್ಷಿಕವಾಗಿ ಉದ್ಯೋಗ ಖಾತ್ರಿ ಕೆಲಸ ಕಡಿಮೆ ಸಿಗುತ್ತಿದೆ. ಕೃಷಿ ಕ್ಷೇತ್ರವನ್ನು ನೋಡಿದರೆ ಬೆಳೆಗೆ ಔಷಧ ಸಿಂಪಡಿಸಲು ಡ್ರೋನ್ ಬಳಸಲಾಗುತ್ತಿದೆ. ಭತ್ತ, ರಾಗಿ, ಜೋಳ ಕೊಯ್ದು ಮಾಡಲು ಯಂತ್ರಗಳನ್ನು ಬಳಸಿಕೊಳ್ಳಲಾಗುತ್ತಿದೆ. ಯಂತ್ರಗಳ ನಿರ್ವಹಣೆ, ಬಾಡಿಗೆ ಎಲ್ಲವನ್ನೂ ಲೆಕ್ಕ ಹಾಕಿದರೆ ಖರ್ಚು ದುಬಾರಿಯಾಗುತ್ತದೆ. ಕೂಲಿಕಾರರಿಗೆ ಭರಿಸುವ ವೆಚ್ಚ ಕಡಿಮೆ ಇದೆ ಎಂಬುದು ಗೊತ್ತಿದ್ದರೂ ಏನೂ ಮಾಡಲು ಸಾಧ್ಯವಾಗುತ್ತಿಲ್ಲ ಎಂದು ವಿಷಾದಿಸಿದರು.

2000ನೇ ಸಾಲಿನಿಂದ ಈಚೆಗೆ ರೈತ ಆತ್ಮಹತ್ಯೆಗಳು ಕಂಡು ಬಂದವು. ಆ ನಂತರ 2014ರಲ್ಲಿ ಕೃಷಿ ಕೂಲಿಕಾರರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ದಾಖಲೆ ಮಾಡಲಾಯಿತು. 6,710 ಕೂಲಿಕಾರರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂಬುದು ಗೊತ್ತಾಯಿತು ಎಂದು ಆರೋಪಿಸಿದರು.

> **ಪ್ರಶ್ನಿಸುವುದನ್ನು ಕಲಿಯಿರಿ**
> ಕೃಷಿ ಕೂಲಿಕಾರರು ಮಾತನಾಡುವುದನ್ನಾದರೂ ಕಲಿಯಬೇಕು. ಏಕೆಂದರೆ ಈ ವ್ಯವಸ್ಥೆಯನ್ನು ಪ್ರಶ್ನೆ ಮಾಡುವ ಮನೋಭಾವ ಎಲ್ಲರಲ್ಲಿಯೂ ಬರಬೇಕು. ಹಲವು ವರ್ಷಗಳ ಹಿಂದೆ 80ರಷ್ಟಿದ್ದ ಕೂಲಿ ಈಗ 370 ಆಗಿದೆ. ಸದ್ಯಕ್ಕೆ ನಾಲ್ಕು ಪಟ್ಟು ಹೆಚ್ಚಾಯಿತು. ಇದು ಹೆಚ್ಚಾಗಲು ನೀವು ಕೇಳಿದ್ದಕ್ಕೆ ಮಾತ್ರ ಕೂಲಿ ಹಣ ಹೆಚ್ಚಾಗಿದೆ
> - ಟಿ.ಎಲ್. ಕೃಷ್ಣಗೌಡ
> ಸಿಪಿಎಂ ಜಿಲ್ಲಾ ಕಾರ್ಯದರ್ಶಿ

# ಕಾಂಗ್ರೆಸ್ ನತ್ತ ವಾಲಿದ ಜೆಡಿಎಸ್ ಮುಖಂಡರು

## ಪಕ್ಷ ಸೇರ್ಪಡೆ ಕುರಿತು ಶಾಸಕ ಬಾಲಕೃಷ್ಣ, ಡಿ.ಕೆ. ಸುರೇಶ್ ಜೊತೆ ಚರ್ಚೆ

• ಉದಯವಾಹಿನಿ, ಮಾಗಡಿ

ಜೆಡಿಎಸ್ ರಾಜ್ಯದಾದ್ಯಂತ ಪಕ್ಷದ ಸದಸ್ಯತ್ವ ನೋಂದಣಿ ಅಭಿಯಾನ ಆರಂಭಿಸಿರುವ ಬೆನ್ನಲ್ಲೇ, ಕ್ಷೇತ್ರದ ಸ್ಥಳೀಯ ಜೆಡಿಎಸ್ ಮುಖಂಡರು ಪಕ್ಷ ತೊರೆದು ಕಾಂಗ್ರೆಸ್‌ನತ್ತ ಮುಖ ಮಾಡಿದ್ದಾರೆ. ಇದರಲ್ಲಿ ಬಹುತೇಕರು ಜೆಡಿಎಸ್ ಮಾಜಿ ಶಾಸಕ ಎ. ಮಂಜುನಾಥ್ ಆಪ್ತ ವಲಯದವರು ಎಂಬುದು ವಿಶೇಷ. ಸ್ಥಳೀಯ ಕಾಂಗ್ರೆಸ್ ಶಾಸಕ ಎಚ್.ಸಿ. ಬಾಲಕೃಷ್ಣ, ಬಮೂಲ್ ಅಧ್ಯಕ್ಷರು ಆಗಿರುವ ಕಾಂಗ್ರೆಸ್‌ನ ಮಾಜಿ ಸಂಸದ ಡಿ.ಕೆ. ಸುರೇಶ್ ಎಣೆದ ರಾಜಕೀಯ ತಂತ್ರದಿಂದಾಗಿ, ಜೆಡಿಎಸ್‌ನ ಸ್ಥಳೀಯ ಮುಖಂಡರು ತೆನೆಯನ್ನು ಕೆಳಕ್ಕಿಳಿಸಿ, 'ಕೈ' ಹಿಡಿದಿದ್ದಾರೆ. ಆ ಮೂಲಕ ಜೆಡಿಎಸ್‌ಗೆ ಆಘಾತ ನೀಡಿದ್ದಾರೆ.

**ಮುಖಭಂಗವಾಗಿತ್ತು:** ಲೋಕಸಭಾ ಚುನಾವಣೆಯಲ್ಲಿ ತೀವ್ರ ಹಣಾಹಣಿಗೆ ಕಾರಣವಾಗಿದ್ದ ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಕಾಂಗ್ರೆಸ್‌ನಿಂದ ಮರು ಆಯ್ಕೆ ಬಯಸಿದ್ದ ಡಿ.ಕೆ. ಸುರೇಶ್‌ಗೆ ಕ್ಷೇತ್ರದಲ್ಲಿ ಭಾರೀ ಹಿನ್ನಡೆಯಾಗಿತ್ತು. ಜೆಡಿಎಸ್ ಮತ್ತು ಬಿಜೆಪಿ ಮೈತ್ರಿಯು ಕ್ಷೇತ್ರದಲ್ಲಿ ಫಲಿಸಿತ್ತು. ಮಾಗಡಿಯಲ್ಲಿ ಪ್ರಬಲ ಕಾಂಗ್ರೆಸ್ ಶಾಸಕರಿದ್ದಾಗ್ಯೂ, ಮೈತ್ರಿ ಬಲದೊಂದಿಗೆ ಬಿಜೆಪಿ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದ ಡಾ. ಸಿ.ಎನ್. ಮಂಜುನಾಥ್ ಅವರು ಕ್ಷೇತ್ರದಲ್ಲಿ ಸುರೇಶ್ ಎದುರು 30 ಸಾವಿರಕ್ಕೂ ಹೆಚ್ಚು ಮತಗಳ ಲೀಡ್ ಪಡೆದು ಗೆಲುವಿನ ನಗೆ ಬೀರಿದ್ದರು. ಇದರಿಂದ ಶಾಸಕ ಬಾಲಕೃಷ್ಣ ಅವರಿಗೆ ಮುಖಭಂಗವಾಗಿತ್ತು.

**ತಿರುಗೇಟು:** ಲೋಕಸಭೆ ಚುನಾವಣೆ ಮುಗಿದು ವರ್ಷ ಕಳೆಯುವುದರಲ್ಲೇ ಜೆಡಿಎಸ್ ಪಕ್ಷಕ್ಕೆ ಕ್ಷೇತ್ರದಲ್ಲಿ ಕೈ ಶಾಸಕರು, ಮಾಜಿ ಸಂಸದರು ಆಘಾತ ನೀಡಿದ್ದಾರೆ. ಎ. ಮಂಜುನಾಥ್ ಆಪ್ತರಾಗಿ ಗುರುತಿಸಿಕೊಂಡಿದ್ದ ಪ್ರಮುಖ ಮುಖಂಡರನ್ನು ಕಾಂಗ್ರೆಸ್‌ಗೆ ಕರೆತರುವಲ್ಲಿ ಇಬ್ಬರೂ ಯಶಸ್ವಿಯಾಗಿದ್ದಾರೆ.

**ಯಾರಾರು ಸೇರ್ಪಡೆ?:** ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಚಿಕ್ಕಣ್ಣ, ಮಾಜಿ ಸದಸ್ಯ ಮರೂರು ವೆಂಕಟೇಶ್, ಕುದೂರು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ರಾಘವೇಂದ್ರ, ಜುಟ್ಟನಹಳ್ಳಿ ಜಯರಾಂ, ಪುರಸಭೆ ಮಾಜಿ ಸದಸ್ಯ ರೂಪೇಶ್ ಕುಮಾರ್, ವಿಎಸ್‌ಎಸ್‌ಎನ್ ಮಾಜಿ ಸದಸ್ಯ ದಂಡಿಗೆಪುರ ಅಶೋಕ್, ಬೋರ್‌ವೆಲ್ ನರಸಿಂಹಯ್ಯ, ಮಾನಗಲ್‌ಪರಮಶಿವಯ್ಯ, ಅಗಲಕೋಟೆ ಮಧು ಸೇರ್ಪಡೆ ಆಗುತ್ತಿದ್ದಾರೆ. ಸ್ವಯಂಪ್ರೇರಿತವಾಗಿ ಪಕ್ಷಕ್ಕೆ ಬರುತ್ತಿದ್ದಾರೆ ಕಾಂಗ್ರೆಸ್ ಮುಖಂಡರು ನನ್ನ ಜೊತೆ ಸಂಪರ್ಕದಲ್ಲಿದ್ದಾರೆ ಎಂದು ಮಾಜಿ ಶಾಸಕ ಎ. ಮಂಜುನಾಥ್ ಹೇಳಿದ್ದರು.


ಉದಯವಾಹಿನಿ ಚಿತ್ರ

> ಆದರೆ ಅವರ ಪಕ್ಷದವರೇ ಬೇಸತ್ತು ನಮ್ಮ ಪಕ್ಷಕ್ಕೆ ಬರುತ್ತಿದ್ದಾರೆ. ನಮ್ಮನ್ನು ನಂಬಿ ಬಂದವರನ್ನು ಪಕ್ಷಕ್ಕೆ ಸೇರಿಸಿಕೊಳ್ಳುತ್ತಿದ್ದೇವೆ. ಆ ಮೂಲಕ ಪಕ್ಷವನ್ನು ತಳಮಟ್ಟದಿಂದ ಮತ್ತಷ್ಟು ಬಲಪಡಿಸುವ ಕೆಲಸ ಮಾಡುತ್ತಿದ್ದೇವೆ
> -ಎಚ್.ಸಿ. ಬಾಲಕೃಷ್ಣ, ಶಾಸಕ

**ಸದ್ಯದಲ್ಲೇ ಪಕ್ಷ ಸೇರ್ಪಡೆ**

ಪಕ್ಷ ತೊರೆದಿರುವ ಜೆಡಿಎಸ್ ಮುಖಂಡರು ಇತ್ತೀಚೆಗೆ ಬಾಲಕೃಷ್ಣ ಮತ್ತು ಸುರೇಶ್ ಅವರನ್ನು ಬೆಂಗಳೂರಿನಲ್ಲಿ ಭೇಟಿಯಾಗಿ, ಕಾಂಗ್ರೆಸ್ ಸೇರ್ಪಡೆ ಕುರಿತು ಚರ್ಚಿಸಿದ್ದಾರೆ. ಈ ಭೇಟಿಯ ಫೋಟೊವನ್ನು ಬಾಲಕೃಷ್ಣ ಅವರು ತಮ್ಮ ಫೇಸ್‌ಬುಕ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಮಾಗಡಿಯಲ್ಲಿ ಸದ್ಯದಲ್ಲೇ ಪಕ್ಷ ಸೇರ್ಪಡೆ ಕಾರ್ಯಕ್ರಮ ನಡೆಯಲಿದೆ ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ.

# ಶಾಲೆಗೆ ಬೀಗ ಹಾಕಿ ಪ್ರತಿಭಟನೆ

• ಉದಯವಾಹಿನಿ, ಕೆಜಿಎಫ್

ಗೋಪೇನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕಾಯಂ ಶಿಕ್ಷಕರ ಕೊರತೆ ವಿರೋಧಿಸಿ, ಹಾಗೂ ಕಾಯಂ ಶಿಕ್ಷಕರನ್ನು ನೇಮಕ ಮಾಡುವಂತೆ ಒತ್ತಾಯಿಸಿ ವಿದ್ಯಾರ್ಥಿಗಳ ಪೋಷಕರು ಶಾಲೆಗೆ ಬೀಗ ಹಾಕಿ ಶುಕ್ರವಾರ ಪ್ರತಿಭಟನೆ ನಡೆಸಿದರು. ಒಂದರಿಂದ ಏಳನೇ ತರಗತಿವರೆಗಿನ ಗೋಪೇನಹಳ್ಳಿ ಶಾಲೆಯಲ್ಲಿ ಎಪ್ಪತ್ತು ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಆದರೆ, ಎರಡು ವರ್ಷದಿಂದ ಕಾಯಂ ಶಿಕ್ಷಕರನ್ನು ನಿಯೋಜನೆ ಮಾಡಿಲ್ಲ. ಇಬ್ಬರು ಗುತ್ತಿಗೆ ಶಿಕ್ಷಕರು ಕಾರ್ಯ ನಿರ್ವಹಿಸುತ್ತಿದ್ದಾರೆ. ಅವರು ಮನಸ್ಸಿಗೆ ಬಂದರೆ ಪಾಠ ಮಾಡುತ್ತಾರೆ. ಇಲ್ಲವಾದರೆ ಮಕ್ಕಳನ್ನು ಆಟದಲ್ಲಿ ತೊಡಗಿಸುತ್ತಾರೆ.

ಇದರಿಂದಾಗಿ ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ ಎಂದು ಪೋಷಕರು ಆರೋಪಿಸಿದರು. ಶಾಲೆಗೆ ಕಾಯಂ ಶಿಕ್ಷಕರನ್ನು ನಿಯೋಜಿಸಬೇಕು ಎಂದು ಕೋರಿ ಎರಡು ವರ್ಷಗಳಿಂದ ಜಿಲ್ಲಾಧಿಕಾರಿ, ಶಾಸಕರು, ಶಾಲಾ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಮನವಿ ಮಾಡುತ್ತಲೇ ಇದ್ದೇವೆ. ಆದರೆ, ನಮ್ಮ ಅಹವಾಲಿಗೆ ಸ್ಪಂದಿಸಲು ಯಾರೂ ಮುಂದಾಗುತ್ತಿಲ್ಲ. ಮಕ್ಕಳು ಶಾಲೆಗೆ ಬರುವುದು, ಮಧ್ಯಾಹ್ನ ಊಟ ನಂತರ ಆಟ ಆಡುವುದು ಸಾಮಾನ್ಯ ಎಂಬಂತಾಗಿದೆ. ಇದರಿಂದಾಗಿ ಸರ್ಕಾರಿ ಶಾಲೆಯಲ್ಲಿ ಓದುತ್ತಿರುವ ತಮ್ಮ ಮಕ್ಕಳು ಶಿಕ್ಷಣದಿಂದ ವಂಚಿರಾಗುತ್ತಿದ್ದಾರೆ ಎನ್ನುತ್ತಾರೆ ಗ್ರಾಮಸ್ಥರು. ಖಾಸಗಿ ಶಾಲೆಗಳಿಗೆ ಕಳುಹಿಸುವ ಸಾಮರ್ಥ್ಯ ನಮಗೆ ಇಲ್ಲ. ಸರ್ಕಾರಿ ಶಾಲೆಗೆ ಕಳುಹಿಸಿದರೆ, ಪಾಠ ಮಾಡಲು ಶಿಕ್ಷಕರೇ ಇಲ್ಲ. ಶಾಲೆಯ ಗೋಡೆ ಬಿರುಕು ಬಿಟ್ಟಿದೆ ಎಂದು ಗ್ರಾಮಸ್ಥರು ಹೇಳುತ್ತಾರೆ.

ಇಷ್ಟೇ ಅಲ್ಲದೆ, ಶಾಲೆಯಲ್ಲಿ ಇನ್ನೂ ಅನೇಕ ಸಮಸ್ಯೆಗಳಿವೆ. ಶುದ್ಧ ಕುಡಿಯುವ ನೀರಿನ ಘಟಕ ತಟಸ್ಥವಾಗಿರುವುದು, ಈ ಸಂಬಂಧ ಇತ್ತೀಚೆಗೆ ಶಾಲೆಗೆ ಭೇಟಿ ನೀಡಿದ ಶಾಸಕಿ ರೂಪಕಲಾ ಶಶಿಧರ್ ಅವರ ಗಮನಕ್ಕೆ ತರಲಾಗಿತ್ತು. ಆದರೆ, ಯಾವುದೇ ಪ್ರಯೋಜನವಾಗಿಲ್ಲ. ಹೀಗಾಗಿ, ಕಾಯಂ ಶಿಕ್ಷಕರನ್ನು ನೀಡುವವರೆಗೆ ಮಕ್ಕಳನ್ನು ಶಾಲೆಗೆ ಕಳಿಸುವುದಿಲ್ಲ.

ಎರಡು ದಿನ ಕಾದು ನಂತರ ಜಿಲ್ಲಾಧಿಕಾರಿ ಕಚೇರಿ ಮುಂದೆ ಪ್ರತಿಭಟನೆ ನಡೆಸುತ್ತೇವೆ ಎಂದು ವಿದ್ಯಾರ್ಥಿಯೊಬ್ಬರ ಪೋಷಕ ಮುನಿಯಪ್ಪ ಎಚ್ಚರಿಕೆ ನೀಡಿದರು. ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳು ಖಾಸಗಿ ಶಾಲೆಗಳೊಂದಿಗೆ ಹೊಂದಾಣಿಕೆ ಮಾಕೊಂಡಿದ್ದಾರೆ. ಇದೇ ಕಾರಣಕ್ಕೆ ಸರ್ಕಾರಿ ಶಾಲೆಯಲ್ಲಿ ಶಿಕ್ಷಕರ ಕೊರತೆ ಸೃಷ್ಟಿಸಲಾಗುತ್ತಿದೆ. ಈಗಾಗಲೇ ಸರ್ಕಾರಿ ಶಾಲೆಯಲ್ಲಿ ಓದುತ್ತಿದ್ದ ಹತ್ತಕ್ಕೂ ಹೆಚ್ಚು ವಿದ್ಯಾರ್ಥಿಗಳು ಖಾಸಗಿ ಶಾಲೆಗೆ ಸೇರಿದ್ದಾರೆ. ಜಾತಿ ಸಮೀಕ್ಷೆ ಎಂದು ಗುತ್ತಿಗೆ ಶಿಕ್ಷಕರು ಕೂಡ ಸರಿಯಾಗಿ ಬರುತ್ತಿಲ್ಲ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.


ಉದಯವಾಹಿನಿ ಚಿತ್ರ

**ಜನರಲ್ಲಿ ಮನವಿ**

ಪ್ರತಿಭಟನಾ ಸ್ಥಳಕ್ಕೆ ಬಂದ ಕ್ಷೇತ್ರ ಶಿಕ್ಷಣಾಧಿಕಾರಿ ಅನಿತಾ, ಪ್ರತಿಭಟನಕಾರರೊಂದಿಗೆ ಮಾತನಾಡಿದರು. ಮುಂದಿನ ತಿಂಗಳು ವರ್ಗಾವಣೆ ಪ್ರಕ್ರಿಯೆ ನಡೆಯುತ್ತದೆ. ಆಗ ಶಾಲೆಗೆ ಕಾಯಂ ಶಿಕ್ಷಕರನ್ನು ನಿಯೋಜಿಸಲಾಗುವುದು. ಅಲ್ಲಿಯವರೆಗೆ ಗುತ್ತಿಗೆ ಶಿಕ್ಷಕರು ಕೆಲಸ ಮಾಡುತ್ತಾರೆ. ಸಹಕರಿಸಬೇಕು ಎಂದು ಜನರಲ್ಲಿ ಮನವಿ ಮಾಡಿದರು.

# ಕುಡಿಯುವ ನೀರು ಯೋಜನೆಗೆ ಮನವಿ

• ಉದಯವಾಹಿನಿ, ಮೈಸೂರು

ಕೊಡಗು ಜಿಲ್ಲೆಯಲ್ಲಿ ಕುಡಿಯುವ ನೀರಿಗಾಗಿ ಬಹು ಗ್ರಾಮ ಯೋಜನೆ(ಎಂವಿಎಸ್)ಗಳಿಗೆ ತ್ವರಿತವಾಗಿ ಅನುಮೋದನೆ ನೀಡಬೇಕು ಎಂದು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್ .ಪಾಟೀಲ್ ಅವರಿಗೆ ಮನವಿ ಮಾಡಲಾಗಿದೆ ಎಂದ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ಕೇಂದ್ರ ಸಚಿವರನ್ನು ಭೇಟಿ ಮಾಡಿ, ಮನವಿ ಪತ್ರ ಸಲ್ಲಿಸಿದರು. ಕೊಡಗು ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಗೆ ಪರಿಹಾರ ಒದಗಿಸಲು 'ಎಂವಿಎಸ್'ಗೆ ತ್ವರಿತ ಅನುಮೋದನೆ ನೀಡಬೇಕಾಗಿದೆ ಎಂದು ಮಡಿಕೇರಿ ವಿಭಾಗದ ಗ್ರಾಮೀಣ ಕುಡಿಯುವ ನೀರು, ಒಳಚರಂಡಿ ವಿಭಾಗದ ಅಧಿಕಾರಿಗಳು ನನಗೆ ಮಾಹಿತಿ ನೀಡಿದ್ದರು. ಈ ಸಂಬಂಧ ಕೊಡಗು ಜಿಲ್ಲೆಯವರ ನೀರಿನ ಸಮಸ್ಯೆ ನೀಗಿಸಲು ಕೇಂದ್ರ ಜಲಶಕ್ತಿ ಸಚಿವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದೇನೆ. ಅತಿ ಶೀಘ್ರದಲ್ಲೇ ಇದಕ್ಕೆ ಅನುಮೋದನೆ ನೀಡುವ ಭರವಸೆ ನೀಡಿದ್ದಾರೆ ಎಂದು ಅವರು ಹೇಳಿದ್ದಾರೆ. ಮನವಿ ಸ್ವೀಕರಿಸಿದ ಸಚಿವರು, ಸಂಬಂಧಪಟ್ಟ ಅಧಿಕಾರಿಗಳಿಗೆ ಕೂಡಲೇ ಮಾತನಾಡಿ, ಸಮಸ್ಯೆ ಬಗೆಹರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ್ದಾರೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

**ಕೊಡಗಿನಲ್ಲಿ ಬಿಎಸ್‌ಎನ್‌ಎಲ್ ಸೇವೆ ಸರಿಪಡಿಸಲು ಕೇಂದ್ರ ಸಚಿವರಿಗೆ ಮನವಿ**

ಕೊಡಗಿನಲ್ಲಿ ಬಿಎಸ್‌ಎನ್‌ಎಲ್ ಜಾಲ ವ್ಯವಸ್ಥೆಯನ್ನು ಸರಿಪಡಿಸಲು ತ್ವರಿತವಾಗಿ ಕ್ರಮ ಕೈಗೊಳ್ಳಬೇಕು ಎಂದು ಕೇಂದ್ರ ದೂರ ಸಂಪರ್ಕ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಅವರಿಗೆ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮನವಿ ಮಾಡಿದ್ದಾರೆ. ಕೊಡಗಿನಲ್ಲಿ ಇತ್ತೀಚೆಗೆ ಧಾರಾಕಾರ ಮಳೆ ಸುರಿಯುತ್ತಿದೆ.

ಇದರಿಂದ ವಿದ್ಯುತ್ ಕಂಬಗಳು ನೆಲಕ್ಕುರುಳಿವೆ. ಅವುಗಳ ದುರಸ್ತಿಗೂ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಲಾಯಿತು. ಕೊಡಗಿನಲ್ಲಿ ಬಿಎಸ್‌ಎನ್‌ಎಲ್ ನೆಟ್‌ವರ್ಕ್ ಸೇವೆ ಅತ್ಯಂತ ಕಳಪೆಯಾಗಿದೆ. ಇಲ್ಲಿ ಟವರ್‌ಗಳನ್ನು ಬದಲಿಸಬೇಕು, ಉತ್ತಮ ಸಂಪರ್ಕ ಒದಗಿಸಬೇಕು ಎಂದು ಅಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಪ್ರಯೋಜವಾಗಿಲ್ಲ. ಈ ಬಗ್ಗೆಯೂ ಸಚಿವರ ಗಮನಕ್ಕೆ ತರಲಾಗಿದೆ ಎಂದು ಅವರು ಹೇಳಿದ್ದಾರೆ.

# ಪ್ಯಾಲಸ್ಟೀನ್ ಮೇಲಿನ ಯುದ್ಧ ನಿಲ್ಲಿಸಲು ಆಗ್ರಹ

• ಉದಯವಾಹಿನಿ, ಮಳವಳ್ಳಿ

ಪ್ಯಾಲಸ್ಟೀನ್ ಮೇಲೆ ಇಸ್ರೇಲ್ ನಡೆಸುತ್ತಿರುವ ಯುದ್ಧವನ್ನು ಖಂಡಿಸಿ ಸಿಪಿಐ(ಎಂ) ಕಾರ್ಯಕರ್ತರು ಪಟ್ಟಣ ಅನಂತರಾಂ ವೃತ್ತದ ಬಳಿ ಶುಕ್ರವಾರ ಪ್ರತಿಭಟನೆ ನಡೆಸಿ ಯುದ್ಧ ನಿಲ್ಲಿಸಿ ಶಾಂತಿಯನ್ನು ಕಾಪಾಡಬೇಕು ಎಂದು ಆಗ್ರಹಿಸಿರು. ಸಿಪಿಐ(ಎಂ) ರಾಜ್ಯ ಸಮಿತಿಯ ಸದಸ್ಯೆ ದೇವಿ ಮಾತನಾಡಿ, ಇಸ್ರೇಲ್ ಅಮೆರಿಕದ ಕುಮಕ್ಕಿನಿಂದ ಪ್ಯಾಲಸ್ಟೀನ್ ಮೇಲೆ ದಾಳಿ ನಡೆಸುವುದರ ಜೊತೆಗೆ ಇರಾನ್ ಮೇಲೂ ಸಹ ಯುದ್ಧ ಮಾಡಲು ಮುಂದಾಗಿ ಸಾವಿರಾರು ಅಮಾಯಕ ಮಕ್ಕಳು, ಮಹಿಳೆಯರು, ಪತ್ರಕರ್ತರನ್ನು ಅಮಾನುಷವಾಗಿ ಹತ್ಯೆ ಮಾಡುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಅಲಿಪ್ತ ನೀತಿಯ ಭಾಗವಾಗಿ ಪ್ಯಾಲಸ್ಟೀನ್ ಅನ್ನು ಬೆಂಬಲಿಸಬೇಕು ಎಂದು ಒತ್ತಾಯಿಸಿದರು.



ಉದಯವಾಹಿನಿ ಚಿತ್ರ

ಇಸ್ರೇಲ್‌ನ ಅಧ್ಯಕ್ಷ ಬೆಂಜಮೀನ್ ನೇತಾ ನ್ಯಾಹೂ ಅಧಿಕಾರಕ್ಕೆ ಬಂದ ನಂತರ ಉಗ್ರ ಬಲಪಂಥೀಯ ವಾದವನ್ನು ಅನುಸರಿಸುತ್ತಿದೆ. ವಿಶ್ವಸಂಸ್ಥೆಯಲ್ಲಿ ಇಸ್ರೇಲ್ ವಿರುದ್ಧ ಜಗತ್ತಿನ ರಾಷ್ಟ್ರಗಳು ಮತ ಚಲಾಯಿಸಬೇಕೆಂದಾಗ 149 ದೇಶಗಳು ಇಸ್ರೇಲ್ ವಿರುದ್ಧ ಮತ ಚಲಾಯಿಸಿ ಪ್ಯಾಲಸ್ಟೀನ್ ಪರವಾಗಿ ನಿಂತಾಗ ಭಾರತದ ನರೇಂದ್ರ ಮೋದಿ ಮತದಾನದ ವಿರುದ್ಧ ಹೊರಗೆ ಉಳಿದಿರುವುದು ಅಲಿಪ್ತ ನೀತಿಗೆ ಮತ್ತು ಸೌಹಾರ್ದಕ್ಕೆ ಶಾಂತಿಗೆ ಬಗೆದ ದ್ರೋಹವಾಗಿದಂತಾಗಿದೆ ಎಂದು ಹೇಳಿದರು.

# ಪಾರ್ಕಿಂಗ್ ಸಮಸ್ಯೆ ಬಗೆಹರಿಸಲು ಆಗ್ರಹ

• ಉದಯವಾಹಿನಿ, ಸೋಮವಾರಪೇಟೆ

ಪಟ್ಟಣ ಪಂಚಾಯಿತಿ ಕೌನ್ಸಿಲ್ ಸಾಮಾನ್ಯ ಸಭೆ ಅಧ್ಯಕ್ಷೆ ಜಯಂತಿ ಶಿವಕುಮಾರ್ ಅಧ್ಯಕ್ಷತೆಯಲ್ಲಿ ಪಂಚಾಯಿತಿ ಸಭಾಂಗಣದಲ್ಲಿ ಶುಕ್ರವಾರ ನಡೆಯಿತು. ಪಟ್ಟಣದ ವ್ಯಾಪ್ತಿಯಲ್ಲಿ ವಾಹನಗಳ ಪಾರ್ಕಿಂಗ್ ವ್ಯವಸ್ಥೆ ಹದಗೆಟ್ಟಿದ್ದು, ಕೂಡಲೇ ಸಮಸ್ಯೆ ಬಗೆಹರಿಸಬೇಕೆಂದು ಸದಸ್ಯರು ಆಗ್ರಹಿಸಿದರು. ಪಟ್ಟಣದ ಖಾಸಗಿ ಬಸ್ ನಿಲ್ದಾಣ ಸೇರಿದಂತೆ ಎಲ್ಲೆಂದರಲ್ಲಿ ವಾಹನಗಳನ್ನು ಅಡ್ಡಾದಿಡ್ಡಿ ನಿಲ್ಲಿಸಲಾಗುತ್ತಿದೆ.

ರಸ್ತೆಯ ಎರಡೂ ಬದಿಯಲ್ಲಿ ವಾಹನಗಳನ್ನು ನಿಲ್ಲಿಸುವುದರಿಂದ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿದೆ ಎಂದು ಸದಸ್ಯರು ದೂರಿದರು. ಪಟ್ಟಣದ ಖಾಸಗಿ ಬಸ್ ನಿಲ್ದಾಣದಲ್ಲಿ ಬೆಳಿಗ್ಗೆಯಿಂದ ಸಂಜೆಯವರೆಗೂ ಖಾಸಗಿ ವಾಹನಗಳೇ ತುಂಬಿರುತ್ತವೆ. ಬಸ್ ನಿಲ್ಲಿಸಲು ಸ್ಥಳ ಇರುವುದಿಲ್ಲ. ವಾಹನಗಳನ್ನು ನಿಯಂತ್ರಿಸಬೇಕಾದ ಪೊಲೀಸ್ ಇಲಾಖೆ ಯಾವುದೇ ಕ್ರಮ ಕೈಗೊಳ್ಳಲು ಮುಂದಾಗುತ್ತಿಲ್ಲ. ಕುಡಿಯುವ ನೀರಿನ ಪೈಪ್‌ಲೈನ್ ಸಂಪರ್ಕಕ್ಕೆ ರಸ್ತೆಯಲ್ಲಿ ಗುಂಡಿ ತೆಗೆದಿದ್ದು, ಇದರಿಂದ ರಸ್ತೆಯ ಎರಡೂ ಬದಿಯಲ್ಲಿ ವಾಹನಗಳನ್ನು ನಿಲ್ಲಿಸುತ್ತಿದ್ದಾರೆ.

ನೋ ಪಾರ್ಕಿಂಗ್ ಬೋರ್ಡಿನ ಪಕ್ಕದಲ್ಲಿಯೇ ವಾಹನಗಳನ್ನು ನಿಲ್ಲಿಸಲಾಗುತ್ತಿದೆ. ಪಾರ್ಕಿಂಗ್ ಸಮಸ್ಯೆಯನ್ನು ನಿಯಂತ್ರಿಸಲು ಪೊಲೀಸ್ ಇಲಾಖೆಗೆ ಸಾಧ್ಯವಾಗದಿದ್ದಲ್ಲಿ ಪಂಚಾಯಿತಿ ವತಿಯಿಂದಲೇ ಸೂಕ್ತ ವ್ಯವಸ್ಥೆ ಮಾಡಬೇಕಿದೆ ಎಂದು ಸಂಜೀವ, ಕಿರಣ್, ಮಹೇಶ್ ಒತ್ತಾಯಿಸಿದರು.


ಉದಯವಾಹಿನಿ ಚಿತ್ರ

> ಅಸ್ಸಾಮಿ ಕಾರ್ಮಿಕರಿದ್ದಾರೆ ಎಂದು ಲೈಸೆನ್ಸ್ ನೀಡಲು ಮುಂದಾಗದಿದ್ದಲ್ಲಿ, ಪಟ್ಟಣದ ಹೆಚ್ಚಿನ ಅಂಗಡಿ ಮುಂಗಟ್ಟುಗಳ ಬಾಗಿಲು ಮುಚ್ಚಬೇಕಾಗುತ್ತದೆ. ಎಲ್ಲೆಡೆ ಅವರೇ ಮುಂಚೂಣಿಯಲ್ಲಿದ್ದಾರೆ. ಅವರ ಸಂಪೂರ್ಣ ಮಾಹಿತಿಯನ್ನು ಅಂಗಡಿ ಮತ್ತು ತೋಟಗಳ ಮಾಲೀಕರು ನೀಡಬೇಕಿದೆ. ಇದರ ವಿರುದ್ಧ ಸೂಕ್ತ ಕ್ರಮಕ್ಕೆ ಜಿಲ್ಲಾದಿಕಾರಿಗಳು, ಪೊಲೀಸ್ ವರಿಷ್ಠಾಧಿಕಾರಿಗಳಿಗೆ ದೂರು ನೀಡುವಂತೆ ಸಭೆಯಲ್ಲಿ ಸದಸ್ಯರಾದ ಮೃತ್ಯುಂಜಯ, ಸಂಜೀವ, ಶೀಲಾ ಡಿಸೋಜ ತಿಳಿಸಿದರು.

# ಕೈವೈಎನ್-ಎಸ್‌ಎನ್‌ಎನ್; ಯಾಕಿಷ್ಟು ಜಿದ್ದಾಜಿದ್ದಿ?

## ಡಿಸಿಸಿ ಬ್ಯಾಂಕ್, ಹಾಲು ಒಕ್ಕೂಟದ ಹಿಡಿತಕ್ಕಾಗಿ ಜಿಲ್ಲೆಯಲ್ಲಿ ಕಾಂಗ್ರೆಸ್ ಇಬ್ಬಾಗ

• ಉದಯವಾಹಿನಿ, ಕೋಲಾರ

ಡಿಸಿಸಿ ಬ್ಯಾಂಕ್ ಹಾಗೂ ಕೋಲಾರ ಹಾಲು ಒಕ್ಕೂಟದ (ಕೋಮುಲ್) ಮೇಲಿನ ಹಿಡಿತದ ವಿಚಾರವಾಗಿ ಕಳೆದ ಮೂರ್ನಾಲ್ಕು ತಿಂಗಳಿನಿಂದ ಜಿಲ್ಲಾ ಕಾಂಗ್ರೆಸ್‌ನಲ್ಲಿ ನಡೆಯುತ್ತಿರುವ ಜಟಾಪಟಿ ಮತ್ತಷ್ಟು ಜೋರಾಗಿದ್ದು, ಪಕ್ಷವನ್ನು ಇಬ್ಬಾಗವಾಗಿಸಿದೆ. ಅದರಲ್ಲೂ ಕೋಮುಲ್ ಚುನಾವಣೆ ವಿಚಾರದಲ್ಲಿ ಕಾಂಗ್ರೆಸ್ ಶಾಸಕರಾದ ಮಾಲೂರಿನ ಕೆ.ವೈ. ನಂಜೇಗೌಡ ಹಾಗೂ ಬಂಗಾರಪೇಟೆಯ ಎಸ್. ಎನ್.ನಾರಾಯಣಸ್ವಾಮಿ ನಡುವೆ ಜಿದ್ದಾಜಿದ್ದಿಯೇ ಏರ್ಪಟ್ಟಿದೆ.



ಉದಯವಾಹಿನಿ ಚಿತ್ರ



> ಎಎನ್‌ಎನ್ ಮನಸ್ಸಿಗೆ ಬಂದಂತೆ ಮಾತನಾಡುತ್ತಿದ್ದಾರೆ. ನಾವು ಏನೇ ಮಾಡಿದರೂ ಹೈಕಮಾಂಡ್ ಗಮನಿಸುತ್ತಿರುತ್ತದೆ. ಪಕ್ಷಕ್ಕೆ ಧಕ್ಕೆಯಾಗುವ ತೀರ್ಮಾನ ಕೈಗೊಂಡರೆ ಹೈಕಮಾಂಡ್ ಸುಮ್ಮನಿರಲ್ಲ
> -ಕೆ.ವೈ. ನಂಜೇಗೌಡ ಶಾಸಕ ಮಾಲೂರು

ಒಂದೇ ಪಕ್ಷದ ಇವರಿಬ್ಬರು ಆಡಳಿತ ಪಕ್ಷ ಹಾಗೂ ವಿರೋಧ ಪಕ್ಷದವರಂತೆ ಕಚ್ಚಾಟದಲ್ಲಿ ತೊಡಗಿದ್ದಾರೆ. ಇಬ್ಬರೂ ಈ ಬಾರಿ ಕೋಮುಲ್ ಅಧ್ಯಕ್ಷ ಸ್ಥಾನದ ಮೇಲೆ ಕಣ್ಣಿಟ್ಟಿದ್ದು, ಅದಕ್ಕಾಗಿ ತಮ್ಮ ಬೆಂಬಲಿಗರನ್ನು ನಿರ್ದೇಶಕರ ಸ್ಥಾನಕ್ಕೆ ಕಣಕ್ಕಿಳಿಸಿ ಗೆಲ್ಲಿಸಿಕೊಳ್ಳಲು ಪ್ರಯತ್ನಿಸುತ್ತಿದ್ದಾರೆ. ಜೊತೆಗೆ ನಾರಾಯಣಸ್ವಾಮಿ ಅವರು ಹಿಂದಿನ ಕೋಚಿಮುಲ್ ಹಗರಣಗಳನ್ನು ಪದೇಪದೇ ಪ್ರಸ್ತಾಪ ಮಾಡಿ ತನಿಖೆಗೆ ಒತ್ತಾಯಿಸುತ್ತಿದ್ದಾರೆ. ಹಗರಣ ಬಯಲಿಗೆಳೆಯಬಹುದು ಎಂಬ ಕಾರಣಕ್ಕೆ ತಮ್ಮನ್ನು ಕೋಮುಲ್‌ಗೆ ಬಾರದಂತೆ ತಡೆಯಲು ಪ್ರಯತ್ನ ನಡೆದಿದೆ ಎಂಬ ಆರೋಪವನ್ನೂ ಅವರು ಮಾಡಿದ್ದಾರೆ. ರಮೇಶ್ ಕುಮಾರ್ ತಮ್ಮ ಹೈಕಮಾಂಡ್ ಅಲ್ಲ ಎಂದಿದ್ದಾರೆ.



> ಕೋಲಾರ ಜಿಲ್ಲೆಯಲ್ಲಿ ನಡೆಯುತ್ತಿರುವ ಎಲ್ಲಾ ವಿದ್ಯಮಾನಗಳನ್ನು ಸಿಎಂ, ಕೆಪಿಸಿಸಿ ಅಧ್ಯಕ್ಷರು ಗಮನಿಸುತ್ತಿದ್ದಾರೆ. ಸೂಕ್ತ ಸಮಯದಲ್ಲಿ ನಿರ್ಧಾರ ಕೈಗೊಳ್ಳುತ್ತಾರೆ
> -ಎಸ್.ಎನ್. ನಾರಾಯಣಸ್ವಾಮಿ ಶಾಸಕ ಬಂಗಾರಪೇಟೆ

ಇದು ಇವರಿಬ್ಬರ ಜಟಾಪಟಿಯನ್ನು ಮತ್ತಷ್ಟು ಹೆಚ್ಚಿಸಿದೆ.

ಈಚೆಗೆ ಡಿಸಿಸಿ ಬ್ಯಾಂಕ್ ನಿರ್ದೇಶಕರ ಚುನಾವಣೆಯಲ್ಲಿ ಇನ್ನಿತರ ಸಂಘಗಳ ಕ್ಷೇತ್ರದಿಂದ ಬ್ಯಾಲಹಳ್ಳಿ ಗೋವಿಂದಗೌಡ ವಿರುದ್ಧ ನಂಜೇಗೌಡ ಬೆಂಬಲಿತ ಅಭ್ಯರ್ಥಿ ಮಾಲೂರಿನ ಬಿ. ಆರ್. ಶ್ರೀನಿವಾಸ್ ಸೋಲು ಕಂಡರು. ಬ್ಯಾಲಹಳ್ಳಿ ಅವರನ್ನು ಮಣಿಸಲು ಘಟಬಂಧನ್ ಪಟ್ಟ ಪ್ರಯತ್ನ ಸಾಕಾಗಲಿಲ್ಲ. ಏಕೆಂದರೆ ಗೋವಿಂದಗೌಡರಿಗೆ ಎಸ್.ಎನ್.ನಾರಾಯಣಸ್ವಾಮಿ ಹಾಗೂ ಶಾಸಕಿ ರೂಪಕಲಾ ಶಶಿಧರ್ ಅವರ ಸಹಕಾರವಿತ್ತು. ಇದು ಮಾಲೂರು ಶಾಸಕರಿಗೆ ಸಿಟ್ಟು ತರಿಸಿದೆ. ಮೊನ್ನೆ ಕೋಮುಲ್ ಚುನಾವಣೆಗೆ ಬಂಗಾರಪೇಟೆ ಕ್ಷೇತ್ರದಿಂದ ನಾರಾಯಣಸ್ವಾಮಿ ನಾಮಪತ್ರ ಸಲ್ಲಿಸುವಾಗ ಬ್ಯಾಲಹಳ್ಳಿ ಕೂಡ ಜೊತೆಗಿದ್ದಿದ್ದು ಗಮನ ಸೆಳೆಯಿತು. ಈಚೆಗೆ ನಡೆದ ನಂಜೇಗೌಡ ಹಾಗೂ ನಾರಾಯಣಸ್ವಾಮಿ ಅವರ ಜನ್ಮದಿನ ಆಚರಣೆಗಳು ಅವರ ಶಕ್ತಿ ಪ್ರದರ್ಶನದಂತಿತ್ತು. ಕಾಂಗ್ರೆಸ್ ಬಣ ಎರಡೇ ಮೂರಾ ಕೋಲಾರ ಕಾಂಗ್ರೆಸ್‌ನಲ್ಲಿ ಘಟಬಂಧನ್ ಕೆ.ಎಚ್.ಮುನಿಯಪ್ಪ ಬಣದ ಜೊತೆಗೆ ಎಎನ್‌ಎನ್ ಬಣವೊಂದು ಈಗ ಸೃಷ್ಟಿಯಾಗಿದೆ. ಹೀಗಾಗಿ ಮೂರು ಬಣ ಎನ್ನಬಹುದು. ಆದರೆ ಎಎನ್‌ಎನ್ ಬಣದಲ್ಲಿರುವ ಕೆಲವರು ಕೆಎಚ್ ಬಣದ ಬೆಂಬಲಿಗರೂ ಇದ್ದಾರೆ. ಹೀಗಾಗಿ ಎರಡು ಬಣವೊ ಮೂರು ಬಣವೋ ಎಂಬ ಗೊಂದಲ ಕಾಂಗ್ರೆಸ್ ಕಾರ್ಯಕರ್ತರಿಗಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ:** ತುಂಬಾ ಚಿಂತೆ ಮತ್ತು ಒತ್ತಡ ರಕ್ತದೊತ್ತಡವನ್ನು ಉಂಟುಮಾಡಬಹುದು. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ.

**ವೃಷಭ:** ನಿಮ್ಮ ಕುಟುಂಬ ಸದಸ್ಯರಿಗೆ ಧನಾತ್ಮಕ ಪ್ರಯೋಜನಗಳ ಸಲಹೆಗಳನ್ನು ನೀಡುವ ಮೂಲಕ ಉಪಯುಕ್ತತೆಯ ಬಲವನ್ನು ಅಭಿವೃದ್ಧಿಪಡಿಸಿ. ಭಿನ್ನಾಭಿಪ್ರಾಯಗಳ ಕಾರಣ ವೈಯಕ್ತಿಕ ಸಂಬಂಧದಲ್ಲಿ ಬಿರುಕು ಬಿಡಬಹುದು.

**ಮಿಥುನ:** ವಿಶ್ರಾಂತಿಯ ಸಲುವಾಗಿ ನಿಕಟ ಸ್ನೇಹಿತರೊಂದಿಗೆ ಸ್ವಲ್ಪ ಸಮಯ ಕಳೆಯಿರಿ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು.

**ಕರ್ಕಾಟಕ:** ನಿಮ್ಮ ಗೌಪ್ಯ ಮಾಹಿತಿಯನ್ನು ನಿಮ್ಮ ಸಂಗಾತಿಯ ಜೊತೆ ಹಂಚಿಕೊಳ್ಳುವ ಮೊದಲು ಯೋಚಿಸಿ. ಅವಳು ಅದನ್ನು ಬೇರೆಯವರಿಗೆ ಹೇಳಬಹುದಾದ್ದರಿಂದ ಸಾಧ್ಯವಾದರೆ ಅದನ್ನು ತಪ್ಪಿಸಲು ಪ್ರಯತ್ನಿಸಿ.

**ಸಿಂಹ:** ಪ್ರೇಮಿಗಳು ಕುಟುಂಬದ ಭಾವನೆಗಳ ಬಗ್ಗೆ ತುಂಬ ಕಾಳಜಿ ಹೊಂದಿರುತ್ತಾರೆ. ನಿಮಗೆ ನೀವು ಸಮಯವನ್ನು ನೀಡುವುದು ತಿಳಿದಿದೆ ಮತ್ತು ಇಂದು ನೀವು ಸಾಕಷ್ಟು ಉಚಿತ ಸಮಯವನ್ನು ಪಡೆಯುವ ಸಾಧ್ಯತೆಯಿದೆ.

**ಕನ್ಯಾ:** ಹಣದ ಸ್ಥಾನ, ಆರ್ಥಿಕ ಸಮಸ್ಯೆಗಳು ಒತ್ತಡದ ಮೂಲವಾಗಿರುತ್ತವೆ. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ನಿಮ್ಮ ಜೀವನದಲ್ಲಿ ಒಂದು ಭವ್ಯವಾದ ಲಯವನ್ನು ರೂಪಿಸಿಕೊಳ್ಳಿ.

**ತುಲಾ:** ಸೃಜನಶೀಲ ಆಸಕ್ತಿಗಳು ನಿಮ್ಮನ್ನು ಶಾಂತವಾಗಿರಿಸುತ್ತವೆ. ನಿಮ್ಮ ಹಣವನ್ನು ಉಳಿಸಲು ನಿಮ್ಮ ಮನೆಯ ಜನರೊಂದಿಗೆ ಮಾತನಾಡಬೇಕು. ಅವರ ಸಲಹೆ ನಿಮ್ಮ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಲು ಸಹಾಯಕವಾಗುತ್ತದೆ.

**ವೃಶ್ಚಿಕ:** ಆಶಾವಾದಿಗಳಾಗಿರಿ ಮತ್ತು ಜೀವನದ ಉಜ್ವಲ ಬದಿಯನ್ನು ನೋಡಿ. ನಿಮ್ಮ ಆತ್ಮವಿಶ್ವಾಸಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು ಮತ್ತು ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ.

**ಧನಸ್ಸು:** ಕುಟುಂಬದ ವೈದ್ಯಕೀಯ ವೆಚ್ಚದಲ್ಲಿ ಹೆಚ್ಚಳವನ್ನು ತಳ್ಳಿಹಾಕಲು ಸಾಧ್ಯವಿಲ್ಲ. ಇಂದು ಮಾಡಿದ ಹೂಡಿಕೆ ನಿಮ್ಮ ಅಭ್ಯುದಯ ಮತ್ತು ಆರ್ಥಿಕ ಭದ್ರತೆಯನ್ನು ಹೆಚ್ಚಿಸುತ್ತದೆ.

**ಮಕರ:** ಯಾವುದೇ ದೀರ್ಘಕಾಲೀನ ಹೂಡಿಕೆಗಳನ್ನು ತಪ್ಪಿಸಿ, ನಿಮ್ಮ ಸ್ನೇಹಿತರ ಜೊತೆ ಕೆಲವು ಆಹ್ಲಾದಕರ ಕ್ಷಣಗಳನ್ನು ಕಳೆಯಲು ಪ್ರಯತ್ನಿಸಿ. ಕುಟುಂಬದ ಸದಸ್ಯರು ಬೆಂಬಲ ನೀಡಿದರೂ ತುಂಬ ಬೇಡಿಕೆಯಿಡುತ್ತಾರೆ.

**ಕುಂಭ:** ಧ್ಯಾನ ಮತ್ತು ಯೋಗವನ್ನು ಆಧ್ಯಾತ್ಮಿಕ, ಭೌತಿಕ ಲಾಭಗಳಿಗಾಗಿ ಆಚರಿಸಬೇಕು. ನೀವು ದೀರ್ಘಕಾಲದ ಆಧಾರದ ಮೇಲೆ ಹೂಡಿಕೆ ಮಾಡಿದಲ್ಲಿ ಗಣನೀಯ ಲಾಭ ಮಾಡುತ್ತೀರಿ.

**ಮೀನ:** ಸಂತಸದ ಪ್ರಯಾಣ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ.

---

● ಶೈಕ್ಷಣಿಕ ಸುಧಾರಣೆಯಲ್ಲಿ ಯಶಸ್ಸು ಕಂಡರೂ ಎಸ್.ಎಸ್.ಎಲ್.ಸಿ ಫಲಿತಾಂಶದ ರ್‍ಯಾಂಕಿಂಗ್‌ನಲ್ಲಿ ಸ್ವಲ್ಪ ಹಿನ್ನಡೆ

# ಪ್ರಾಥಮಿಕ, ಪ್ರೌಢಶಾಲೆಗಳ ಶೈಕ್ಷಣಿಕ ಬಲವರ್ಧನೆಗೆ ವಿದ್ಯಾಶಕ್ತಿ ಯೋಜನೆ

• ಉದಯವಾಹಿನಿ ಧಾರವಾಡ

ಜಿಲ್ಲೆಯನ್ನು ಮತ್ತೆ ಶಿಕ್ಷಣ ಕಾಶಿಯನ್ನಾಗಿಸಲು ಕಳೆದ ವರ್ಷದಿಂದ ಆರಂಭಿಸಿರುವ ಮಿಷನ್ ವಿದ್ಯಾಕಾಶಿ ಶೈಕ್ಷಣಿಕ ಸುಧಾರಣೆಯಲ್ಲಿ ಯಶಸ್ಸು ಕಂಡರೂ ಎಸ್.ಎಸ್.ಎಲ್.ಸಿ ಫಲಿತಾಂಶದ ರ್‍ಯಾಂಕಿಂಗ್‌ನಲ್ಲಿ ಸ್ವಲ್ಪ ಹಿನ್ನಡೆ ಆಯಿತು. ಆದರೆ ದೀರ್ಘಕಾಲದಲ್ಲಿ ಮಿಷನ್ ವಿದ್ಯಾಕಾಶಿಯ ಪರಿಣಾಮಕಾರಿ ಬದಲಾವಣೆ, ಪ್ರಯೋಜನೆ, ಸುಧಾರಣೆಗಳು ಎದ್ದು ಕಾಣುತ್ತವೆ. ಈ ಹಿನ್ನಲೆಯಲ್ಲಿ ಪ್ರಸಕ್ತ ವರ್ಷದ ಮಿಷನ್ ವಿದ್ಯಾಕಾಶಿಯಲ್ಲಿ ಪ್ರಾಥಮಿಕ, ಪ್ರೌಢಶಾಲೆಗಳ ಶೈಕ್ಷಣಿಕ ಸುಧಾರಣೆ ಬಲವರ್ಧನೆಗೆ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.


ಉದಯವಾಹಿನಿ ಚಿತ್ರ

> ಕಳೆದ ಸಾಲಿನಲ್ಲಿ ಜಿಲ್ಲೆಯ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ನಡೆಸಿದ ಬೇಸ್ ಲೈನ್ ಪರೀಕ್ಷೆಯಲ್ಲಿ, ವಿದ್ಯಾರ್ಥಿಗಳಿಗೆ ಇಂಗ್ಲೀಷ್, ಗಣಿತ ಮತ್ತು ವಿಜ್ಞಾನ ವಿಷಯಗಳು ಕಠಿಣವಾಗಿದ್ದು ಮತ್ತು ಈ ವಿಷಯಗಳ ಬೇಸಿಕ್ ಅಂಶಗಳು ತಿಳಿದಿರದ ಬಗ್ಗೆ ಕಂಡುಬಂದಿತ್ತು. ಈ ಸಮಸ್ಯೆಯ ಪರಿಹಾರ ಮತ್ತು ಪ್ರಾಥಮಿಕ ಹಂತದಿಂದಲೇ ವಿದ್ಯಾರ್ಥಿಗಳಲ್ಲಿ ವಿಶೇಷವಾಗಿ ಗ್ರಾಮೀಣ ಹಾಗೂ ಸ್ಲಂ ವ್ಯಾಪ್ತಿಗೆ ಒಳಪಡುವ ಪ್ರದೇಶದ ಶಾಲೆಗಳ ಮಕ್ಕಳಲ್ಲಿ ಕಠಿಣವೆನಿಸುವ ವಿಷಯಗಳ ಕುರಿತು ಅಗತ್ಯ ಜ್ಞಾನ, ತರಬೇತಿ ಮತ್ತು ಕಲಿಕೆಯನ್ನು ರೂಢಿಗೊಳಿಸುವುದು ಮಹತ್ವದ್ದಾಗಿದೆ - ಜಿಲ್ಲಾಧಿಕಾರಿ

ಧಾರವಾಡ ಐಐಐಟಿ ಸಹಯೋಗದಲ್ಲಿ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಯ 6ನೇ, 7ನೇ ಮತ್ತು 8ನೇ ತರಗತಿಯ ವಿದ್ಯಾರ್ಥಿಗಳಿಗೆ ಆನ್ ಲೈನ್ ಮೂಲಕ ಶಾಲೆಯ ಸ್ಮಾರ್ಟ ಬೋರ್ಡಗಳಿಂದ ನೇರ ಪಾಠಗಳನ್ನು ಕಲಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಅವರು ಧಾರವಾಡ ಐಐಐಟಿ ಯ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಮತ್ತು ಶಾಲಾ ಶಿಕ್ಷಣ ಇಲಾಖೆ ಆಯೋಜಿಸಿದ್ದ ಮಿಷನ್ ವಿದ್ಯಾಕಾಶಿ ಯೋಜನೆಯಡಿ ವಿದ್ಯಾಶಕ್ತಿ ಕಾರ್ಯಕ್ರಮ ತರಬೇತಿ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ವಿದ್ಯಾಶಕ್ತಿ ಕಾರ್ಯಕ್ರಮದ ಮೂಲಕ ಈಗಾಗಲೇ ಸ್ಮಾರ್ಟ ಬೋರ್ಡ ಹೊಂದಿರುವ ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಧಾರವಾಡ ಐಐಐಟಿ ಸಹಯೋಗದಲ್ಲಿ 6ನೇ, 7ನೇ ಮತ್ತು 8ನೇ ತರಗತಿಯ ವಿದ್ಯಾರ್ಥಿಗಳಿಗೆ ಇಂಗ್ಲೀಷ್, ಗಣಿತ ಮತ್ತು ವಿಜ್ಞಾನ ವಿಷಯಗಳಲ್ಲಿ ಆನ್ ಲೈನ್ ತರಗತಿಗಳ ಮೂಲಕ ಉಚಿತವಾಗಿ ಮತ್ತು ನೇರವಾಗಿ ಲೈವ್ ಕ್ಲಾಸ್ ಮಾಡಲಾಗುತ್ತದೆ.

ಕ್ಲಾಸ್ ನಡೆಯುವ ಸಮಯದಲ್ಲಿ ವಿದ್ಯಾರ್ಥಿಗಳ ಸಂವಹನಕ್ಕೂ ಅವಕಾಶ ಕಲ್ಪಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಮುಂದಿನ ಜುಲೈ ತಿಂಗಳಿಂದ ಸ್ಮಾರ್ಟ ಬೋರ್ಡ ಹೊಂದಿರುವ ಜಿಲ್ಲೆಯ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಐಐಐಟಿ ಧಾರವಾಡ ಅವರ ಸಹಯೋಗ ಮತ್ತು ಸಂಪನ್ಮೂಲ ವ್ಯಕ್ತಿಗಳಿಂದ ಆನ್‌ಲೈನ್ ಮೂಲಕ ಪಾಠ ಪ್ರಾರಂಭವಾಗಲಿದೆ. ಶಿಕ್ಷಕರು ಮತ್ತು ಶಿಕ್ಷಣ ಇಲಾಖೆಯ ಅಧಿಕಾರಿಗಳು ಈ ಕಾರ್ಯಕ್ರಮದಲ್ಲಿ ಸಕ್ರೀಯವಾಗಿ ಭಾಗವಹಿಸಬೇಕೆಂದು ಜಿಲ್ಲಾಧಿಕಾರಿಗಳು ಸೂಚಿಸಿದರು. ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯ ಎಲ್ಲಾ ಸರ್ಕಾರಿ ಶಾಲೆಗಳು ಮತ್ತು ಶಿಕ್ಷಕರು ಸಕ್ರೀಯವಾಗಿ ಪಾಲ್ಗೊಂಡು, ಮಿಷನ್ ವಿದ್ಯಾಕಾಶಿಯ ಕಾರ್ಯಕ್ರಮಗಳು ಮತ್ತು ಶಾಲಾ ಶಿಕ್ಷಣ ಇಲಾಖೆಯ ಯೋಜನೆಗಳನ್ನು ಯಶಸ್ವಿಯಾಗಿ ಜರುಗಿಸಬೇಕು. ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತಿಯಿಂದ ಪ್ರತಿ ಶಾಲೆಯ, ಶಿಕ್ಷಕರ ಸಮಸ್ಯೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸಿ, ಪರಿಹರಿಸಲಾಗುವುದು. ಶಿಕ್ಷಕರು ಜಿಲ್ಲೆಯ ಶೈಕ್ಷಣಿಕ ಗುಣಮಟ್ಟ ಸುಧಾರಣೆಗೆ ಪ್ರಾಮಾಣಿಕ ಪ್ರಯತ್ನ ಮಾಡಬೇಕೆಂದು ದಿವ್ಯ ಪ್ರಭು ಅವರು ಹೇಳಿದರು.

ವಿದ್ಯಾಶಕ್ತಿ ತರಬೇತಿ ಕಾರ್ಯಾಗಾರ

**ಶಿಕ್ಷಕರ ಸಮಸ್ಯೆಗಳ ಕುರಿತು ಚರ್ಚೆ ಮತ್ತು ಸ್ಪಂದನೆ**

ನಿರಂತರವಾಗಿ ಶಾಲೆಯಲ್ಲಿ ಇದ್ದು ಮಕ್ಕಳಿಗೆ ನಿಯಮಾನುಸಾರ ಪಾಠ ಮಾಡಲು ಅನುಕೂಲವಾಗುವಂತೆ ಮತ್ತು ಆಡಳಿತಾತ್ಮಕವಾಗಿ ಆಗುತ್ತಿರುವ ಸಮಸ್ಯೆಗಳ ಪರಿಹರಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವದಕ್ಕಾಗಿ ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳ, ಮುಖ್ಯ ಶಿಕ್ಷಕರ, ಮುಖ್ಯೋಪಾಧ್ಯಯರ, ಶಿಕ್ಷಕರನ್ನು ಪ್ರತಿನಿಧಿಸುವಂತೆ ಶೀಘ್ರದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಮತ್ತು ಜಿಲ್ಲಾ ಪಂಚಾಯತ ಸಿಇಓ ನೇತೃತ್ವದಲ್ಲಿ ಒಂದು ಸಭೆ ಆಯೋಜಿಸಲಾಗುತ್ತಿದೆ.

**ಕಡಿಮೆ ಫಲಿತಾಂಶದ ಶಾಲೆಗಳ ಸಮೀಕ್ಷೆ ಪೂರ್ಣ**

ಮಿಷನ್ ವಿದ್ಯಾಕಾಶಿಯಡಿ ಸಾಕಷ್ಟು ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಿದ್ದಾಗಿಯೂ ಜಿಲ್ಲೆಯ 106 ಪ್ರೌಢಶಾಲೆಗಳಲ್ಲಿ ಎಸ್.ಎಸ್.ಎಲ್.ಸಿ ಫಲಿತಾಂಶವು ಶೇ. 50 ಕ್ಕಿಂತ ಕಡಿಮೆಯಾಗಿದೆ. ಮತ್ತು ಆರು ಶಾಲೆಗಳು ಶೂನ್ಯ ಫಲಿತಾಂಶ ಪಡೆದಿವೆ. ಈ ಕುರಿತು ಶೈಕ್ಷಣಿಕ ತಂಡಗಳಿಂದ ಆಯಾ ಶಾಲೆಗಳಿಗೆ ಭೇಟಿ ನೀಡಿ, ಫಲಿತಾಂಶ ಕಡಿಮೆಯಾಗಲು ಕಾರಣ ಮತ್ತು ಅಲ್ಲಿನ ಸೌಲಭ್ಯಗಳ ಕುರಿತು ವಿವರ ಸಂಗ್ರಹಿಸಲಾಗಿದೆ. ಅಧಿಕಾರಿಗಳು ಸಂಗ್ರಹಿಸಿದ ಮಾಹಿತಿಯನ್ನು ವಿಶ್ಲೇಷಣೆ ಮಾಡುತ್ತಿದ್ದಾರೆ. ಲೋಪ ಕಂಡು ಬಂದಲ್ಲಿ ಶಿಕ್ಷಣ ಇಲಾಖೆಯ ನಿಯಮಾನುಸಾರ ಸಂಬಂಧಿಸಿದವರ ಮೇಲೆ ಸೂಕ್ತ ಕ್ರಮ ಕೈಗೊಳ್ಳಲು ನಿರ್ಧರಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

---

## ಯೋಗ ದಿನಾಚರಣೆ ಪೂರ್ವಭ್ಯಾಸ


ಉದಯವಾಹಿನಿ ಚಿತ್ರ

• ಉದಯವಾಹಿನಿ ಚಿತ್ರದುರ್ಗ

11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಮುನ್ನಾದಿನವಾದ ಶುಕ್ರವಾರ ನಗರದ ಎಸ್ ಆರ್ ಎಸ್ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿಗಳಿಗೆ ಪೂರ್ವಭಾವಿ ತರಬೇತಿ ನೀಡಲಾಯಿತು. ತರಬೇತಿ ನೀಡಿ ಮಾತನಾಡಿದ ಭಾರತೀಯ ಯೋಗ ಶಿಕ್ಷಣ ಸಂಸ್ಥೆಯ ಯೋಗ ಪ್ರಚಾರಕ ರವಿ ಕೆ.ಅಂಬೇಕರ್ 11ನೇ ವಿಶ್ವ ಯೋಗ ದಿನಾಚರಣೆಯು ಯೋಗದ ಹಲವು ಪ್ರಯೋಜನಗಳನ್ನು ಎತ್ತಿಹಿಡಿಯುವ, ವೈಯಕ್ತಿಕ ಆರೋಗ್ಯದ ಜೊತೆಗೆ ಭೂಮಿಯ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವ ಮತ್ತು ಯೋಗವನ್ನು ಜಾಗತಿಕ ಸಾಮರಸ್ಯ ಮತ್ತು ಯೋಗಕ್ಷೇಮಕ್ಕಾಗಿ ಒಂದು ಸಾಧನವಾಗಿ ಉತ್ತೇಜಿಸುವ ಗುರಿಯನ್ನು ಹೊಂದಿದೆ ಸಂಪೂರ್ಣ ವಿಶ್ವದ ಜನರು ಆರೋಗ್ಯವಂತರಾಗಿರಲು ಯೋಗ ಮೊರೆ ಹೋಗುವುದು ಅವಶ್ಯಕ ಎಂದು ಹೇಳಿದರು. ಪ್ರಾಂಶುಪಾಲರಾದ ಪ್ರಭಾಕರ್, ದೈಹಿಕ ಶಿಕ್ಷಕರಾದ ಶೇಖರ್ ನಾಯಕ್ ಉಪಸ್ಥಿತರಿದ್ದರು.

---

## ಸಮಯಕ್ಕೆ ಸರಿಯಾಗಿ ಬಾರದ ವಸತಿ ಶಾಲೆಯ ಸಿಬ್ಬಂದಿ

### ಇನ್ನೂ ಯಾಕೇ ಆಗಿಲ್ಲ ಇವರ ಮೇಲೆ ಕ್ರಮ..?

• ಉದಯವಾಹಿನಿ ಕೆಂಭಾವಿ

ಪಟ್ಟಣದ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಜೂ. 11 ರಂದು ಸಮಯ ಬೆಳಿಗ್ಗೆ 11 ಗಂಟೆಯಾದರು ಯಾವುದೇ ಸಿಬ್ಬಂದಿ ಪ್ರಾಂಶುಪಾಲರು ಅಥವಾ ಶಿಕ್ಷಕರು ಹಾಜರಾಗಿರುವುದಿಲ್ಲ. ಹನ್ನೊಂದು ಗಂಟೆ ಮೇಲೆ ಬಂದು ಪಾಂಶುಪಾಲರು ಬೀಗ ತೆಗಿದಿರುತ್ತಾರೆ ಅವರಿಗೆ ನೀವು ತಡವಾಗಿ ಬಂದರೆ ನಿಮ್ಮ ಸಿಬ್ಬಂದಿ ಎಷ್ಟೊತ್ತಿಗೆ ಬರುತ್ತಾರೆ

**ಉದಯ ವಾಹಿನಿ ಹೈಲೆಟ್ಸ್**

- ಪ್ರಾಂಶುಪಾಲರಿಗೆ ಇಲ್ಲ ಸಮಯ ಪಾಲನೆ ಬಗ್ಗೆ ಅರಿವು..
- ಹನ್ನೊಂದು ಗಂಟೆ ಮೇಲೆ ತೆಗೆಯುವುದು ಶಾಲೆಯ ಬೀಗ..
- ಶಾಲೆ ಪ್ರಾರಂಭವಾಗಿ 15 ದಿನಗಳಾದರು ವಸತಿಯಲ್ಲಿ ವಿದ್ಯಾರ್ಥಿಗಳೇ ಇಲ್ಲ..
- ವಸತಿ ಗೃಹ ಇದ್ದರು ಕೊಡ ವಾಸವಾಗದ ಪ್ರಾಂಶುಪಾಲರು,
- ನಾವೇನ್ ಮಾಡಿದರೂ ನಡಿಯುತ್ತೆ ಎಂಬ ಗುಂಗಲ್ಲಿ... ವಸತಿ ಶಾಲೆಯ ಪ್ರಾಂಶುಪಾಲರು..
- ಇನ್ನೂ ಯಾಕೇ ಆಗಿಲ್ಲ ಇವರ ಮೇಲೆ ಕ್ರಮ..


ಉದಯವಾಹಿನಿ ಚಿತ್ರ



ಉದಯವಾಹಿನಿ ಚಿತ್ರ

ಎಂದು ಕೇಳಿದರೆ ಗೊತ್ತಿಲ್ಲ ಎಂದು ಹೇಳಿದರು. ಮತ್ತು ಹಾಸ್ಟೆಲ್ ಇನ್ನು ಪ್ರಾರಂಭಿಸಿಲ್ಲ ಯಾಕೆ ಎಂದು ಕೇಳಿದರೆ ಜಿಲ್ಲೆಯಲ್ಲಿ ಯಾವುದೆ ಶಾಲೆಗೆ ರೇಷನ ಬಂದಿಲ್ಲ ಎಂದು ಹೇಳಿದರು ಶಾಲೆ ಪ್ರಾರಂಭವಾಗಿ 15 ದಿನಗಳಾದರು ಒಬ್ಬ ವಿದ್ಯಾರ್ಥಿಗಳು ಬಂದಿಲ್ಲ ಯಾಕೆ ಅಂತ ಅಂದರೆ ಹಬ್ಬ ಇದೆ ಅದಕ್ಕೆ ಬಂದಿಲ್ಲ ಎಂದು ಉಢಾಪೇ ಉತ್ತರ ಹೇಳುತ್ತಾರೆ ಹೀಗಾದರೆ ಮಕ್ಕಳ ಭವಿಷ್ಯ ಹೇಗೆ ಎಂದು ಕೇಳಿದರೆ ನಾವೇನು ಮಾಡೋದು ಅಂತ ಉಡಾಫೆ ಉತ್ತರ ನೀಡುತ್ತಾರೆ.

ಇದಕ್ಕೆ ಸಂಬಂದಿಸಿದಂತೆ ಜಿಲ್ಲಾ ಸಮನ್ವಯ ಅಧಿಕಾರಿಗಳು ಸೂಕ್ತ ಕ್ರಮ ವಹಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ. ಜಿಲ್ಲಾ ಸಮಾಜ ಕಲ್ಯಾಣ ಉಪನಿರ್ದೇಶಕರಿಗೆ ಫೋನ್ ಕರೆ ಮಾಡಿದರೆ ಅವರು ಕರೆ ಸ್ವೀಕರಿಸಿಲ್ಲ ಪ್ರಾಂಶುಪಾಲರು ಸುಮಾರು 3 ವರ್ಷದಿಂದ ಒಂದು ದಿನನಾದರು ತಮ್ಮ ವಸತಿ ಗೃಹ ಇದ್ದರು ಕೊಡ ವಸತಿ ಗೃಹದಲ್ಲಿ ವಾಸವಾಗಿರುವುದಿಲ್ಲ. ಯಾಕೆ ಇರುವುದಿಲ್ಲ ಎಂದು ಕೇಳಿದರೆ ಉಡಾಫೆ ಹೇಳಿಕೆ ನೀಡುತ್ತಾರೆ. ವಿದ್ಯಾರ್ಥಿಗಳ ಜೀವನ ಜೋತೆ ಚಲ್ಲಾಟ ಆಡುತ್ತಿರುವ ಶಾಲೆಯ ಪ್ರಾಂಶುಪಾಲರು, ಸಿಬ್ಬಂದಿಗಳ ಹಾಗೂ ಸಂಬಂದಪಟ್ಟ ಅಧಿಕಾರಿಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಿ, ವಜಾಗೊಳ್ಳಿಸಬೇಕೆಂದು ಕುಮಾರ ಬೋವಿ ಕೆಂಭಾವಿ ವಲಯ ಕರವೇ ಅಧ್ಯಕ್ಷರ ಆಗ್ರಹ ಇಲ್ಲವಾದರೆ ಮುಂದಿನ ದಿನಗಳಲ್ಲಿ ಉಗ್ರವಾದ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

---

## ಸರ್ಕಾರಿ ಡಿಗ್ರಿ ಕಾಲೇಜುಗಳಿಗೆ ಅನುದಾನ- ಶಾಸಕರ ಮನವಿ

• ಉದಯವಾಹಿನಿ ಪುತ್ತೂರು

ವಿಧಾನಸಭಾ ಕ್ಷೇತ್ರದಲ್ಲಿನ ಗ್ರಾಮಾಂತರ ಪ್ರದೇಶದ ಮಕ್ಕಳ ವಿದ್ಯಾಭ್ಯಾಸಕ್ಕೆ ಪೂರಕವಾಗಿರುವ 4 ಸರ್ಕಾರಿ ಕಾಲೇಜುಗಳಿಗೆ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಅನುದಾನ ನೀಡುವಂತೆ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಅವರಿಗೆ ಶಾಸಕ ಅಶೋಕ್ ರೈ ಅವರು ಮನವಿ ನೀಡಿ ಆಗ್ರಹಿಸಿದರು.

ಬೆಂಗಳೂರಿನಲ್ಲಿ ಸಚಿವರನ್ನು ಭೇಟಿಯಾದ ಶಾಸಕರು 4 ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಶಿಕ್ಷಣಕ್ಕಾಗಿ ಬರುತ್ತಿದ್ದಾರೆ. ಈ ಕಾಲೇಜುಗಳಲ್ಲಿ ತರಗತಿ ಕೊಠಡಿ, ಗ್ರಂಥಾಲಯ, ಲ್ಯಾಬೋರೇಟರಿಗಳು ಸೇರಿದಂತೆ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಅತೀ ಅಗತ್ಯವಾಗಿದೆ. ಶಿಕ್ಷಣಕ್ಕೆ ಪೂರಕವಾದ ವ್ಯವಸ್ಥೆಗಳ ಕೊರತೆ ಇದೆ. ಹಾಗಾಗಿ ಅನುದಾನ ತಕ್ಷಣ ನೀಡುವಂತೆ ಅವರು ಮನವಿ ಮಾಡಿದರು. ಪುತ್ತೂರು ಸರ್ಕಾರಿ ಮಹಿಳಾ ಪ್ರಥಮ ಕಾಲೇಜಿಗೆ ರೂ. 4 ಕೋಟಿ, ವಿಟ್ಲ ಸರ್ಕಾರಿ ಪ್ರಥಮದರ್ಜೆ ಕಾಲೇಜಿಗೆ ರೂ.2 ಕೋಟಿ, ಉಪ್ಪಿನಂಗಡಿ ಸರ್ಕಾರಿ ಪ್ರಥಮದರ್ಜೆ ಕಾಲೇಜಿಗೆ ರೂ.2ಕೋಟಿ, ಬೆಟ್ಟಂಪಾಡಿ ಸರ್ಕಾರಿ ಪ್ರಥಮದರ್ಜೆ ಕಾಲೇಜಿಗೆ ರೂ.2ಕೋಟಿ ಅನುದಾನ ನೀಡುವಂತೆ ಅವರು ಆಗ್ರಹಿಸಿದ್ದಾರೆ.

---

## ಹಿಂದುಳಿದ ವಸತಿ ನಿಲಯದಲ್ಲಿ ಕಳಪೆ ಕಾಮಗಾರಿ


ಉದಯವಾಹಿನಿ ಚಿತ್ರ



• ಉದಯವಾಹಿನಿ ವಡಗೇರಾ

ಪಟ್ಟಣದ ಹಿಂದುಳಿದ ವರ್ಗದ ವಸತಿ ನಿಲಯದ ಸ್ನಾನಗೃಹ ಹಾಗೂ ಶೌಚಾಲಯ ಕಳಪೆ ಮಟ್ಟದ ಕಾಮಗಾರಿ ಮಾಡಿದ್ದಾರೆ ಎಂದು ಭೀಮ ಆರ್ಮಿ ತಾಲ್ಲೂಕು ಅಧ್ಯಕ್ಷ ಮರೆಪ್ಪ ಊಳ್ಳೆಸೂಗುರ ಆರೋಪಿಸಿದ್ದಾರೆ. ಸರಕಾರ ಬಡ ಮಕ್ಕಳ ಅನುಕೂಲಕ್ಕಾಗಿ ಲಕ್ಷಾನು ಗಟ್ಟಲೆ ಹಣ ಖರ್ಚು ಮಾಡಿ ಸ್ನಾನ ಗ್ರಹ ಹಾಗೂ ಶೌಚಾಲಯ ನಿರ್ಮಾಣಕ್ಕೆ ಮುಂದಾಗಿದೆ ಆದರೆ ಗುತ್ತಿಗೆದಾರರು ಅಧಿಕಾರಿಗಳ ನಿರ್ಲಕ್ಷದಿಂದ ಸಮರ್ಪಕ ಕಾಮಗಾರಿ ನಡೆದಿಲ್ಲ ಅಲ್ಲಿ ಸರಿಯಾದ ನೀರಿನ ವ್ಯವಸ್ಥೆ ಮತ್ತು ಇನ್ನಿತರ ಮೂಲಭೂತ ಸೌಕರ್ಯಗಳನ್ನು ನೀಡದೆ ಮೋಸ ಮಾಡಿ ಬೋಗಸ್ ಬಿಲ್ ಎತ್ತಿಕೊಂಡಿದ್ದಾರೆ ಇದರಿಂದ ಅಲ್ಲಿನ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸ ಮಾಡಲು ತುಂಬಾ ತೊಂದರೆ ಆಗಿದೆ ಕೂಡಲೇ ಸಂಬಂಧಿಸಿದ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿ ವಿದ್ಯಾರ್ಥಿಗಳಿಗೆ ಸಮರ್ಪಕ ಮೂಲಭೂತ ಸೌಕರ್ಯಗಳು ಒದಗಿಸಬೇಕು ಒಂದು ವೇಳೆ ನಿರ್ಲಕ್ಷ ಮಾಡಿದ್ದಲ್ಲಿ ಉಗ್ರ ಹೋರಾಟ ಮಾಡುವುದಾಗಿ ಭೀಮ್ ಆರ್ಮಿ ತಾಲ್ಲೂಕು ಅಧ್ಯಕ್ಷ ಮರೆಪ್ಪ ಊಳ್ಳೆಸೂಗೂರು ಎಚ್ಚರಿಸಿದ್ದಾರೆ.

**ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸ ಮಾಡಲು ತೊಂದರೆ**

---

## 450 ಸಸಿ ನೆಡುವಿಕೆ

• ಉದಯವಾಹಿನಿ, ಬೀದರ್

ಇಲ್ಲಿಯ ಬೆನಕನಳ್ಳಿ ರಸ್ತೆಯಲ್ಲಿ ಇರುವ ದಿಕ್ಷಿತ್ ಲೇಔಟ್‌ನಲ್ಲಿ ಭಾರತದ ರಿಯಲ್ ಎಸ್ಟೇಟ್ ಡೆವಲಪರ್ಸ್‌ಗಳ ಸಂಘಟನೆಗಳ ಒಕ್ಕೂಟದಿಂದ ಗುರುವಾರ 450 ಸಸಿಗಳನ್ನು ನೆಡಲಾಯಿತು. ಹೃದಯ ರೋಗ ತಜ್ಞ ಡಾ. ನಿತಿನ್ ಗುದಗೆ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಪರಿಸರ ಸಂರಕ್ಷಣೆಗೆ ಹೆಚ್ಚು ಹೆಚ್ಚು ಸಸಿಗಳನ್ನು ನೆಟ್ಟು ಬೆಳೆಸುವುದು ಅವಶ್ಯಕವಾಗಿದೆ. ಒಕ್ಕೂಟ ಸಸಿ ನೆಡುವ ಅಭಿಯಾನ ಹಮ್ಮಿಕೊಂಡಿರುವುದು ಶ್ಲಾಘನೀಯ ಎಂದು ಹೇಳಿದರು.

ಸ್ವಚ್ಛ, ಹಸಿರು ಹಾಗೂ ಆರೋಗ್ಯಕರ ಬೀದರ್ ನಿರ್ಮಾಣಕ್ಕಾಗಿ ಪ್ರತಿಯೊಬ್ಬರೂ ಸಂಕಲ್ಪ ಮಾಡಬೇಕು. ಈ ದಿಸೆಯಲ್ಲಿ ನಡೆಯುವ ಚಟುವಟಿಕೆಗಳಿಗೆ ಕೈಜೋಡಿಸಬೇಕು ಎಂದು ಒಕ್ಕೂಟದ ಅಧ್ಯಕ್ಷ ರವಿ ಮೂಲಗೆ ನುಡಿದರು. ಅನಿಲ್ ಖೇಣಿ, ಸದಸ್ಯರಾದ ಹಾವಶೆಟ್ಟಿ ಪಾಟೀಲ, ಗುರುರಾಜ ಸ್ವಾಮಿ, ಸತೀಶ್ ನೌಬಾದೆ,

---

## ಹದಗೆಟ್ಟ ಯಲಕಪಳ್ಳಿ ಗ್ರಾಮದ ಮುಖ್ಯ ರಸ್ತೆ

### ದುರಸ್ಥಿಗೆ, ಗ್ರಾಮಸ್ಥರ ಒತ್ತಾಯ

• ಉದಯವಾಹಿನಿ, ಚಿಂಚೋಳಿ


ಉದಯವಾಹಿನಿ ಚಿತ್ರ

ತಾಲ್ಲೂಕಿನ ಯಲಕಪಳ್ಳಿ ಗ್ರಾಮದ ಡಾಂಬರಿಕರಣ ಮುಖ್ಯ ರಸ್ತೆಯು ಸಂಪೂರ್ಣ ಹದಗೆಟ್ಟಿದೆ ಸಂಬಂಧಪಟ್ಟ ಅಧಿಕಾರಿಗಳು ಜನಪ್ರತಿನಿಧಿಗಳು ಗಮನಹರಿಸಿ ದುರಸ್ಥಿಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿಕೊಡಬೇಕು ಎಂದು ದಲಿತ ಸಂಘರ್ಷ ಸಮಿತಿ ಭೀಮವಾದ ತಾಲ್ಲೂಕಾಧ್ಯಕ್ಷ ರಾಜು ಕಳಸ್ಕರ ಒತ್ತಾಯಿಸಿದರು.

ತಾಲ್ಲೂಕಿನ ಸುಲೇಪೇಟ ಗ್ರಾಮದಿಂದ ಹುಮ್ನಾಬಾದ ತಾಲ್ಲೂಕಿಗೆ ಹೋಗುವ ಡಾಂಬರೀಕರಣ ಮುಖ್ಯ ರಸ್ತೆಯು ಸಂಪೂರ್ಣ ಹದಗೆಟ್ಟಿದೆ ಅನೇಕ ಬಾರಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮೌಖಿಕವಾಗಿ ಹೇಳಿದರೂ ಯಾವುದೇ ರೀತಿಯಲ್ಲಿ ಕ್ರಮಕೈಗೊಂಡಿಲ್ಲ, ಈ ರಸ್ತೆ ಮೇಲೆ ಅನೇಕ ಬಸ್, ಲಾರಿ, ಟ್ರಾಕ್ಟರ್, ಆಟೋ, ಜೀಪ್, ಶಾಲಾ ವಾಹನಗಳು ಓಡಾಟ ಮಾಡುತ್ತವೆ ಯಾವುದೇ ಅನಾಹುತ ಆಗುವ ಮುಂಚೆ ಅಧಿಕಾರಿಗಳು ಎಚ್ಚರವಹಿಸಿ ರಸ್ತೆ ದುರಸ್ತಿ ಮಾಡಿಸಬೇಕು.

ಈಗಾಗಲೇ ಎರಡು ಮೂರು ಬಾರಿ ಆಟೋಗಳು, ಬೈಕ್ ಸವಾರರು ಬಿದ್ದಿದ್ದು ಸಂಬಂಧಪಟ್ಟ ಅಧಿಕಾರಿಗಳಿಗೆ ಮುನ್ನೆಚ್ಚರಿಕೆ ನೀಡಲಾಗುತ್ತಿದೆವೆ ಒಂದು ವೇಳೆ ಗ್ರಾಮಸ್ಥರ ಸಮಸ್ಯೆಯನ್ನು ಬಗೆಹರಿಸದಿದ್ದರೆ ಕರ್ನಾಟಕ ದಲಿತ ಸಂಘರ್ಷ ಸಮಿತಿ ಭೀಮವಾದ ಸಂಘಟನೆ ವತಿಯಿಂದ ರಸ್ತೆ ರೋಕೋ ಹೋರಾಟ ಮಾಡಲಾಗುತ್ತದೆ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿಯ ತಾಲೂಕು ಸಂಚಾಲಕ ರಾಜು ಕಳಸ್ಕರ್ ಆಗ್ರಹಿಸಿದರು.

---

## 3.45 ಲಕ್ಷ ವಂಚನೆ: ದೂರು

• ಉದಯವಾಹಿನಿ, ಮಂಗಳೂರು

ಅಮೇರಿಕನ್ ಎಕ್ಸ್‌ಪ್ರೆಸ್ ಕ್ರೆಡಿಟ್ ಕಾರ್ಡ್ ಒದಗಿಸುವುದಾಗಿ ನಂಬಿಸಿ 3.45 ಲಕ್ಷ ಕಟ್ಟಿಸಿಕೊಂಡು ವಂಚಿಸಿದ ಬಗ್ಗೆ ಇಲ್ಲಿನ ಸೆನ್ ಅಪರಾಧ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಅಪರಿಚಿತ ವ್ಯಕ್ತಿಯೊಬ್ಬರು ನನಗೆ ಜೂನ್ 18ರಂದು ಕರೆ ಮಾಡಿ, ಅಮೆರಿಕನ್ ಎಕ್ಸ್‌ಪ್ರೆಸ್ ಕ್ರೆಡಿಟ್ ನೀಡುವುದಾಗಿ ಹೇಳಿ ವಾಟ್ಸ್ ಆ್ಯಪ್‌ಗೆ ಕೊಂಡಿಯೊಂದನ್ನು ಕಳುಹಿಸಿದರು. ಅದಕ್ಕೆ ಕ್ಲಿಕ್ ಮಾಡಿದ್ದೆ. ಅದರಲ್ಲಿ ಅಮೆರಿಕನ್ ಎಕ್ಸ್‌ಪ್ರೆಸ್ ಕ್ರೆಡಿಟ್ ಅನ್ನು ಮನೆಯ ವಿಳಾಸಕ್ಕೆ ಕಳುಹಿಸುವುದಾಗಿ ತಿಳಿಸಿದ್ದರು. ಅವರು ಸೂಚಿಸಿದ ಖಾತೆಗೆ ನನ್ನ ಆಕ್ಸಿಸ್ ಬ್ಯಾಂಕ್ ಕ್ರೆಡಿಟ್ ಕಾರ್ಡ್‌ನಿಂದ 3.45 ಲಕ್ಷ ವರ್ಗಾಯಿಸಿದ್ದೆ. ಬಳಿಕ ವಂಚನೆಗೆ ಒಳಗಾಗಿದ್ದು ತಿಳಿಯಿತು. ನನ್ನ ಇತರ ಮೂರು ಬ್ಯಾಂಕ್‌ಗಳ ಕ್ರೆಡಿಟ್ ಕಾರ್ಡ್‌ಗಳನ್ನೂ ದುರ್ಬಳಕೆ ಮಾಡಿಕೊಂಡಿದ್ದಾರೆ ಎಂದು ಸಂತ್ರಸ್ತ ವ್ಯಕ್ತಿ ದೂರಿನಲ್ಲಿ ಆರೋಪಿಸಿದ್ದಾರೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

---

## ಯೋಗ ದಿನಾಚರಣೆಯಲ್ಲಿ 2 ಸಾವಿರ ವಿದ್ಯಾರ್ಥಿಗಳು ಪಾಲ್ಗೊಳ್ಳುವ ನಿರೀಕ್ಷೆ

• ಉದಯವಾಹಿನಿ, ಯಲಬುರ್ಗಾ

ವಿಶ್ವ ಯೋಗ ದಿನಾಚರಣೆ ಪ್ರಯುಕ್ತ ಇದೇ ಜೂ.21ರಂದು ಬೆಳಿಗ್ಗೆ 5.30ಕ್ಕೆ ಸರ್ಕಾರಿ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ವೇದಿಕೆ ಕಾರ್ಯಕ್ರಮ ಹಾಗೂ ಯೋಗಾಭ್ಯಾಸ ಕಾರ್ಯಕ್ರಮ ಆಯೋಜಿಸಲಾಗಿದೆಸ ಎಂದು ತಹಶೀಲ್ದಾರ್ ಬಸವರಾಜ ತೆನ್ನಳ್ಳಿ ಹೇಳಿದರು. ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಪಟ್ಟಣದ ವಿವಿಧ ಶಾಲೆ, ಕಾಲೇಜುಗಳಿಂದ ಸುಮಾರು ಒಂದು ಸಾವಿರಕ್ಕೂ ಅಧಿಕ ಸಂಖ್ಯೆಯ ಮಕ್ಕಳು ಯೋಗಾಭ್ಯಾಸದಲ್ಲಿ ಪಾಲ್ಗೊಳ್ಳುವ ನಿರೀಕ್ಷೆಯಿದೆ. ಹಾಗೆಯೇ ವಿವಿಧ ಸಂಘ ಸಂಸ್ಥೆಯ ಪದಾಧಿಕಾರಿಗಳು, ಯೋಗ ಪಟುಗಳು ಆಗಮಿಸಲಿದ್ದಾರೆ. ಅದಕ್ಕಾಗಿ ಸ್ಥಳೀಯ ಪಂಚಾಯಿತಿಯವರು ಸ್ವಚ್ಚತೆ ಮಾಡುವುದು, ಮೈಕ್


ಉದಯವಾಹಿನಿ ಚಿತ್ರ

ಸೆಟ್ ಅಳವಡಿಸುವುದು ಹಾಗೂ ಹಾಸಿಗೆಯ ವ್ಯವಸ್ಥೆ ಮಾಡಬೇಕು ಎಂದು ಹೇಳಿದರು. ಈ ವೇಳೆ ಶಿರಸ್ತೇದಾರ ಎಂ. ದೇವರಡ್ಡಿ, ದೈಹಿಕ ಶಿಕ್ಷಣಾಧಿಕಾರಿ ವೀರಭದ್ರಪ್ಪ ಅಂಗಡಿ, ಬಸವರಾಜ ಉಮಲೂಟಿ, ಹನುಮಗೌಡ ಮಾಲಿಪಾಟೀಲ ಆಯುಷ್ ಇಲಾಖೆ ವೈದ್ಯಾಧಿಕಾರಿ ವಿವೇಕ ವಾಗ್ಲೆ ಇದ್ದರು.

---

## ಪ್ರಕೃತಿ ಸುಭಿಕ್ಷ ಅಭಿಯಾನಕ್ಕೆ ಚಾಲನೆ

• ಉದಯವಾಹಿನಿ, ಹರಿಹರ

ಮಹಾ ತಪಸ್ವಿ ಫೌಂಡೇಶನ್ ವತಿಯಿಂದ ನಗರದ ಹೊರವಲಯದ ಅಮರಾವತಿ ಆಂಜನೇಯ ಬಡಾವಣೆಯಲ್ಲಿನ ಮರುಳ ಸಿದ್ದೇಶ್ವರ ವಿಶೇಷ ಚೇತನ ಮಕ್ಕಳ ವಸತಿ ನಿಲಯದ ಆವರಣದಲ್ಲಿ ಸಾವಿರ ವೃಕ್ಷ- ಪ್ರಕೃತಿ ಸುಭಿಕ್ಷ ಅಭಿಯಾನಕ್ಕೆ ಚಾಲನೆ ನೀಡಲಾಯಿತು. ಫೌಂಡೇಶನ್‌ನ ಶಾಂತಕುಮಾರಿ ಮತ್ತು ಉಮೇಶ್ ಅವರು ಸಸಿ ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಫೌಂಡೇಶನ್ ಸ್ಥಾಪಕ ಅವಧೂತ ಕವಿಗುರುರಾಜ ಶ್ರೀ ಅವರ ಮಾರ್ಗದರ್ಶನದಲ್ಲಿ ಈ ಪರಿಸರ ಪೂರಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಪರಿಸರ ಸಂರಕ್ಷಣೆ ಮಾಡುವ ದೃಷ್ಟಿಯಿಂದ ಧಾರ್ಮಿಕ ಕಾರ್ಯಕ್ರಮಗಳ ಜೊತೆಗೆ ಸಸಿಗಳನ್ನು ನೆಟ್ಟು ಪೋಷಿಸುವ ಯೋಜನೆ ಹಮ್ಮಿಕೊಳ್ಳಲಾಗಿದೆ ಎಂದು ಶಾಂತಕುಮಾರಿ ಹೇಳಿದರು. ತಾಲ್ಲೂಕಿನ ಕಡಾರನಾಯಕನಹಳ್ಳಿ ಸರ್ಕಾರಿ ಶಾಲೆ ಆವರಣದಲ್ಲಿಯೂ ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷ ಜಿ.ಕೆ.ಶಿವರಾಜ್ ಸಸಿನೆಟ್ಟು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

---

● ಪರಿಸರ ಮತ್ತು ಜನರ ಆರೋಗ್ಯದೊಂದಿಗೆ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಚೆಲ್ಲಾಟ ಆಡುತ್ತಿದೆ

# ಭಟ್ಕಳದಲ್ಲಿ 'ನರಕ' ಸೃಷ್ಟಿಸಿದ ಒಳಚರಂಡಿ: ಜಲಮೂಲಗಳು ಕಲುಷಿತ

• ಉದಯವಾಹಿನಿ, ಭಟ್ಕಳ

ಒಳಚರಂಡಿ ಸೋರಿಕೆ ಸದ್ಯ ಪಟ್ಟಣದ ಗಂಭೀರ ಸಮಸ್ಯೆಯಾಗಿ ಪರಿಣಮಿಸಿದ್ದು, ಪರಿಸರ ಮತ್ತು ಜನರ ಆರೋಗ್ಯದೊಂದಿಗೆ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಚೆಲ್ಲಾಟ ಆಡುತ್ತಿದೆ ಎಂದು ಜನರು ದೂರುತ್ತಿದ್ದಾರೆ. ಇದಕ್ಕೆ ಪುಷ್ಟಿ ನೀಡುವಂತೆ ಪಟ್ಟಣದ ವಿವಿಧ ಭಾಗಗಳಲ್ಲಿ ನಿತ್ಯವೂ ಮ್ಯಾನ್ ಹೋಲ್‌ಗಳಿಂದ ತ್ಯಾಜ್ಯನೀರು ಸೋರಿಕೆಯಾಗಿ, ದುರ್ನಾತದ ಸ್ಥಿತಿ ನಿರ್ಮಾಣವಾಗುತ್ತಿದೆ. ಒಳಚರಂಡಿಯ ಚೇಂಬರ್‌ಗಳಿಂದ ಸೋರಿಕೆಯಾದರೆ ಅಲ್ಲಿ ಸಿಲುಕಿದ ತ್ಯಾಜ್ಯಗಳನ್ನು ತೆರವುಗೊಳಿಸಲು ಸಕ್ಕಿಂಗ್ ಯಂತ್ರಗಳ ಬಳಕೆಯೂ ಆಗುತ್ತಿಲ್ಲ. ಪೌರಕಾರ್ಮಿಕರು ಕೋಲು, ಕಬ್ಬಿಣದ ಸಲಾಕೆಗಳನ್ನು ಬಳಸಿ ಕಾರ್ಯಾಚರಿಸುವ ಸ್ಥಿತಿಯೂ ಇದೆ.

ಒಳಚರಂಡಿಯ ಚೇಂಬರ್‌ಗಳಲ್ಲಿ ಸ್ಯಾನಿಟರಿ ಪ್ಯಾಡ್‌ಗಳು, ಹರಿದ ಬಟ್ಟೆಗಳು, ಪ್ಲಾಸ್ಟಿಕ್ ಬಾಟಲಿಗಳ ರಾಶಿ ಸಿಲುಕುತ್ತಿವೆ. ಕರಗದ ತ್ಯಾಜ್ಯವಸ್ತುಗಳ ರಾಶಿಯೇ ಚೇಂಬರ್‌ಗಳಲ್ಲಿ ಸಿಲುಕಿ, ಮ್ಯಾನ್‌ಹೋಲ್‌ಗಳ ಮೂಲಕ


ಉದಯವಾಹಿನಿ ಚಿತ್ರ

**ಮ್ಯಾನ್ ಹೋಲ್‌ಗಳಲ್ಲಿ ಸೋರಿಕೆ**

ನೀರು ಸೋರಿಕೆಯಾಗುತ್ತಿದೆ ಎನ್ನುತ್ತಾರೆ ಪಟ್ಟಣದ ನಿವಾಸಿಗಳು. ಪಟ್ಟಣದ ಸಂಪೂರ್ಣ ತ್ಯಾಜ್ಯ ನೀರನ್ನು ಪಂಪಿಂಗ್ ಮಾಡಿ ವೆಂಕಟಾಪುರದಲ್ಲಿರುವ ತ್ಯಾಜ್ಯನೀರು ಸಂಸ್ಕರಣಾ ಘಟಕಕ್ಕೆ ಕಳುಹಿಸಬೇಕಾಗುತ್ತದೆ. ಹೀಗೆ ಘಟಕಕ್ಕೆ ಕಳಿಸಬೇಕಾದ ಗೌಸಿಯಾ ಸ್ಟ್ರೀಟ್‌ನಲ್ಲಿರುವ ತ್ಯಾಜ್ಯ ಪಂಪಿಂಗ್ ಘಟಕ ಕೆಟ್ಟು ಹೋದ ಕಾರಣ ತ್ಯಾಜ್ಯ ನೀರು ಚೇಂಬರ್‌ನಲ್ಲಿಯೇ ಶೇಖರಣೆಯಾಗಿ, ಅಕ್ಕಪಕ್ಕದ ಬಾವಿಗಳಿಗೆ ಪಸರಿಸಿದೆ. ಒಮ್ಮೊಮ್ಮೆ ಪಂಪಿಂಗ್ ಘಟಕ ಸ್ಥಗಿತಗೊಂಡಾಗ ಪಟ್ಟಣದ ಸಂಪೂರ್ಣ ತ್ಯಾಜ್ಯ ನೀರನ್ನು ಅಲ್ಲಿನ ಸರಾಬಿ ನದಿಗೆ ಹರಿಸುವ ಕೆಲಸವೂ ನಡೆದಿದೆ. ಸ್ಥಳೀಯರು ಪ್ರತಿಭಟಿಸಿದ ಬಳಿಕ ನದಿಗೆ ಹರಿಬಿಡುವುದು ನಿಲ್ಲುತ್ತಿದೆ ಎಂಬುದು ಜನರ ದೂರು. ಪುರಸಭೆಯ ಕೊಳಾಯಿ ಗುತ್ತಿಗೆದಾರರು ಮನೆ,

> ಒಳಚರಂಡಿಯ ನೀರು ಚೇಂಬರ್‌ಗಳ ಮೂಲಕ ಸೋರಿಕೆಯಾಗಿ ಅಕ್ಕಪಕ್ಕದ ಬಾವಿಗೆ ನುಗ್ಗುವುದರಿಂದ ನೀರು ಕಲುಷಿತಗೊಳ್ಳುತ್ತಿದೆ. ಪಟ್ಟಣದ ನೂರಾರು ಮನೆಗಳ ಜನರು ಅನಾರೋಗ್ಯಕ್ಕೆ ತುತ್ತಾದ ಘಟನೆಯೂ ನಡೆದಿವೆ. ಶಾಶ್ವತ ಪರಿಹಾರ ಒದಗಿಸುವುದಾಗಿ ನಗರ ನೀರು ಹಾಗೂ ಒಳಚರಂಡಿ ಸರಬರಾಜು ಮಂಡಳಿ ಪಟ್ಟಣದಲ್ಲಿ ಚೇಂಬರ್‌ಗಳನ್ನು ಬದಲಾವಣೆ ಮಾಡಲು ಮುಂದಾಯಿತು. ಚೇಂಬರ್ ಬದಲಿಸಿದ ಬಳಿಕ ಸಮಸ್ಯೆ ಇನ್ನಷ್ಟು ಬಿಗಡಾಯಿಸಿತ -ಸತೀಶಕುಮಾರ ನಾಯ್ಕ.

> ಪುರಸಭೆಗೆ ಅಗತ್ಯ ಇರುವ ಸೀವೇಜ್ ಪಂಪಿಂಗ್ ಯಂತ್ರ ಪೂರೈಸಲು ನಗರ ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿ ಟೆಂಡರ್ ಕರೆದಿದೆ -ವೆಂಕಟೇಶ ನಾವಡ, ಪುರಸಭೆ ಮುಖ್ಯಾಧಿಕಾರಿ

ಹೋಟೆಲ್‌ಗಳ ಒಳಚರಂಡಿ ಸಂಪರ್ಕಕ್ಕೆ ದೊಡ್ಡ ಗಾತ್ರದ ಪೈಪ್ ಅಳವಡಿಸಿದ್ದಾರೆ. ಚೇಂಬರ್ ಕತ್ತರಿಸಲು ಆಧುನಿಕ ಯಂತ್ರ ಬಳಸದೇ, ಭಾರವಾದ ಆಯುಧ ಬಳಸಿದ್ದಾರೆ. ಬಲವಾದ ಹೊಡೆತ ಬೀಸಿದ್ದರಿಂದ ಚೇಂಬರ್‌ಗಳಲ್ಲಿ ಬಿರುಕು ಮೂಡಿರುವುದು ಸೋರಿಕೆ ಹಾಗೂ ನೀರು ಸರಾಗವಾಗಿ ಹರಿಯದಿರಲು ಪ್ರಮುಖ ಕಾರಣವಾಗಿರಬಹುದು ಎಂದೂ ಹೇಳಿದರು. 26 ವರ್ಷಗಳ ಹಿಂದಿನ ಯೋಜನೆ ಭಟ್ಕಳ ಪಟ್ಟಣದಲ್ಲಿ 1999 ರಲ್ಲಿ ಏಷ್ಯಾ ಅಭಿವೃದ್ಧಿ ಬ್ಯಾಂಕ್‌ನ ಹಣಕಾಸಿನ ಯೋಜನೆಯಲ್ಲಿ ಕೆ.ಯು.ಐ.ಡಿ.ಎಫ್.ಸಿ ಸಂಸ್ಥೆಯ ಮೇಲ್ವಿಚಾರಣೆಯಲ್ಲಿ ಒಳಚರಂಡಿ ಕಾಮಗಾರಿ ನಡೆದಿತ್ತು. ಪಟ್ಟಣದ ಗೌಸಿಯಾ ಸ್ಟ್ರೀಟ್‌ನಲ್ಲಿ ತ್ಯಾಜ್ಯ ಪಂಪಿಂಗ್ ಘಟಕ ಹಾಗೂ ವೆಂಕಟಾಪುರದಲ್ಲಿ ತ್ಯಾಜ್ಯ ನೀರು ಸಂಸ್ಕರಣಾ ಘಟಕ ನಿರ್ಮಿಸಲಾಗಿತ್ತು. ಒಳಚರಂಡಿ ಯೋಜನೆ ಜಾರಿಯಾದಾಗ ಪಟ್ಟಣವು ಅಷ್ಟೇನೂ ಅಭಿವೃದ್ಧಿ ಕಂಡಿರಲಿಲ್ಲ. ಈಗ ನಿರೀಕ್ಷೆಗೂ ಮೀರಿ ಬೆಳವಣಿಗೆಯಾಗಿದೆ. ಕಟ್ಟಡಗಳು ಜನಸಂಖ್ಯೆಯೂ ದುಪ್ಪಟ್ಟಾಗಿದೆ. ಹೊಸ ಸಂಪರ್ಕ ನೀಡುವಾಗ ಸರಿಯಾದ ನಿಯಮ ಪಾಲನೆ ಆದಂತೆ ಕಂಡುಬರುತ್ತಿಲ್ಲ ಎನ್ನುತ್ತಾರೆ ಹಿರಿಯರೊಬ್ಬರು. ಯಂತ್ರಗಳೂ ಇಲ್ಲ ಪಟ್ಟಣದಲ್ಲಿ ಒಳಚರಂಡಿ ಚೇಂಬರ್‌ಗಳಲ್ಲಿ ತ್ಯಾಜ್ಯ ತುಂಬಿಕೊಂಡು ನೀರು ಸಾಗದಿದ್ದಾಗ ತಕ್ಷಣ ಸರಿಪಡಿಸಬಹುದಾದ ಅತ್ಯಾಧುನಿಕ ಯಂತ್ರಗಳು ಭಟ್ಕಳ ಪುರಸಭೆಯ ಬಳಿ ಇಲ್ಲ. ಕಬ್ಬಿಣದ ಸರಳು ಹಾಗೂ ಕೋಲನ್ನು ಬಳಸಿ ಚೇಂಬರ್ ಬ್ಲಾಕ್ ಸರಿಪಡಿಸಲಾಗುತ್ತದೆ. ಪೌರಕಾರ್ಮಿಕರು ಚೇಂಬರ್ ಒಳಗಡೆ ಇಳಿಯಬಾರದು ಎನ್ನುವ ನಿಯಮ ಇದ್ದರೂ ಅನಿವಾರ್ಯ ಸಂದರ್ಭದಲ್ಲಿ ಪೌರಕಾರ್ಮಿಕರು ಚೇಂಬರ್ ಮೇಲೆ ನಿಂತು ಕೋಲುಗಳ ಮೂಲಕ ತ್ಯಾಜ್ಯಗಳನ್ನು ಹೊರತೆಗೆಯುವ ಅನಿವಾರ್ಯತೆ ಇದೆ ಎಂದು ಅಧಿಕಾರಿಯೊಬ್ಬರು ಹೇಳಿದರು.

# ಇಸ್ರೇಲ್, ಇರಾನ್ ನಡುವಿನ ವಾರ್ ಎಂಟನೇ ದಿನಕ್ಕೆ ಎಂಟ್ರಿ

## ಮೂಲಗಳ ಪ್ರಕಾರ, ಇನ್ನು ಕೆಲವೇ ದಿನಕ್ಕೆ ಸಾಕಾಗುವಷ್ಟು ಶಸ್ತ್ರಾಸ್ತ್ರ ಇಸ್ರೇಲ್ ಸ್ಟಾಕ್

**ಟೆಹರಾನ್:** ಕಳೆದ ಶುಕ್ರವಾರ ಆರಂಭವಾದ ಇಸ್ರೇಲ್ ಮತ್ತು ಇರಾನ್ ಎರಡು ದೇಶಗಳ ನಡುವಿನ ಯುದ್ಧದ ರೀತಿಯ ಸಂಘರ್ಷ ಎಂಟನೇ ದಿನಕ್ಕೆ ಕಾಲಿಟ್ಟಿದೆ. ಯಾವ ರೀತಿಯಲ್ಲೂ ಸಂಘರ್ಷ ಕಮ್ಮಿಯಾಗುವ ಲಕ್ಷಣಗಳು ಕಾಣುತ್ತಿಲ್ಲ. ಅಮೆರಿಕಾದ ಮಧ್ಯ ಪ್ರವೇಶದ ಸಾಧ್ಯತೆಯೂ ಇನ್ನೂ ಅಡ್ಡಗೋಡೆಯ ಮೇಲೆ ದೀಪ ಇಟ್ಟಂತಿದೆ. ಇನ್ನು, ಮೂಲಗಳ ಪ್ರಕಾರ, ಇಸ್ರೇಲ್ ಶಸ್ತ್ರಾಸ್ತ್ರ ಕೊರತೆಯನ್ನು ಎದುರಿಸುವ ಲಕ್ಷಣಗಳು ಕಾಣುತ್ತಿವೆ ಎಂದು ಹೇಳಲಾಗುತ್ತಿದೆ. ಶುಕ್ರವಾರ ನಸುಕಿನಲ್ಲಿ ಇಸ್ರೇಲ್ ವಾಯುಪಡೆಯ 60 ಮಿಸೈಲ್‌ಗಳು ಇರಾನ್ ದೇಶದ ಮೇಲೆ ದಾಳಿಯನ್ನು ನಡೆಸಿದೆ. ಆದರೆ, ಇರಾನ್ ನಿನ್ನೆ ಟೆಲ್ ಅವೀವ್ ನಲ್ಲಿನ ಪ್ರಮುಖ ಆಸ್ಪತ್ರೆಯ ಮೇಲೆ ನಡೆದ ದಾಳಿಯು, ಜಾಗತಿಕವಾಗಿ ವ್ಯಾಪಕ ಖಂಡನೆಗೆ ಗುರಿಯಾಗಿದೆ. ನಮ್ಮ ಗುರಿ ಆಸ್ಪತ್ರೆ ಆಗಿರಲಿಲ್ಲ ಎಂದು ಇರಾನ್ ಸರ್ಕಾರ ಸ್ಪಷ್ಟನೆ ನೀಡಿದೆ. ಇಸ್ರೇಲ್ ಬೆಂಬಲಿಸ ಬೇಕೋ ಬೇಡವೋ ಎನ್ನುವುದನ್ನು ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಎರಡು ವಾರದೊಳಗೆ ನಿರ್ಧರಿಸುತ್ತಾರೆ ಎಂದು ಅಮೆರಿಕಾ ಸರ್ಕಾರ ಹೇಳಿದೆ.

ಆದರೆ, ಜಗತ್ತಿಗೆ ಅಮೆರಿಕಾದ ನೀತಿಯನ್ನು ನಂಬಲು ಹಿಂದೆ ಮುಂದೆ ನೋಡುವಂತಾಗಿದೆ. ಇರಾನ್ ಕಡೆಯಿಂದ ದಾಳಿಗಳು ತೀವ್ರಗೊಳ್ಳುತ್ತಿರುವ ಹಿನ್ನಲೆಯಲ್ಲಿ, ಇಸ್ರೇಲ್ ಬಳಿ ಇರುವ ಆರೋ ಕ್ಷಿಪಣಿ ಪ್ರತಿರೋಧಕ' ದಾಸ್ತಾನುಗಳು ಕಮ್ಮಿಯಾಗುತ್ತಿದೆ ಎನ್ನುವ ವರದಿಗಳು ಬರುತ್ತಿವೆ. ಇದು ಸಹಜವಾಗಿಯೇ,



**ರಷ್ಯಾ ವಾರ್ನಿಂಗ್ ಬಳಿಕ**

ಇಸ್ರೇಲ್ ದೇಶಕ್ಕೆ ಎದುರಾಗುತ್ತಿರುವ ಆತಂಕವಾಗಿದೆ. ಇಸ್ರೇಲಿನ ನಾಗರೀಕರು ಕೂಡ ಇದರಿಂದ ಭಯಭೀತರಾಗಿದ್ದಾರೆ. ಯಾಕೆಂದರೆ, ಹೌತೀಸ್, ಹಮಾಜ್, ಹಿಜ್ಬುಲ್ಲಾ ಸಂಘಟನೆಗಳಿಂದ ಎದುರಾಗುತ್ತಿದ್ದ ಕ್ಷಿಪಣಿ ದಾಳಿಯನ್ನು ಇಸ್ರೇಲ್, ಐರನ್ ಡೋಮ್ ಕ್ಷಣಾರ್ಧದಲ್ಲಿ ಚಿಂದಿ ಉಡಾಯಿಸುತ್ತಿತ್ತು.

**ಸಂಘರ್ಷದಿಂದ ದೂರವಿರಿ, ಅಮೆರಿಕಾಗೆ ರಷ್ಯಾ ಕೊಟ್ಟ ಎಚ್ಚರಿಕೆ:** ಆದರೆ ಈಗ ಇರಾನ್ ಬಳಸುತ್ತಿರುವ ಖಡಾಂತರ ಕ್ಷಿಪಣಿಗಳನ್ನು ತಡೆಯಲು, ಇಸ್ರೇಲ್ ಏರ್ ಡಿಫೆನ್ಸ್ ಸಿಸ್ಟಂಗೆ ಸಾಧ್ಯವಾಗುತ್ತಿಲ್ಲ ಎನ್ನುವುದು ತಾಜಾ ವರದಿ. ಇದೇ, ಇಸ್ರೇಲ್ ತಲೆಬಿಸಿಗೆ ಕಾರಣವಾಗಿರುವುದು. ಅಮೆರಿಕಾದ ಸಹಾಯದೊಂದಿಗೆ ಇಸ್ರೇಲ್ ತನ್ನ ರಕ್ಷಣಾ ವ್ಯವಸ್ಥೆಯನ್ನು ಬಲಪಡಿಸಿಕೊಳ್ಳುತ್ತಿದ್ದರೂ, ಇಸ್ರೇಲ್ ಮತ್ತು ಇರಾನ್ ನಡುವಿನ ಸಂಘರ್ಷ ಯಾವ ಹಂತಕ್ಕೆ ಹೋಗುತ್ತದೋ ಎನ್ನುವ ಭೀತಿ ಜಗತ್ತಿಗೆ ಎದುರಾಗಿದೆ. ಇದಕ್ಕೆ ಇನ್ನೊಂದು ಕಾರಣ, ರಷ್ಯಾವು ಪರೋಕ್ಷವಾಗಿ ಅಮೆರಿಕಾಗೆ ಕೊಟ್ಟ ಎಚ್ಚರಿಕೆ.

**ಕಮ್ಮಿಯಾಗುತ್ತಿರುವ ಆರೋ ಕ್ಷಿಪಣಿ ಪ್ರತಿರೋಧಕ ದಾಸ್ತಾನು:** ಇರಾನ್ ಕಡೆಯಿಂದ ಬರುವ ಕ್ಷಿಪಣಿಗಳನ್ನು ತಡೆಯಲು ಇಸ್ರೇಲಿಗೆ ಆರೋ ಕ್ಷಿಪಣಿ ಪ್ರತಿರೋಧಕದ ದಾಸ್ತಾನು ಬಹಳಷ್ಟು ಇರಬೇಕಾಗುತ್ತದೆ. ಆದರೆ, ಯುದ್ಧ ಇದೇ ರೀತಿಯಲ್ಲಿ ಮುಂದುವರಿದರೆ, ಮುಂದಿನ ಹತ್ತು ದಿನಗಳಿಗೆ ಆಗುವಷ್ಟು ಸ್ಟಾಕ್ ಮಾತ್ರ ಇಸ್ರೇಲ್ ಸೇನೆಯಲ್ಲಿದೆ ಎಂದು ವರದಿಯಾಗುತ್ತಿದೆ. ಯಾಕೆಂದರೆ, ಇರಾನ್ ಸತತವಾಗಿ ಕ್ಷಿಪಣಿ ದಾಳಿಯನ್ನು ಮುಂದುವರಿಸುತ್ತಲೇ ಇದೆ. ಸದ್ಯ, ಇರಾನ್ ಕಡೆಯಿಂದ ಬರುತ್ತಿರುವ ಎಲ್ಲಾ ಕ್ಷಿಪಣಿಗಳು ಇಸ್ರೇಲ್ ಮೇಲೆ ಬೀಳುತ್ತಿಲ್ಲ. ಆದರೆ, ಇದೇ ರೀತಿ ಇರಾನ್ ದಾಳಿ ಮುಂದುವರಿದರೆ, ದಾಸ್ತಾನು ಖಾಲಿಯಾಗುವ ಭೀತಿ ಇಸ್ರೇಲ್ ದೇಶಕ್ಕೆ ಎದುರಾಗುವ ಸಾಧ್ಯತೆ ದಟ್ಟವಾಗಿದೆ ಎಂದು ವಾಲ್ ಸ್ಟ್ರೀಟ್ ಜರ್ನಲ್ ಪತ್ರಿಕೆ ತನ್ನ ವರದಿಯಲ್ಲಿ ಉಲ್ಲೇಖಿಸಿದೆ.

**ಬೆಳಕಿಗಿಂತ ವೇಗವಾಗಿ ಹಾರುವ ಫತಾಹ್ ಮಿಸೈಲ್** ಇರಾನ್ ಈ ಮಟ್ಟಿನ ಪ್ರತಿರೋಧವನ್ನು ಇಸ್ರೇಲ್ ನಿರೀಕ್ಷಿಸಿತ್ತೋ ಇಲ್ಲವೋ ಒಟ್ಟಿನಲ್ಲಿ 2-3 ದಿನಗಳಿಂದ ಇರಾನ್ ದಾಳಿ ತೀವ್ರಗೊಳ್ಳುತ್ತಿದೆ. ಹಾಗಾಗಿಯೇ, ಪ್ರಮುಖವಾಗಿ ಇಸ್ರೇಲ್ ಸೇನೆಗೆ ಆರೋ ದಾಸ್ತಾನಿನ ಮೇಲೆ ಒತ್ತಡ ಹೆಚ್ಚಾಗುತ್ತಿದೆ. ಇರಾನ್ ದೇಶದ ರೆವಲ್ಯೂಷನರಿ ಗಾರ್ಡ್ ಪ್ರಕಾರ, ಫತಾಹ್ ಕ್ಷಿಪಣಿ ಬೆಳಕಿನ ವೇಗಕ್ಕಿಂತ (ಗಂಟೆಗೆ ಸುಮಾರು 1,600 ಕಿ.ಮೀ ವೇಗ) ಶತ್ರು, ನೆಲದ ಮೇಲೆ ದಾಳಿ ಮಾಡುತ್ತದೆ. ರೆವಲ್ಯೂಷನರಿ ಗಾರ್ಡ್, ಇರಾನ್ ದೇಶದ ಆಯಕಟ್ಟಿನ ರಕ್ಷಣಾ ಸಂಸ್ಥೆಯಾಗಿದೆ. ಇಸ್ರೇಲ್, ಇದರ ಮೇಲೆ ದಾಳಿಯನ್ನು ಮಾಡಿತ್ತು.

### ಇರಾನ್ ಕ್ಷಿಪಣಿಯನ್ನು ಹೊಡೆದುರುಳಿಸಿದ ಇಸ್ರೇಲ್ ಸೇನೆ

**ತಾಜಾ ಮಾಹಿತಿಯ ಪ್ರಕಾರ ಇಸ್ರೇಲ್, ಇರಾನ್ ದೇಶಗಳ ಪರಮಾಣು ಕೇಂದ್ರವನ್ನು ಟಾರ್ಗೆಟ್ ಮಾಡಿ ಹೊಸ ದಾಳಿಯನ್ನು ಆರಂಭಿಸಿದೆ. ಇದರ ಜೊತೆ, ಯುರೇನಿಯಂ ಉತ್ಪಾದನೆಗೆ ಬಳಸುವ ಸೆಂಟ್ರಿಫ್ಯೂಜ್ ಎನ್ನುವ ಉತ್ಪಾದನಾ ಘಟಕದ ಮೇಲೆ ದಾಳಿಯನ್ನು ಮಾಡಲಾಗಿದೆ. ಇದು ಶುಕ್ರವಾರ ನಸುಕಿನಲ್ಲಿ ನಡೆದಂತಹ ದಾಳಿಯಾಗಿದೆ. ಇನ್ನೊಂದು ಕಡೆ, ಇರಾನ್ ಕಡೆಯಿಂದ ಬಂದ ಏಳು ಕ್ಷಿಪಣಿ ದಾಳಿಯನ್ನು ಇಸ್ರೇಲ್, ಯಶಸ್ವಿಯಾಗಿ ಹಿಮ್ಮೆಟ್ಟಿಸಿದೆ. ಆ ಮೂಲಕ, ತನ್ನ ಪ್ರದೇಶವನ್ನು ಇಸ್ರೇಲ್ ರಕ್ಷಿಸಿಕೊಂಡಿದೆ.**

### ಕದನ ವಿರಾಮಕ್ಕೆ ಮುಂದಾಗಬೇಕು

**ಅಮೆರಿಕಾ, ಇಸ್ರೇಲ್ ಸದಾ ಕಾಲ ಕ್ಷಿಪಣಿಯನ್ನು ತಡೆದುಕೊಂಡು ಕೂರಲು ಸಾಧ್ಯವೇ ಎರಡು ದೇಶಗಳು ಈ ಬಗ್ಗೆ ಚಿಂತಿಸಬೇಕಿದೆ. ಎಷ್ಟು ದಿನಾಂತ ಈ ರೀತಿಯ ಸಂಘರ್ಷವನ್ನು ಎದುರಿಸಿಕೊಂಡು ಇರಲು ಸಾಧ್ಯ ಇಸ್ರೇಲಿನ ಸ್ನೇಹಿತರು ಆ ದೇಶಕ್ಕೆ ಬುದ್ದಿಮಾತನ್ನು ಹೇಳಬೇಕು. ಜೊತೆಗೆ, ಇರಾನ್ ದೇಶದ ಜೊತೆ ಮಧ್ಯಸ್ಥಿಕೆ ವಹಿಸಿ ಕದನ ವಿರಾಮಕ್ಕೆ ಮುಂದಾಗಬೇಕು. ಯುದ್ಧ ಎನ್ನುವುದು ಮಕ್ಕಳ ಆಟವಲ್ಲ ಎಂದು ಸೆಂಟರ್ ಫಾರ್ ಸ್ಟ್ರಾಟಜಿಕ್ ಎಂಡ್ ಇಂಟರ್ನ್ಯಾಷನಲ್ ಸ್ಟಡೀಸ್ ಮುಖ್ಯಸ್ಥ ಟಾಮ್ ಕರಾಕೋ ಹೇಳಿಕೆಯನ್ನು ಉಲ್ಲೇಖಿಸಿ, ವಾಷಿಂಗ್ಟನ್ ಪೋಸ್ಟ್ ವರದಿ ಮಾಡಿದೆ.**

---

# ತಾಂತ್ರಿಕ ದೋಷ, ಮಧುರೈಗೆ ಹೋಗುತ್ತಿದ್ದ ವಿಮಾನ ಚೆನ್ನೈನಲ್ಲಿ ಸೇಫ್ ಲ್ಯಾಂಡಿಂಗ್

**ಚೆನ್ನೈ:** ಮಧುರೈಗೆ ಹೋಗುತ್ತಿದ್ದ ಖಾಸಗಿ ವಿಮಾನವೊಂದು ಆಕಾಶದಲ್ಲಿ ತಾಂತ್ರಿಕ ದೋಷ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಮತ್ತೆ ಚೆನ್ನೈ ನಿಲ್ದಾಣಕ್ಕೆ ವಾಪಸ್ಸಾಗಿದೆ. ಮಧುರೈಗೆ ಪ್ರಯಾಣಿಸುತ್ತಿದ್ದ ಖಾಸಗಿ ವಿಮಾನದಲ್ಲಿ ತಾಂತ್ರಿಕ ದೋಷ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ವಿಮಾನ ನಿಲ್ದಾಣಕ್ಕೆ ಸುರಕ್ಷಿತವಾಗಿ ಮರಳಿದೆ ಎಂದು ವಿಮಾನ ನಿಲ್ದಾಣದ ಅಧಿಕಾರಿಗಳು ತಿಳಿಸಿದ್ದಾರೆ. ಸುಮಾರು ಅರ್ಧ ಗಂಟೆ ಹಾರಾಟ ನಡೆಸಿದ ನಂತರ, ಪೈಲಟ್ ಆ ದೋಷವನ್ನು ಪತ್ತೆಹಚ್ಚಿದರು, ಚೆನ್ನೈಗೆ ಹಿಂತಿರುಗಿ ಇಳಿಯಲು ಅನುಮತಿ ಕೋರಿದರು ಎಂದು ಅವರು ಹೇಳಿದರು. ಸುಮಾರು 68 ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ವಿಮಾನವು ನಂತರ ಇಲ್ಲಿ ಸುರಕ್ಷಿತವಾಗಿ ಇಳಿಯಿತು, ಎಲ್ಲಾ ಪ್ರಯಾಣಿಕರನ್ನು ಕೆಳಗಿಳಿಸಲಾಯಿತು ಎಂದು ಅವರು ಹೇಳಿದರು.

# 5 ಕೋಟಿ ಮೌಲ್ಯದ ಡ್ರಗ್ಸ್ ಹೊಂದಿದ್ದ ನೈಜೀರಿಯನ್ ಮಹಿಳೆ ಸೆರೆ

**ಮುಂಬೈ:** ದೆಹಲಿಯಿಂದ ಮುಂಬೈಗೆ ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ನೈಜೀರಿಯಾದ ಮಹಿಳೆಯಿಂದ ಕಂದಾಯ ಗುಪ್ತಚರ ನಿರ್ದೇಶನಾಲಯ ಸುಮಾರು 5 ಕೋಟಿ ರೂ. ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಂಡಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಮೆಥಾಂಫೆಟಮೈನ್ ಮತ್ತು ಎಕ್ಸ್‌ಟಿಸಿ ಮಾದಕ ವಸ್ತುಗಳನ್ನು ಸ್ವೀಕರಿಸಲು ಉದ್ದೇಶಿಸಲಾದ ವ್ಯಕ್ತಿಯನ್ನು ಮುಂದಿನ ಕ್ರಮದಲ್ಲಿ ಬಂಧಿಸಲಾಗಿದೆ ಎಂದು ಅವರು ಹೇಳಿದರು. ನಿಷೇಧಿತ ವಸ್ತುಗಳನ್ನು ಆಹಾರ ಪ್ಯಾಕೆಟ್‌ಗಳು, ಜ್ಯೂಸ್ ಟೆಟ್ರಾ ಪ್ಯಾಕ್‌ಗಳಲ್ಲಿ ಮರೆಮಾಡಲಾಗಿದೆ ಎಂದು ಅಧಿಕಾರಿ ಹೇಳಿದರು. ನಿರ್ದಿಷ್ಟ ಗುಪ್ತಚರ ಮಾಹಿತಿಯ ಮೇರೆಗೆ ಕಾರ್ಯನಿರ್ವಹಿಸಿದ ಡಿಆರ್‌ಐ ಅಧಿಕಾರಿಗಳು ದೆಹಲಿಯಿಂದ ಬರುತ್ತಿದ್ದ ಬಸ್ ಅನ್ನು ಮುಂಬೈ ಬಳಿ ಸುಮಾರು 50 ಕಿ.ಮೀ. ಹಿಂಬಾಲಿಸಿ ಮಹಿಳೆಯನ್ನು ತಡೆದರು.

ಪ್ರಮುಖ ಕಳ್ಳಸಾಗಣೆ ವಿರೋಧಿ ಘಟಕದ ತಂಡವು 2.56 ಕೆಜಿ ಮೆಥಾಂಫೆಟಮೈನ್, 584 ಗ್ರಾಂ ಎಕ್ಸ್ ಟಿಸಿ ಮಾತ್ರೆಗಳನ್ನು ವಶಪಡಿಸಿಕೊಂಡಿದ್ದು, ಒಟ್ಟಾರೆಯಾಗಿ ಸುಮಾರು 5 ಕೋಟಿ ರೂ. ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಂಡಿದೆ ಎಂದು ಅವರು ಹೇಳಿದರು. ಮೆಥಾಂಫೆಟಮೈನ್, ಎಕ್ಸ್‌ಟಿಸಿ ಅವುಗಳ ಉತ್ತೇಜಕ ಪರಿಣಾಮಗಳಿಗಾಗಿ ರೇವ್ ಪಾರ್ಟಿಗಳಲ್ಲಿ ಜನಪ್ರಿಯವಾಗಿವೆ. ನೈಜೀರಿಯಾದ ಪ್ರಜೆಯನ್ನು ಮಾದಕ ದ್ರವ್ಯಗಳು ಮತ್ತು ಮನೋವಿಕೃತ ವಸ್ತುಗಳ ಕಾಯ್ದೆಯಡಿಯಲ್ಲಿ ಬಂಧಿಸಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.

---

## ರೋಡೆಲ್ಲ ಅಟ್ಟಾಡಿಸಿ ಯಾತ್ರಾರ್ಥಿಗಳಿಗೆ ದೊಣ್ಣೆಯಿಂದ ಹಿಗ್ಗಾಮುಗ್ಗ ಹೊಡೆದ ಸಿಬ್ಬಂದಿ


# ಕೇದಾರನಾಥದಲ್ಲಿ ಪಾರ್ಕಿಂಗ್ ವಿಚಾರಕ್ಕೆ ಕ್ಯಾತೆ

**ಡೆಹ್ರಾಡೂನ್:** ಚಾರ್‌ಧಾಮ್ ಯಾತ್ರೆ ಕೈಗೊಳಲ್ಲು ಭಕ್ತಾದಿಗಳು ಕಾಯುತ್ತಿರುತ್ತಾರೆ. 4 ಪುಣ್ಯ ಕ್ಷೇತ್ರಗಳಾದ ಕೇದರನಾಥ, ಬದ್ರಿನಾಥ, ಯಮುನೋತ್ರಿ ಮತ್ತು ಗಂಗೋತ್ರಿ ನೋಡಲು ಹೆಚ್ಚು ಜನರು ಬರುತ್ತಾರೆ. ಇದೊಂದು ಪುಣ್ಯಕ್ಷೇತ್ರ ಎನ್ನುವುದು ಎಲ್ಲರ ನಂಬಿಕೆ. ಸದ್ಯ ಇಲ್ಲೊಂದು ಅಮಾನವೀಯಕರ ಘಟನೆ ನಡೆದಿದೆ. ಹೌದು, ಕೇದಾರನಾಥ ಯಾತ್ರೆಯ ಮಾರ್ಗದ ಸೀತಾಪುರ ಪಾರ್ಕಿಂಗ್ ಪ್ರದೇಶದಲ್ಲಿ ದೊಣ್ಣೆಯಿಂದ ವ್ಯಕ್ತಿ ಒಬ್ಬರು ಕಾರಿನ ಬಳಿ ಇರುವವನೊಬ್ಬನಿಗೆ ಎರ್‍ರಾಬಿರ್‍ರಿ ಬಾರಿಸುತ್ತಿರುವ ವಿಡಿಯೋ ಸದ್ಯ ಎಲ್ಲೆಡೆ ವೈರಲ್ ಆಗಿದೆ. ಸದ್ಯ ಪೊಲೀಸರು ಐದು ಜನರನ್ನು ರುದ್ರಪ್ರಯಾಗ ಪೊಲೀಸರು ಬಂಧಿಸಿ, ಎಫ್‌ಐಆರ್ ದಾಖಲಿಸಿದ್ದಾರೆ. ಅಕ್ರಮವಾಗಿ ಗುಂಪು ಸೇರುವುದು ಮತ್ತು ಗಲಭೆ ನಡೆಸಿದ ಆರೋಪದ ಮೇಲೆ ಪ್ರಕರಣ ದಾಖಲಾಗಿದೆ. ಯಾತ್ರಿಕರು ಮತ್ತು ಪಾರ್ಕಿಂಗ್ ಸಿಬ್ಬಂದಿ ನಡುವೆ ಜಗಳವಾಗಿದೆ. ಜಗಳವು ವಿಕೋಪಕ್ಕೆ ತಿರುಗಿ ಹೊಡೆದಾಟಕ್ಕೆ ಕಾರಣವಾಗಿದೆ. ಈ ಹಿನ್ನೆಲೆಯಲ್ಲಿ ಐವರನ್ನು ಬಂಧಿಸಲಾಗಿದೆ. ದೀಪಕ್ ಚಂದ್ರ (23), ಲಕ್ಷ್ಮಣ್ ಸಿಂಗ್ (32), ರಾಜೇಂದ್ರ ಕೋಹ್ಲಿ (33), ಸುದರ್ಶನ್ ಚಂದ್ರ (28) ಮತ್ತು ದುರ್ಗೇಶ್ (21) ಬಂಧಿತ ಆರೋಪಿಗಳು ಎಂದು ಪೊಲೀಸರು ತಿಳಿಸಿದ್ದಾರೆ.

**ಐವರು ಆರೋಪಿಗಳು ಪೊಲೀಸರ ವಶಕ್ಕೆ:** ಕೇದಾರನಾಥ ಯಾತ್ರೆಯ ಮಾರ್ಗದ ಸೀತಾಪುರ ಪಾರ್ಕಿಂಗ್ ಪ್ರದೇಶದಲ್ಲಿ ಸಿಬ್ಬಂದಿ ಯಾತ್ರಾರ್ಥಿಗಳ ನಡುವೆ ಸಣ್ಣ ಮಾತುಕತೆ ಶುರುವಾಯಿತು. ಆನಂತರ ಅದು ವಾಗ್ವಾದಕ್ಕೆ ತಿರುಗಿ, ಕೈಕೈ ಮಿಲಾಯಿಸುವಷ್ಟು ಗದ್ದಲ ಜೋರಾಯಿತು. ಆ ನಂತರ ಸಿಬ್ಬಂದಿ ಯಾತ್ರಾರ್ಥಿ ಮೇಲೆ ದೊಣ್ಣೆಯಿಂದ ಹಿಗ್ಗಾಮುಗ್ಗಾ ದೇಹವಿಡೀ ಬಗ್ಗಿಸಿ ಥಳಿಸಿದ್ದಾನೆ. ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆದ ವಿಡಿಯೋ ಆಧಾರದ ಮೇಲೆ ಐವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಬೆಳಿಗ್ಗೆ 11 ಗಂಟೆ ಸುಮಾರಿಗೆ ಯಾತ್ರಾರ್ಥಿಗಳು ಮತ್ತು ಪಾರ್ಕಿಂಗ್ ಸಿಬ್ಬಂದಿ ನಡುವೆ ವಾಗ್ವಾದ ನಡೆದಿದೆ. ನಂತರ ದೈಹಿಕವಾಗಿ ಹಲ್ಲೆ ಮಾಡಿದ್ದಾರೆ. ವಿಡಿಯೋದಲ್ಲಿ ದೊಣ್ಣೆಯಿಂದ ಒಡೆದ ಐವರು ಪಾರ್ಕಿಂಗ್ ಗುತ್ತಿಗೆದಾರರನ್ನು ವಶಪಡಿಸಿಕೊಂಡು ವಿಚಾರಣೆ ನಡೆಸಲಾಗುತ್ತಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

**ಆರೋಪಿಗಳ ವಿರುದ್ಧ ಕಠಿಣ ಕ್ರಮ:** ಇಂತಹ ಘಟನೆಗಳನ್ನು ಉದಾಸೀನ ಮಾಡಲು ಸಾಧ್ಯವಿಲ್ಲ. ಆರೋಪಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಚಾರ್ ಧಾಮ್ ಯಾತ್ರೆಗೆ ಬರುವ ಯಾತ್ರಿಕರೊಂದಿಗೆ ಈ ರೀತಿಯ ವರ್ತನೆಯನ್ನು ಯಾವುದೇ ಕಾರಣಕ್ಕೂ ಸಹಿಸಲು ಸಾಧ್ಯವಿಲ್ಲ ಎಂದು ರುದ್ರಪ್ರಯಾಗದ ಎಸ್ಪಿ ಅಕ್ಷಯ್ ಪ್ರಹ್ಲಾದ್ ಕೊಂಡೆ ಹೇಳಿದ್ದಾರೆ.

**ಈ ಘಟನೆಯು ಸದ್ಯ ಯಾತ್ರಾರ್ಥಿಗಳಲ್ಲಿ ಆತಂಕ:** ಕೇದಾರನಾಥ ಯಾತ್ರೆಯು ಶಾಂತಿ, ದರ್ಶನಕ್ಕೆ ಹೆಸರುವಾಸಿಯಾಗಿದೆ. ಈವರೆಗೂ ಈವರೆಗೆ 11 ಲಕ್ಷಕ್ಕೂ ಹೆಚ್ಚು ಯಾತ್ರಿಕರು ಕೇದಾರ ನಾಥಕ್ಕೆ ಭೇಟಿ ನೀಡಿದ್ದಾರೆ. ಚಾರ್ ಧಾಮ್ ಯಾತ್ರೆಯಲ್ಲಿ ಇದು ಅತಿ ಹೆಚ್ಚು. ಆದರೆ, ದೊಣ್ಣೆ ಹಿಡಿದು ಗೂಂಡಾಗಳಂತೆ ವರ್ತಿಸುತ್ತಿರುವುದು ಜನರಲ್ಲಿ ಆತಂಕ ಮೂಡಿಸುವಂತೆ ಮಾಡಿದೆ. ಮುಂದಿನ ದಿನಗಳಲ್ಲಿ ಹೆಚ್ಚು ಜನರು ಯಾತ್ರೆ ಕೈಗೊಳ್ಳುತ್ತಾರೆಯೇ ಎಂಬುದು ಪ್ರಶ್ನಾರ್ಥಕವಾಗಿದೆ. ಹೀಗಾಗಿ, ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಪೊಲೀಸರು ಯಾತ್ರಿಕರಿಗೆ ತೊಂದರೆಯಾಗದಂತೆ ನೋಡಿ ಕೊಳ್ಳಲು ಕ್ರಮ ಕೈಗೊಂಡಿದ್ದಾರೆ.



- ಕೇದರನಾಥ್‌ನಲ್ಲಿ ಪಾರ್ಕಿಂಗ್ ಸಿಬ್ಬಂದಿ ಯಾತ್ರಿಕರ ಮಧ್ಯೆ ಗಲಾಟೆ
- ದಪ್ಪದಾದ ದೊಣ್ಣೆ ಹಿಡಿದು ಹಿಗ್ಗಾಮುಗ್ಗ ಹೊಡೆದ ಸಿಬ್ಬಂದಿ
- ಐವರು ಆರೋಪಿಗಳ ಬಂಧನ, ವಿಚಾರಣೆ ಮುಂದುವರೆಸಿದ ಪೊಲೀಸರು
- ಕೇದರನಾಥದಲ್ಲಿ ಪ್ರವಾಸಿಗರ ಸುರಕ್ಷತೆಗೆ ಹೆಚ್ಚಿನ ಭದ್ರತೆ ನಿಯೋಜನೆ

**ಕೇದಾರನಾಥ ಯಾತ್ರೆಗೆ ಸಾಕಷ್ಟು ಜನರು ಭೇಟಿ ನೀಡುತ್ತಾರೆ. ಶಾಂತಿಗಾಗಿ, ಒತ್ತಡ ಬದುಕಿಂದ ದೂರ ಇರಲು ಭೇಟಿ ನೀಡುವಂತಹ ಈ ಸ್ಥಳಲ್ಲಿ ಯಾತ್ರಾರ್ಥಿಗಳಿಗೆ ಪಾರ್ಕಿಂಗ್ ಸಿಬ್ಬಂದಿ ಯದ್ವಾತದ್ವ ಹೊಡೆದಿರುವ ಘಟನೆ ನಡೆದಿದೆ. ಸದ್ಯ ಈ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದ್ದು, ವಿಡಿಯೋ ಆಧಾರದ ಮೇಲೆ ಐವರನ್ನು ಪೊಲೀಸರು ಬಂಧಿಸಿದ್ದಾರೆ. ಘಟನೆ ನಂತರ ಚಾರ್‌ಧಾಮ್‌ನಲ್ಲಿ ಹೆಚ್ಚಿನ ಪೊಲೀಸರನ್ನು ನಿಯೋಜಿಸಲಾಗಿದ್ದು, ಯಾತ್ರಿಕರಿಗೆ ಯಾವುದೇ ತೊಂದರೆಯಾಗದಂತೆ ನಿಗಾವಹಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.**

---

# ಇರಾನ್ ಮೇಲೆ ದಾಳಿಗೆ 2 ವಾರದ ಡೆಡ್ ಲೈನ್ ನೀಡಿದ ಟ್ರಂಪ್

**ಬೀರ್‌ಶೆಬಾ:** ಟೆಹ್ರಾನ್‌ನ ಪರಮಾಣು ಕಾರ್ಯಕ್ರಮದ ಕುರಿತು ನವೀಕರಿಸಿದ ಮಾತುಕತೆಗಳಿಗೆ ಗಣನೀಯ ಅವಕಾಶ ನೀಡಲಾಗಿದ್ದು, ಇಸ್ರೇಲ್, ಇರಾನ್ ನಡುವಿನ ಸಂಘರ್ಷದಲ್ಲಿ ಅಮೆರಿಕದ ಮಿಲಿಟರಿ ನೇರವಾಗಿ ಭಾಗಿಯಾಗಬೇಕೇ ಎಂದು ಎರಡು ವಾರಗಳಲ್ಲಿ ನಿರ್ಧರಿಸುವುದಾಗಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಏಕೆಂದರೆ ಎರಡೂ ಕಡೆಯವರು ಏಳನೇ ದಿನ ಪರಸ್ಪರ ದಾಳಿ ನಡೆಸಿದ್ದಾರೆ.

ಪರ್ವತದ ಕೆಳಗೆ ಹೂತುಹೋಗಿರುವ, ಅಮೆರಿಕದ ಬಂಕರ್-ಬಸ್ಟರ್ ಬಾಂಬ್‌ಗಳನ್ನು ಹೊರತುಪಡಿಸಿ ಉಳಿದೆಲ್ಲದಕ್ಕೂ ತಲುಪಲು ಸಾಧ್ಯವಿಲ್ಲ ಎಂದು ವ್ಯಾಪಕವಾಗಿ ಪರಿಗಣಿಸಲಾದ ಇರಾನ್‌ನಉತ್ತಮವಾ ರಕ್ಷಿಸಲ್ಪಟ್ಟ ಫೋರ್ಡೊ ಯುರೇನಿಯಂ ಪುಷ್ಟೀಕರಣ ಸೌಲಭ್ಯವನ್ನು ಹೊಡೆದುರುಳಿಸುವ ಮೂಲಕ ಇರಾನ್ ಮೇಲೆ ದಾಳಿ ಮಾಡಬೇಕೆ ಎಂದು ಟ್ರಂಪ್ ನಿರ್ಧರಿಸುತ್ತಿದ್ದಾರೆ ಎಂಬ ಅವರ ಹೇಳಿಕೆಯನ್ನು ಶ್ವೇತಭವನದ ಪತ್ರಿಕಾ ಕಾರ್ಯದರ್ಶಿ ಕ್ಯಾರೋಲಿನ್ ಲೀವಿಟ್ ಓದಿದರು.

ಇರಾನ್ ಕ್ಷಿಪಣಿಗಳು ದಕ್ಷಿಣ ಇಸ್ರೇಲ್‌ನ ಪ್ರಮುಖ ಆಸ್ಪತ್ರೆಗೆ ಡಿಕ್ಕಿ ಹೊಡೆದು ಟೆಲ್ ಅವೀವ್ ಬಳಿಯ ವಸತಿ ಕಟ್ಟಡಗಳನ್ನು ಹೊಡೆದು ಕನಿಷ್ಠ 240 ಜನರು ಗಾಯಗೊಂಡ ನಂತರ, ಇಸ್ರೇಲ್‌ನ ರಕ್ಷಣಾ ಸಚಿವರು ಇರಾನಿನ ಸುಪ್ರೀಂ ನಾಯಕ ಅಯತೊಲ್ಲಾ ಅಲಿ ಖಮೇನಿ ಅವರಿಗೆ ಈ ಬೆದರಿಕೆ ಹಾಕಿದ್ದಾರೆ. ಇಸ್ರೇಲ್‌ನ ಮಿಲಿಟರಿಗೆ ತನ್ನ ಎಲ್ಲಾ ಗುರಿಗಳನ್ನು ಸಾಧಿಸಲು, ಈ ವ್ಯಕ್ತಿ ಅಸ್ತಿತ್ವದಲ್ಲಿರಬಾರದು ಎಂದು ಸೂಚನೆ ನೀಡಲಾಗಿದೆ ಮತ್ತು ತಿಳಿದಿದೆ



ಎಂದು ರಕ್ಷಣಾ ಸಚಿವ ಇಸ್ರೇಲ್ ಕಾಟ್ಜ್ ಹೇಳಿದರು. ಹೊಗೆಯಾಡುತ್ತಿದ್ದ ಆಸ್ಪತ್ರೆಯಿಂದ ರೋಗಿಗಳನ್ನು ರಕ್ಷಣಾ ತಂಡ ಹೊರತರುತ್ತಿದ್ದಂತೆ, ಇಸ್ರೇಲಿ ಯುದ್ಧ ವಿಮಾನಗಳು ಇರಾನ್‌ನ ಪರಮಾಣು ಕಾರ್ಯಕ್ರಮದ ಮೇಲೆ ತಮ್ಮ ಇತ್ತೀಚಿನ ದಾಳಿಯನ್ನು ಪ್ರಾರಂಭಿಸಿದವು. ಪಿಎಂ ಬೆಂಜಮಿನ್ ನೆತನ್ಯಾಹು ಅವರು ಟ್ರಂಪ್ ಅಮೆರಿಕಕ್ಕೆ ಉತ್ತಮವಾದದ್ದನ್ನು ಮಾಡುತ್ತಾರೆ ಎಂದು ನಂಬಿದ್ದರು ಎಂದು ಹೇಳಿದರು. ಬೀರ್‌ಶೆಬಾದ ಸೊರೊಕಾ ವೈದ್ಯಕೀಯ ಕೇಂದ್ರದ ಸುತ್ತಲಿನ ಅವಶೇಷಗಳು ಮತ್ತು ಒಡೆದ ಗಾಜಿನಿಂದ ಮಾತನಾಡುತ್ತಾ, ಅವರು ಹೀಗೆ ಹೇಳಿದರು.

ಮುಂದಿನ ಎರಡು ವಾರಗಳಲ್ಲಿ ರಾಜತಾಂತ್ರಿಕ ಪರಿಹಾರವನ್ನು ಸಾಧಿಸಲು ಒಂದು ಕಿಟಕಿ ಈಗ ಅಸ್ತಿತ್ವದಲ್ಲಿದೆ ಎಂದು ಬ್ರಿಟನ್‌ನ ಡೇವಿಡ್ ಲ್ಯಾಮಿ ನಿನ್ನೆಯ ಸಭೆಯ ನಂತರ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಹೇಳಿದರು. ಇಸ್ರೇಲ್ ಮತ್ತು ಇರಾನ್ ನಡುವಿನ ಮುಕ್ತ ಸಂಘರ್ಷವು ಪರಮಾಣು, ಮಿಲಿಟರಿ ತಾಣಗಳು, ಉನ್ನತ ಜನರಲ್‌ಗಳು ಮತ್ತು ಪರಮಾಣು ವಿಜ್ಞಾನಿಗಳನ್ನು ಗುರಿಯಾಗಿಸಿಕೊಂಡು ಇಸ್ರೇಲ್ ನಡೆಸಿದ ಅನಿರೀಕ್ಷಿತ ವಾಯುದಾಳಿಗಳೊಂದಿಗೆ ಭುಗಿಲೆದ್ದಿತು.ವಾಷಿಂಗ್ಟನ್ ಮೂಲದ ಇರಾನಿನ ಮಾನವ ಹಕ್ಕುಗಳ ಗುಂಪಿನ ಪ್ರಕಾರ, ಇರಾನ್‌ನಲ್ಲಿ 263 ನಾಗರಿಕರು ಸೇರಿದಂತೆ ಕನಿಷ್ಠ 657 ಜನರು ಸಾವನ್ನಪ್ಪಿದ್ದಾರೆ ಮತ್ತು 2,000 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಇಸ್ರೇಲಿ ಸೈನ್ಯದ ಅಂದಾಜಿನ ಪ್ರಕಾರ, ಇರಾನ್ ಇಸ್ರೇಲ್ ಮೇಲೆ 450 ಕ್ಷಿಪಣಿಗಳು, 1,000 ಡ್ರೋನ್‌ಗಳನ್ನು ಹಾರಿಸುವ ಮೂಲಕ ಪ್ರತೀಕಾರ ತೀರಿಸಿಕೊಂಡಿದೆ.

**ಈಗಾಗಲೇ ಬಹಳಷ್ಟು ಸಹಾಯ ಮಾಡುತ್ತಿದ್ದಾರೆ ಎಂದು ನಾನು ನಿಮಗೆ ಹೇಳಬಲ್ಲೆ.ಇರಾನ್‌ನ ವಿದೇಶಾಂಗ ಸಚಿವ ಅಬ್ಬಾಸ್ ಅರಾಘ್ಚಿ ಯುರೋಪಿಯನ್ ಒಕ್ಕೂಟದ ಉನ್ನತ ರಾಜತಾಂತ್ರಿಕರು ಮತ್ತು ಯುನೈಟೆಡ್ ಕಿಂಗ್‌ಡಮ್, ಫ್ರಾನ್ಸ್ ಜರ್ಮನಿಯ ಸಹವರ್ತಿಗಳೊಂದಿಗೆ ಸಭೆ ನಡೆಸಲು ಶುಕ್ರವಾರ ಜಿನೀವಾಕ್ಕೆ ಪ್ರಯಾಣಿಸಲು ಸಿದ್ಧರಾಗುತ್ತಿದ್ದಂತೆ ಹೊಸ ರಾಜತಾಂತ್ರಿಕ ಉಪಕ್ರಮವು ನಡೆಯುತ್ತಿರುವಂತೆ ಕಂಡುಬಂದಿದೆ. ಯುಎಸ್ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ, ರಾಯಭಾರಿ ಸ್ಟೀವ್ ವಿಟ್ಕಾಫ್ ಅವರನ್ನು ಶ್ವೇತಭವನದಲ್ಲಿ ಭೇಟಿಯಾಗಿ ಸಂಘರ್ಷವನ್ನು ತಣ್ಣಗಾಗಿಸುವ ಒಪ್ಪಂದದ ಸಾಧ್ಯತೆಯ ಕುರಿತು ಚರ್ಚಿಸಿರುವುದಾಗಿ ಬ್ರಿಟನ್‌ನ ವಿದೇಶಾಂಗ ಕಾರ್ಯದರ್ಶಿ ಹೇಳಿದರು.**

---

# ಕರ್ನಾಟಕ-ಮಹಾರಾಷ್ಟ್ರ ಗಡಿ ವಿವಾದ ಬಗೆಹರಿಸಲು ಉನ್ನತಾಧಿಕಾರ ಸಮಿತಿ ಪುನರಚಿಸಿದ ಮಹಾ ಸರ್ಕಾರ

**ಮುಂಬೈ:** ಕರ್ನಾಟಕದೊಂದಿಗಿನ ಗಡಿ ವಿವಾದವನ್ನು ಪರಿಹರಿಸಲು ಮಹಾರಾಷ್ಟ್ರ ಸರ್ಕಾರವು ಉನ್ನತಾಧಿಕಾರ ಸಮಿತಿಯನ್ನು ಪುನರಚಿಸಿದೆ. ಗುರುವಾರ ಹೊರಡಿಸಲಾದ ಸರ್ಕಾರಿ ನಿರ್ಣಯದ ಪ್ರಕಾರ, ಗಡಿ ವಿವಾದಕ್ಕೆ ಸಂಬಂಧಿಸಿದ ನಿರ್ಣಾಯಕ ನಿರ್ಧಾರಗಳನ್ನು ಪಕ್ಷಾತೀತ ಮತ್ತು ಪ್ರತಿನಿಧಿ ಸಂಸ್ಥೆಯಿಂದ ಒಮ್ಮತದಿಂದ ತೆಗೆದುಕೊಳ್ಳ ಬೇಕಾಗಿರುವುದರಿಂದ ಸಿಎಂ ದೇವೇಂದ್ರ ಫಡ್ನವೀಸ್ ನೇತೃತ್ವದ ಸಮಿತಿಯನ್ನು ಪುನರಚಿಸಲಾಗಿದೆ. ಕಾಲಕಾಲಕ್ಕೆ, ಹೊಸ ಸರ್ಕಾರಗಳು ಅಧಿಕಾರ ವಹಿಸಿಕೊಂಡಂತೆ ಸಮಿತಿಯನ್ನು ಪುನರಚಿಸಲಾಗುತ್ತಿದೆ.



ಆಗಿನ ಮಹಾಯುತಿ ಮೈತ್ರಿಕೂಟವು ಏಕನಾಥ್ ಶಿಂಧೆ ಅವರನ್ನು ಮುಖ್ಯಮಂತ್ರಿಯಾಗಿ ನೇಮಿಸಿದ ತಿಂಗಳುಗಳ ನಂತರ, ನ. 22, 2022 ರಂದು ಇದೇ ರೀತಿಯ ಕಸರತ್ತು ನಡೆಸಲಾಗಿತ್ತು. ಕಳೆದ ವರ್ಷದ ವಿಧಾನಸಭಾ ಚುನಾವಣೆಯ ನಂತರ ಫಡ್ನವೀಸ್ ಮುಖ್ಯಮಂತ್ರಿಯಾಗಿ ಹೊಸ ಸರ್ಕಾರ ರಚನೆಯಾದ ನಂತರ ಸಮಿತಿಯನ್ನು ಈಗ ಪುನರ್ ರಚಿಸಲಾಗಿದೆ. ಫಡ್ನವೀಸ್ 18 ಸದಸ್ಯರ ಸಮಿತಿಗೆ ನೇತೃತ್ವವಹಿಸಿದ್ದಾರೆ. ಇದರಲ್ಲಿ ಶಿಂಧೆ, ಅಜಿತ್ ಪವಾರ್ ಮತ್ತು ಮಾಜಿ ಸಿಎಂಗಳಾದ ನಾರಾಯಣ್ ರಾಣೆ, ಶರದ್ ಪವಾರ್ ಮತ್ತು ಪೃಥ್ವಿರಾಜ್ ಚವಾಣ್ ಕೂಡ ಸೇರಿದ್ದಾರೆ. ಎನ್‌ಸಿಪಿ (ಎಸ್‌ಪಿ) ಶಾಸಕರಾದ ರೋಹಿತ್ ಪಾಟೀಲ್ ಮತ್ತು ಜಯಂತ್ ಪಾಟೀಲ್, ಸಚಿವರಾದ ಚಂದ್ರಕಾಂತ್ ಪಾಟೀಲ್, ಶಂಭುರಾಜ್ ದೇಸಾಯಿ, ಪ್ರಕಾಶ್ ಅಬಿತ್ತರ್, ಸುರೇಶ್ ಖಾಡೆ, ಬಿಜೆಪಿ ಶಾಸಕರಾದ ಸುಧೀರ್ ಗಾಡ್ಗಿಲ್, ಸಚಿನ್ ಕಲ್ಯಾಣ್ ಶೆಟ್ಟಿ, ವಿಧಾನಸಭೆ ಮತ್ತು ಪರಿಷತ್ತಿನ ವಿರೋಧ ಪಕ್ಷದ ನಾಯಕರು ಸಮಿತಿಯ ಇತರ ಸದಸ್ಯರಲ್ಲಿ ಸೇರಿದ್ದಾರೆ. ಪ್ರಸ್ತುತ ಕರ್ನಾಟಕದಲ್ಲಿರುವ 800 ಕ್ಕೂ ಹೆಚ್ಚು ಮರಾಠಿ ಮಾತನಾಡುವ ಹಳ್ಳಿಗಳ ಮೇಲೆ ಅದು ಹಕ್ಕು ಸಾಧಿಸಿತು. ರಾಜ್ಯಗಳ ಪುನರ್ವಿಂಗಡಣಾ ಕಾಯ್ದೆ ಮತ್ತು 1967 ರ ಮಹಾಜನ್ ಆಯೋಗದ ವರದಿಯ ಪ್ರಕಾರ ಭಾಷಾ ಆಧಾರದ ಮೇಲೆ ಮಾಡಿದ ಗಡಿ ಗುರುತಿಸುವಿಕೆಯನ್ನು ಕರ್ನಾಟಕವು ಅಂತಿಮಗೊಳಿಸಿಕೊಂಡಿದೆ.

### ಸಮಸ್ಯೆ 1957ರ ಹಿಂದಿನದು

**ಮಹಾರಾಷ್ಟ್ರ ವಿಧಾನಸಭೆಯಲ್ಲಿ ಪ್ರಸ್ತುತ ವಿರೋಧ ಪಕ್ಷದ ನಾಯಕರಿಲ್ಲ. ಶಿವಸೇನೆ (ಯುಬಿಟಿ) ಮತ್ತು ಕಾಂಗ್ರೆಸ್ ಶಾಸಕರು ಉನ್ನತ ಅಧಿಕಾರದ ಸಮಿತಿಯಲ್ಲಿ ಸ್ಥಾನ ಪಡೆದಿಲ್ಲ. ಭಾಷಾ ಆಧಾರದ ಮೇಲೆ ರಾಜ್ಯಗಳ ಮರುಸಂಘಟನೆಯ ನಂತರ ಗಡಿ ಸಮಸ್ಯೆ 1957ರ ಹಿಂದಿನದು. ಮಹಾರಾಷ್ಟ್ರವು ಗಣನೀಯ ಪ್ರಮಾಣದಲ್ಲಿ ಮರಾಠಿ ಮಾತನಾಡುವ ಜನಸಂಖ್ಯೆಯನ್ನು ಹೊಂದಿರುವುದರಿಂದ ಹಿಂದಿನ ಬಾಂಬೆ ಪ್ರೆಸಿಡೆನ್ಸಿಯ ಭಾಗವಾಗಿದ್ದ ಬೆಳಗಾವಿಯನ್ನು ಸೇರಿಸಿಕೊಳ್ಳಲು ಪ್ರಯತ್ನಿಸಿತು.**

---

# ವಿಶ್ವಪಾರಂಪರಿಕ ತಾಣದಲ್ಲಿ ಯೋಗಗೆ ಸಿದ್ಧತೆ

**ಜೋಹಾನ್ಸ್‌ಬರ್ಗ್:** ದಕ್ಷಿಣ ಆಫ್ರಿಕಾದಲ್ಲಿನ ಯುನೆಸ್ಕೊ ವಿಶ್ವಪಾರಂಪರಿಕ ತಾಣ ಕ್ರೇಡಲ್ ಆಫ್ ಹ್ಯೂಮನ್‌ಕೈಂಡ್‌ನಲ್ಲಿ ಸಾವಿರಾರು ಜನ ಮತ್ತು ಯೋಗಪಟುಗಳು ಸೇರಿ ಶನಿವಾರ ಅಂತರರಾಷ್ಟ್ರೀಯ ಯೋಗದಿನವನ್ನು ಆಚರಿಸಲಿದ್ದಾರೆ. 11ನೇ ವರ್ಷದ




ಅಂತರರಾಷ್ಟ್ರೀಯ ಯೋಗದಿನದ ಪೂರ್ವಭಾವಿಯಾಗಿ ಪ್ರಿಟೋರಿಯಾದಲ್ಲಿನ ಭಾರತದ ಹೈಕಮಿಷನ್, ಜೋಹಾನ್ಸ್‌ಬರ್ಗ್, ಡರ್ಬನ್‌ನಲ್ಲಿನ ಕಾನ್ಸುಲೇಟ್‌ಗಳು ಹಲವೆಡೆ ಯೋಗ ಕಾರ್ಯಕ್ರಮಗಳನ್ನು ಆಯೋಜಿಸಿದ್ದವು. ಇದರ ಸಮಾರೋಪದ ಭಾಗವಾಗಿ ಕ್ರೇಡಲ್ ಆಫ್ ಹ್ಯೂಮನ್ ಕೈಂಡ್, ದಕ್ಷಿಣ ಆಫ್ರಿಕಾದ ಆಡಳಿತ ಕೇಂದ್ರವಾಗಿರುವ ಯೂನಿಯನ್ ಕಟ್ಟಡ, ಡ್ರಾಕೆನ್ಸ್‌ಬರ್ಗ್ ಬೆಟ್ಟಗಳಲ್ಲಿನ ರಾಯಲ್ ನಟಲ್ ಉದ್ಯಾನ ಸೇರಿದಂತೆ ಪ್ರಮುಖ ಸ್ಥಳಗಳಲ್ಲಿ ಯೋಗ ದಿನವನ್ನು ದೊಡ್ಡ ಮಟ್ಟದಲ್ಲಿ ಆಚರಿಸಲು ಸಿದ್ಧತೆ ನಡೆಸಲಾಗಿದೆ.

ಕ್ರೇಡಲ್ ಆಫ್ ಹ್ಯೂಮನ್‌ಕೈಂಡ್ ಸ್ಥಳವು ಆಳವಾದ ಸಾಂಸ್ಕೃತಿಕ ಮತ್ತು ಮಾನವ ಇತಿಹಾಸದ ಮೌಲ್ಯಗಳನ್ನು ಹೊಂದಿದೆ. ಇಲ್ಲಿ ಯೋಗದಿನವನ್ನು ಆಚರಿಸುವುದರಿಂದ ಭಾರತದ ಪ್ರಾಚೀನ ತತ್ವಶಾಸ್ತ್ರ, ಮಾನವೀಯತೆ, ಪ್ರಕೃತಿ ನಡುವಿನ ಸಂಬಂಧವನ್ನು ಸಾರಿದಂತಾಗುತ್ತದೆ ಎಂದು ಜೋಹಾನ್ಸ್‌ಬರ್ಗ್‌ನಲ್ಲಿರುವ ಕಾನ್ಸುಲ್ ಜನರಲ್ ಮಹೇಶ್ ಕುಮಾರ್ ಅವರು ತಿಳಿಸಿದ್ದಾರೆ. ಮಹಾತ್ಮ ಗಾಂಧಿ ಅವರು ತಂಗಿದ್ದ ಟಾಲ್‌ಸ್ಟಾಯ್ ಫಾರ್ಮ್‌ನಲ್ಲಿ ಭಾರತೀಯ ಯೋಗಪಟುವಿನ ನೇತೃತ್ವದಲ್ಲಿ ಕಳೆದ ವಾರ ದಕ್ಷಿಣ ಆಫ್ರಿಕಾದ ನೂರಾರು ಮಕ್ಕಳು ಯೋಗಾಭ್ಯಾಸ ನಡೆಸಿದ್ದರು.

---

# ಕದನ ವಿರಾಮಕ್ಕೆ ನಾವೇ ಮನವಿ ಮಾಡಿದ್ದು: ಪಾಕಿಸ್ತಾನ ಉಪಪ್ರಧಾನಿ

## ಭಾರತದ ವಾದವನ್ನು ಬಹಿರಂಗವಾಗಿ ಪುಷ್ಠೀಕರಿಸಿದ ಪಾಕಿಸ್ತಾನ ಉಪಪ್ರಧಾನಿ ಇಶಾಕ್ ದಾರ್

**ಇಸ್ಲಾಮಾಬಾದ್:** ಸತ್ಯ ಯಾವತ್ತಿದ್ದರೂ ಸತ್ಯವೇ, ಅದಕ್ಕೆ ಸಾವಿಲ್ಲ ಎಂಬುದು ಅದೆಷ್ಟು ಸತ್ಯ ನೋಡಿ. ಭಾರತ-ಪಾಕಿಸ್ತಾನ ನಡುವೆ ಕದನ ವಿರಾಮ ಒಪ್ಪಂದ ಮಾಡಲು ನಾನೇ ಕಾರಣ ಎನ್ನುತ್ತಿದ್ದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಈ ವಿಚಾರದಲ್ಲಿ ಜಗತ್ತು ಏನೂ ಹೇಳಿದರೂ ಕೇಳಲು ಸಿದ್ಧರಿರಲಿಲ್ಲ. ಡೊನಾಲ್ಡ್ ಟ್ರಂಪ್ ಅವರಿಗೆ ಸತ್ಯದ ದರ್ಶನ ಮಾಡಿಸಲು ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರೇ ಅಖಾಡಕ್ಕೆ ಇಳಿಯಬೇಕಾಯಿತು. ಡೊನಾಲ್ಡ್ ಟ್ರಂಪ್ ಅವರಿಗೆ ನರೇಂದ್ರ ಮೋದಿ ಅವರ ದೂರವಾಣಿ ಕರೆ, ಭಾರತ-ಪಾಕಿಸ್ತಾನ ಕದನ ವಿರಾಮ ಒಪ್ಪಂದದ ಎಲ್ಲಾ ಸತ್ಯ ಸಂಗತಿಗಳನ್ನು ಬಯಲುಗೊಳಿಸಿತ್ತು. ಪ್ರಧಾನಿ ಮೋದಿ ಅವರ ಫೋನ್ ಕಾಲ್‌ನಿಂದ ಮೆತ್ತಗಾದ ಡೊನಾಲ್ಡ್ ಟ್ರಂಪ್, ಭಾರತ ಮತ್ತು ಪಾಕಿಸ್ತಾನ ಕದನ ವಿರಾಮ ಒಪ್ಪಂದ ರೂಪು-ರೇಷೆಗಳನ್ನು ಸಿದ್ಧಪಡಿಸಿದವು ಎಂದು ಹೇಳಿಕೆ ಕೊಟ್ಟರು. ಇದೀಗ ಭಾರತದ ವಾದಕ್ಕೆ ಪೂರಕವಾಗಿ ಪಾಕಿಸ್ತಾನದ ಉಪಪ್ರಧಾನಿ ಹಾಗೂ ವಿದೇಶಾಂಗ ಸಚಿವ ಇಶಾಕ್ ದಾರ್ ಹೇಳಿಕೆಯೊಂದನ್ನು ನೀಡಿದ್ದಾರೆ. ಕಳೆದ ತಿಂಗಳು ಭಾರತವು ನಮ್ಮ ಎರಡು ವಾಯುನೆಲೆಗಳ ಮೇಲೆ ದಾಳಿ ಮಾಡಿದ ಬಳಿಕ, ಆ ದೇಶದೊಂದಿಗೆ ಕದನ ವಿರಾಮ ಒಪ್ಪಂದ ಮಾಡಿಕೊಳ್ಳಲು ಪಾಕಿಸ್ತಾನವೇ ಮೊದಲ ಹೆಜ್ಜೆ ಇಟ್ಟಿತು ಎಂದು ಇಶಾಕ್ ದಾರ್ ಸ್ಪಷ್ಟಪಡಿಸಿದ್ದಾರೆ. ನಾವು ಆರಂಭದಲ್ಲಿ ಅಮೆರಿಕ, ಸೌದಿ ಅರೇಬಿಯಾದ ನೆರವು ಕೋರಿದೆವು. ನೂರ್ ಖಾನ್ ವಾಯುನೆಲೆ ಮೇಲೆ ಭಾರತ ದಾಳಿ ಸೌದಿ ರಾಜಕುಮಾರ್ ಫೈಸಲ್ ನನಗೆ ಕರೆ ಮಾಡಿದರು. ಭಾರತದ ವಿದೇಶಾಂಗ ಸಚಿವ ಡಾ.ಎಸ್. ಜೈಶಂಕರ್ ಅವರೊಂದಿಗೆ ಮಾತನಾಡಿ ಕದನ ವಿರಾಮ ಒಪ್ಪಂದಕ್ಕಾಗಿ ಮನವಿ ಮಾಡಿಕೊಳ್ಳಲೇ ಎಂದು ಅವರು ನನ್ನನ್ನು ಕೇಳಿದರು. ನಾನು ಕೂಡಲೇ ಅವರಿಗೆ ಹೀಗೆ ಮಾಡುವಂತೆ ಮನವಿ ಮಾಡಿಕೊಂಡೆ ಎಂದು ಇಶಾಕ್ ದಾರ್ ಪಿನ್ ಟು ಪಿನ್ ಮಾಹಿತಿ ನೀಡಿದ್ದಾರೆ. ಏಪ್ರಿಲ್ 22ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ 26 ಪ್ರವಾಸಿಗರನ್ನು ಬಲಿ ತೆಗೆದುಕೊಂಡ ದಾಳಿಗೆ ಪ್ರತಿಯಾಗಿ, ಮೇ 7, 8ರ ಮಧ್ಯರಾತ್ರಿ ಭಾರತವು ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆಯನ್ನು ಆರಂಭಿಸಿತ್ತು. ಈ ದಾಳಿಯಲ್ಲಿ ಭಾರತವು ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರ ದಲ್ಲಿರುವ, ಒಂಬತ್ತು ಭಯೋತ್ಪಾದಕ ನೆಲೆಗಳ ಮೂಲಸೌಕರ್ಯಗಳನ್ನು ನಾಶಪಡಿಸಿತ್ತು. ಆದರೆ ತದನಂತರ ಪಾಕಿಸ್ತಾನದ ಕೋರಿಕೆಯ ಮೇರೆಗೆ ಭಾರತವು ಕದನ ವಿರಾಮ ಒಪ್ಪಂದಕ್ಕೆ ರಾಜಿಯಾಯಿತು. ಒಟ್ಟಿನಲ್ಲಿ ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ಸಂದರ್ಭದಲ್ಲಿ ಪಾಕಿಸ್ತಾನವೇ ಮೊದಲು ಕದನ ವಿರಾಮಕ್ಕೆ ಮನವಿ ಮಾಡಿತು ಎಂಬ ಭಾರತದ ವಾದವನ್ನು, ಖುದ್ದು ಪಾಕಿಸ್ತಾನದ ಪ್ರಧಾನಿ ಮತ್ತು ವಿದೇಶಾಂಗ ಸಚಿವ ಇಶಾಕ್ ದಾರ್ ಬಹಿರಂಗವಾಗಿ ಒಪ್ಪಿಕೊಂಡಿರುವುದು ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿದೆ.

**ಕದನ ವಿರಾಮ ಒಪ್ಪಂದಕ್ಕೆ ರಾಜಿ**




**ಭಾರತ, ಪಾಕಿಸ್ತಾನದ ನಡುವೆ ಕದನ ವಿರಾಮ ಒಪ್ಪಂದ ಮಾಡುವಲ್ಲಿ ತಮ್ಮ ಪಾತ್ರವಿದೆ ಎಂದು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರತಿಪಾದಿಸಿದರು. ಆದರೆ ಭಾರತ ಇದನ್ನು ತಿರಸ್ಕರಿಸಿದ್ದಲ್ಲದೇ, ಪಾಕಿಸ್ತಾನವೇ ಮೊದಲು ಕದನ ವಿರಾಮಕ್ಕೆ ಮನವಿ ಮಾಡಿತು ಎಂದು ಸ್ಪಷ್ಟಪಡಿಸಿತು. ಅಲ್ಲದೇ ಜಮ್ಮು ಮತ್ತು ಕಾಶ್ಮೀರ ವಿವಾದಕ್ಕೆ ಸಂಬಂಧಿಸಿದಂತೆ ನಾವು ಎಂದಿಗೂ ಮೂರನೇ ಶಕ್ತಿಯ ಮಧ್ಯಸ್ಥಿಕೆಯನ್ನು ಒಪ್ಪಿಕೊಳ್ಳುವುದಿಲ್ಲ ಎಂದು ಭಾರತ ಮತ್ತೊಮ್ಮೆ ಪುನರುಚ್ಚಿಸಿತು.**

**ಪಾಕಿಸ್ತಾನದ ಖಾಸಗಿ ಮಾಧ್ಯಮವೊಂದಕ್ಕೆ ಸಂದರ್ಶನ ನೀಡಿರುವ ಇಶಾಕ್ ದಾರ್, ರಾವಲ್ಪಿಂಡಿಯಲ್ಲಿರುವ ನೂರ್ ಖಾನ್ ವಾಯುನೆಲೆ ಮತ್ತು ಪಂಜಾಬ್ ಪ್ರಾಂತ್ಯದಲ್ಲಿರುವ ರಫೀಕಿ ಎಂದು ಕರೆಯಲ್ಪಡುವ ಶೋರ್ಕೋಟ್ ವಾಯುನೆಲೆ ಮೇಲೆ ಭಾರತ ದಾಳಿ ಮಾಡಿದ ಬಳಿಕ, ನಾವು ಕದನ ವಿರಾಮ ಒಪ್ಪಂದಕ್ಕಾಗಿ ಮನವಿ ಮಾಡಿದೆವು ಎಂದು ಸ್ಪಷ್ಟವಾದ ನುಡಿಗಳಲ್ಲಿ ಹೇಳಿದ್ದಾರೆ.**

---

## ಮಿನಿ ನ್ಯೂಸ್

# ರಾಷ್ಟ್ರಪತಿ ದ್ರೌಪದಿ ಮುರ್ಮು ಜನ್ಮದಿನಕ್ಕೆ ಗಣ್ಯರಿಂದ ಶುಭಾಷಯ

**ನವದೆಹಲಿ:** ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ 67ನೇ ಹುಟ್ಟುಹಬ್ಬಕ್ಕೆ ಪ್ರಧಾನಿ ನರೇಂದ್ರ ಮೋದಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ನಾಡಿನ ಹಲವಾರು ಗಣ್ಯರು ಶುಭ ಕೋರಿದ್ದಾರೆ.ಮುರ್ಮು ಅವರ ಜೀವನ ಮತ್ತು ನಾಯಕತ್ವವು ದೇಶಾದ್ಯಂತ ಕೋಟ್ಯಂತರ ಜನರಿಗೆ ಸ್ಫೂರ್ತಿ ನೀಡುತ್ತಲೇ ಇದೆ ಎಂದು ಮೋದಿ ಎಕ್ಸ್ ಮಾಡಿದ್ದಾರೆ. ರಾಷ್ಟ್ರಪತಿ ಜಿ ಅವರಿಗೆ ಹೃತ್ಪೂರ್ವಕ ಹುಟ್ಟುಹಬ್ಬದ ಶುಭಾಶಯಗಳು. ಅವರ ಜೀವನ, ನಾಯಕತ್ವವು ದೇಶಾದ್ಯಂತ ಕೋಟ್ಯಂತರ ಜನರಿಗೆ ಸ್ಫೂರ್ತಿ ನೀಡುತ್ತಲೇ ಇದೆ. ಸಾರ್ವಜನಿಕ ಸೇವೆ, ಸಾಮಾಜಿಕ ನ್ಯಾಯ, ಸಮಗ್ರ ಅಭಿವೃದ್ಧಿಗೆ ಅವರ ಅಚಲ ಬದ್ಧತೆ ಎಲ್ಲರಿಗೂ ಭರವಸೆ, ಶಕ್ತಿಯ ದಾರಿದೀಪವಾಗಿದೆ ಎಂದು ಮೋದಿ ಎಕ್ಸ್‌ನಲ್ಲಿ ತಿಳಿಸಿದ್ದಾರೆ. ಅವರು ಯಾವಾಗಲೂ ಬಡವರು ಮತ್ತು ದೀನದಲಿತರ ಸಬಲೀಕರಣಕ್ಕಾಗಿ ಕೆಲಸ ಮಾಡಿದ್ದಾರೆ. ಜನರ ಸೇವೆಯಲ್ಲಿ ಅವರಿಗೆ ದೀರ್ಘ ಮತ್ತು ಆರೋಗ್ಯಕರ ಜೀವನ ಸಿಗಲಿ ಎಂದು ಅವರು ಹೇಳಿದರು.



ಮುರ್ಮು ಭಾರತದ ಮೊದಲ ಬುಡಕಟ್ಟು ಅಧ್ಯಕ್ಷರಾಗಿದ್ದಾರೆ, 2022ರಲ್ಲಿ ಅಧಿಕಾರ ವಹಿಸಿಕೊಂಡರು.ಅದೇ ರೀತಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ಪಶ್ಚಿಮ ಬಂಗಾಳ ಸಿಎಂ ಮಮತಾ ಬ್ಯಾನರ್ಜಿ ಸೇರಿದಂತೆ ಹಲವಾರು ಗಣ್ಯರು ರಾಷ್ಟ್ರಪತಿಗಳಿಗೆ ಹುಟ್ಟು ಹಬ್ಬದ ಶುಭಾಷಯ ಕೋರಿದ್ದಾರೆ.

# ಪುರಿ ಜಗನ್ನಾಥ ದರ್ಶನಕ್ಕಾಗಿ ಟ್ರಂಪ್ ಆಹ್ವಾನ ನಿರಾಕರಿಸಿದೆ: ಮೋದಿ

**ಭುವನೇಶ್ವರ:** ಪುರಿಯಲ್ಲಿರುವ ಭಗವಾನ್ ಜಗನ್ನಾಥನ ದರ್ಶನಕ್ಕಾಗಿ ವಾಷಿಂಗ್ಟನ್‌ಗೆ ಭೇಟಿ ನೀಡುವಂತೆ ಅಧ್ಯಕ್ಷ ಟ್ರಂಪ್ ಅವರ ಆಹ್ವಾನವನ್ನು ನಿರಾಕರಿಸಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಶುಕ್ರವಾರ ಹೇಳಿದ್ದಾರೆ. ಭುವನೇಶ್ವರದಲ್ಲಿ ಆಯೋಜನೆಗೊಂಡಿದ್ದ ರ್‍ಯಾಲಿ ಉದ್ದೇಶಿಸಿ ಮಾತನಾಡಿದ ಅವರು, ಕೆನಡಾದಲ್ಲಿ ಆಯೋಜನೆಗೊಂಡಿದ್ದ ಜಿ7 ಶೃಂಗದಲ್ಲಿ ಪಾಲ್ಗೊಂಡಿದ್ದೆ. ಅಲ್ಲಿ ಭೇಟಿಯಾಗಿದ್ದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ನನ್ನನ್ನು ವಾಷಿಂಗ್ಟನ್‌ಗೆ ಆಹ್ವಾನಿಸಿ, ಔತಣ ಕೂಟದಲ್ಲಿ ಪಾಲ್ಗೊಳ್ಳುವಂತೆ ಕೋರಿದರು ಎಂದಿದ್ದಾರೆ. ಅವರ ಆಹ್ವಾನಕ್ಕೆ ಧನ್ಯವಾದ ತಿಳಿಸಿದ ನಾನು, ಒಡಿಶಾದಲ್ಲಿರುವ ಭಗವಾನ್ ಜಗನ್ನಾಥನ ದರ್ಶನಕ್ಕೆ ಹೋಗಲೇ ಬೇಕಿರುವುದರಿಂದ ತಮ್ಮ ಆಹ್ವಾನ ನಿರಾಕರಿಸುತ್ತಿರುವುದಾಗಿ ತಿಳಿಸಿದೆ ಎಂದಿದ್ದಾರೆ. ಒಡಿಶಾದಲ್ಲಿ ರಚನೆಯಾಗಿರುವ ಬಿಜೆಪಿ ಸರ್ಕಾರದ ಮೊದಲ ವಾರ್ಷಿಕೋತ್ಸವದಲ್ಲಿ ಪಾಲ್ಗೊಂಡಿರುವ ಪ್ರಧಾನಿ ಮೋದಿ ಅವರು 18,600 ಕೋಟಿಯ ಹಲವು ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡಿದ್ದಾರೆ.

# ಅಪರಿಚಿತರ ಗುಂಡಿನ ಚಕಮಕಿ ಕುಕಿ ಸಮುದಾಯದ ಮಹಿಳೆ ಸಾವು

**ಇಂಫಾಲ:** ಮಣಿಪುರದ ಚುರಚಂದ್‌ಪುರದಲ್ಲಿ ಭದ್ರತಾ ಪಡೆ ಮತ್ತು ಶಸ್ತ್ರಸಜ್ಜಿತ ಗುಂಪಿನ ನಡುವಿನ ಗುಂಡಿನ ಚಕಮಕಿಯಲ್ಲಿ ಕುಕಿ ಸಮುದಾಯದ ಮಹಿಳೆ ಮೃತಪಟ್ಟಿದ್ದಾರೆ. ಬಿಷ್ಣುಪುರದ ಕಣಿವೆ ಜಿಲ್ಲೆಯ ಹೊಲದಲ್ಲಿ ಕೆಲಸ ಮಾಡುತ್ತಿದ್ದಾಗ ಮೈತೆಯಿ ರೈತನೊಬ್ಬ ಗುಂಡೇಟಿನಿಂದ ಗಾಯಗೊಂಡ ನಂತರ ಭದ್ರತಾ ಪಡೆ ಶೋಧ ಕಾರ್ಯಾಚರಣೆ ಆರಂಭಿಸಿದ್ದರು. ಕಾರ್ಯಾಚರಣೆಯ ಸಮಯದಲ್ಲಿ ಭದ್ರತಾ ಪಡೆಗಳ ಮೇಲೆ ಅಪರಿಚಿತ ಶಸ್ತ್ರಸಜ್ಜಿತ ಗುಂಪು ಗುಂಡಿನ ದಾಳಿ ನಡೆಸಿತ್ತು. ಇದಕ್ಕೆ ಪ್ರತಿಯಾಗಿ ಭದ್ರತಾ ಪಡೆ ಗುಂಡಿನ ದಾಳಿ ನಡೆಸಿತ್ತು. ಈ ವೇಳೆ ಮಹಿಳೆಗೆ ಗುಂಡು ತಾಗಿ ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಮೃತ ಮಹಿಳೆಯನ್ನು ಲಾಂಗ್‌ಚಿಂಗ್ ಮನ್ಸಿ ಎನ್ನುವ ಗ್ರಾಮದ ಮುಖ್ಯಸ್ಥನ ಪತ್ನಿ ಎಂದು ಗುರುತಿಸಲಾಗಿದೆ. ಸ್ಥಳದಲ್ಲಿ ಕಾರ್ಯಾಚರಣೆ ಮುಂದುವರಿದಿದೆ. ಆರೋಪಿಗಳನ್ನು ಸೆರೆ ಹಿಡಿಯಲು ಎಲ್ಲಾ ಪ್ರಯತ್ನಗಳನ್ನು ಮಾಡಲಾಗುತ್ತಿದೆ. ಸಾರ್ವಜನಿಕರು ಶಾಂತಿಯನ್ನು ಕಾಪಾಡಬೇಕು, ಸುಳ್ಳು ಸುದ್ದಿಗಳ ಪ್ರಸಾರವನ್ನು ತಡೆಯಬೇಕು ಎಂದು ಪೊಲೀಸರು ಒತ್ತಾಯಿಸಿದ್ದಾರೆ.

# ಭಾರಿ ಮಳೆ: ಅಪಾಯದ ಮಟ್ಟ ಮೀರಿ ಹರಿಯುತ್ತಿರುವ ನದಿಗಳು

**ಮುಂಬೈ:** ಮಹಾರಾಷ್ಟ್ರದಲ್ಲಿ ಭಾರಿ ಮಳೆಯಾಗುತ್ತಿದ್ದು, ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿವೆ. ಮುನ್ನೆಚ್ಚರಿಕೆ ನೀಡಿರುವ ಭಾರತೀಯ ಹವಾಮಾನ ಇಲಾಖೆ, ನಾಸಿಕ್, ಪುಣೆಯಲ್ಲಿ ರೆಡ್ ಅಲರ್ಟ್ ಘೋಷಣೆ ಮಾಡಿದೆ. ಠಾಣೆ, ರಾಯ್‌ಗಢ, ಮುಂಬೈ, ರತ್ನಗಿರಿ ಸೇರಿದಂತೆ ಸತಾರಾ ಘಾಟ್ ಜಿಲ್ಲೆಗಳಲ್ಲಿ ಆರೆಂಜ್ ಅಲರ್ಟ್ ಘೋಷಿಸಿದೆ. ಅಂಬಾ, ಕುಂಡಲಿಕಾ, ಪಾತಾಳಗಂಗಾ, ಜಗ್ಬುಡಿ ಸೇರಿದಂತೆ ಹಲವು ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿದೆ. ರಾಯ್‌ಗಢ ಸೇರಿ ಹಲವೆಡೆ ಶಾಲಾ ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಈಗಾಗಲೇ ನದಿಪಾತ್ರದಲ್ಲಿನ ಮನೆಗಳಿಗೆ ನೀರು ನುಗ್ಗಿದ್ದು, ಪ್ರವಾಹದ ಸ್ಥಿತಿ ಎದುರಾಗಿದೆ. ರತ್ನಗಿರಿ ಜಿಲ್ಲೆಯ ಹಲವೆಡೆ ಭೂಕುಸಿತ ಸಂಭವಿಸಿದ್ದು, ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ. ಮಹಾರಾಷ್ಟ್ರ ವಿಪತ್ತು ನಿರ್ವಹಣಾ ಪಡೆಯ ಪ್ರಕಾರ 24 ಗಂಟೆಯಲ್ಲಿ ಮುಂಬೈನಲ್ಲಿ ಅತಿ ಹೆಚ್ಚು 142.6 ಮಿಲಿ ಮೀಟರ್ ಮಳೆಯಾಗಿದೆ. ರಾಯ್‌ಗಢದಲ್ಲಿ 134.1 ಎಂಎಂ, ಪಲ್ಘಾರ್‌ನಲ್ಲಿ 120.9 ಎಂಎಂ, ಠಾಣೆಯಲ್ಲಿ 90.3 ಎಂಎಂ ಮಳೆಯಾಗಿದೆ.

